04 February 2026 Wednesday SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

ಭಾವನಾಂತರಂಗ

ನಮ್ಮ ಬದುಕಿನಲ್ಲಿ ನಿಷ್ಠೆ ಉಳ್ಳವರು
ಸುಲಭಕ್ಕೆ ಸಿಗರು, ಸಿಕ್ಕಾಗ
ಕಳೆದುಕೊಳ್ಳುವುದು ನಮ್ಮ ಮೂರ್ಖತನ!
-ಸ್ನೇಹಾ ಆನಂದ್

info.varthaman@gmail.com


ಚಾಮರಾಜನಗರಕ್ಕೆ ಆಹಾರ ಆಯೋಗದ ಅಧ್ಯಕ್ಷರ ಭೇಟಿ — ಪುಟ ಸಂ. 2


15 ದಿನದಲ್ಲಿ ಕಬ್ಬಿನ ಬಾಕಿಗೆ ಕ್ರಮ: ಡಿಸಿ ಜಿ.ಲಕ್ಷ್ಮೀಕಾಂತರೆಡ್ಡಿ ಹೇಳಿಕೆ — ಪುಟ ಸಂ. 3


ಶೂನ್ಯ ತ್ಯಾಜ್ಯ ರಾಮನಗರಕ್ಕೆ ಸಂಕಲ್ಪ: ನಗರಸಭಾಧ್ಯಕ್ಷ ಕೆ.ಶೇಷಾದ್ರಿ — ಪುಟ ಸಂ. 4

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 90 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# ಜಿ ರಾಮ್ ಜಿ ವಿರುದ್ಧ ನಿರ್ಣಯ

## ಕೇಂದ್ರ ಸರ್ಕಾರದ ಕಾಯ್ದೆ ವಿರೋಧಿಸಿ ಸಿಎಂ ಸಿದ್ದರಾಮಯ್ಯ ನಿರ್ಣಯ ಮಂಡನೆ



**ಬೆಂಗಳೂರು:** ಕೇಂದ್ರ ಸರ್ಕಾರ ಜಾರಿಗೆ ತಂದಿರುವ ವಿಬಿ–ಜಿ ರಾಮ್ ಜಿ ಕಾಯ್ದೆಯನ್ನು ರದ್ದುಗೊಳಿಸುವಂತೆ ಮತ್ತು ಯುಪಿಎ ಯುಗದ ಮನರೇಗಾವನ್ನು ಮರು ಜಾರಿಗೊಳಿಸಬೇಕು ಎಂದು ರಾಜ್ಯ ಸರ್ಕಾರ ಮಂಗಳವಾರ ವಿಧಾನ ಸಭೆಯಲ್ಲಿ ನಿರ್ಣಯ ಮಂಡಿಸಿತು.

ವಿರೋಧ ಪಕ್ಷ ಬಿಜೆಪಿಯ ತೀವ್ರ ವಿರೋಧದ ನಡುವೆಯೂ ಮಂಗಳವಾರ ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮನರೇಗಾ ಬದಲಾಗಿ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ವಿಬಿ–ಜಿ ರಾಮ್ ಜಿ ಕಾಯ್ದೆ ವಿರುದ್ಧ ನಿರ್ಣಯ ಮಂಡಿಸಿದರು.ಕರ್ನಾಟಕದ ಗ್ರಾಮೀಣ ಜನರ ಬದುಕುವ ಹಕ್ಕನ್ನು ರಕ್ಷಿಸುವ ದೃಷ್ಟಿಯಿಂದ ಈ ಸದನವು ಕೇಂದ್ರ ಸರ್ಕಾರವನ್ನು ತಕ್ಷಣವೇ ರೋಜ್‌ಗಾರ್ ಮತ್ತು ಅಜೀವಿಕಾ ಮಿಷನ್ (ಗ್ರಾಮೀಣ) (ವಿಬಿ–ಗ್ರಾಮ್–ಜಿ) ಕಾಯ್ದೆಯನ್ನು ರದ್ದುಗೊಳಿ ಸುವಂತೆ ಎಂದು ಸಿದ್ದರಾಮಯ್ಯ ಒತ್ತಾಯಿಸಿದರು.



ಸಂವಿಧಾನದ ಒಕ್ಕೂಟ ತತ್ವಕ್ಕೆ ವಿಬಿ–ಜಿ ರಾಮ್ ಜಿ ಕಾಯ್ದೆ ವಿರುದ್ಧವಾಗಿದೆ. ರಾಜ್ಯ ಖಜಾನೆಗೆ ತೀವ್ರ ಹೊರೆಯಾಗಿದೆ. ವಿಕೇಂದ್ರೀಕರಣದ ತತ್ವಕ್ಕೆ ವಿರುದ್ಧವಾಗಿದೆ. ಗ್ರಾಮ ಪಂಚಾಯತ್‌ಗಳ ಅಧಿಕಾರ ಮತ್ತು ಹಕ್ಕುಗಳನ್ನು ಕಸಿದುಕೊಂಡಿದೆ. ಹೀಗಾಗಿ ಈ ಕಾಯ್ದೆಯನ್ನು ತಕ್ಷಣವೇ ರದ್ದುಗೊಳಿಸಬೇಕು ಎಂದು ಮುಖ್ಯಮಂತ್ರಿ ಆಗ್ರಹಿಸಿದರು.

ಗ್ರಾಮೀಣ ಆಸ್ತಿ ಸೃಜನೆಗೆ ಮತ್ತು ಬಡವರ ಸ್ವಾವಲಂಬನೆಗೆ ಕಾರಣವಾಗಿದ್ದ ಮನರೇಗಾ ಕಾಯ್ದೆಯನ್ನು ಈ ಹಿಂದಿನಂತೆ ಅದರ ಮೂಲ ಸ್ವರೂಪದಲ್ಲಿಯೇ ಮರುಸ್ಥಾಪಿಸಬೇಕು. ಭಾರತೀಯ ಪ್ರಜಾಪ್ರಭುತ್ವದ ಆಧಾರಸ್ತಂಭವಾಗಿರುವ ಪಂಚಾಯತ್ ರಾಜ್ ವ್ಯವಸ್ಥೆ ಮತ್ತು ಅಧಿಕಾರ ವಿಕೇಂದ್ರೀಕರಣದ ತತ್ವಗಳಿಗೆ ವಿಧಾನಸಭೆಯು ತನ್ನ ಸಂಪೂರ್ಣ ಬದ್ಧತೆಯನ್ನು ಪುನರುಚ್ಚರಿಸುತ್ತದೆ ಎಂದು ಸಿದ್ದರಾಮಯ್ಯ ಹೇಳಿದರು. ಗ್ರಾಮೀಣ ಬಡವರಿಗೆ ಸಂಜೀವಿನಿ ಆಗಿದ್ದ ಮತ್ತು ಗ್ರಾಮೀಣ ಜೀವನದ ಅವಿಭಾಜ್ಯ ಅಂಗವಾಗಿದ್ದ ಮನ್ರೇಗಾ ರದ್ದತಿಯನ್ನು ಈ ಸದನವು ಗಂಭೀರವಾಗಿ ಪರಿಗಣಿಸುತ್ತದೆ. ಈ ಸದನವು ಕೇಂದ್ರದ ಈ ಕ್ರಮವನ್ನು ಬಲವಾಗಿ ವಿರೋಧಿಸುತ್ತದೆ ಎಂದು ನಿರ್ಣಯ ಮಂಡಿಸಿದರು. ವಿರೋಧ ಪಕ್ಷದ ನಾಯಕ ಆರ್.ಅಶೋಕ್ ನೇತೃತ್ವದ ಬಿಜೆಪಿ ಸದಸ್ಯರು ತಕ್ಷಣ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಆದರೂ, ಮುಖ್ಯಮಂತ್ರಿ ಸಿದ್ದರಾಮಯ್ಯ ನಿರ್ಣಯವನ್ನು ಓದುವುದನ್ನು ಮುಂದುವರೆಸಿದರು, ನಿರ್ಣಯದ ಮೇಲಿನ ಚರ್ಚೆಯ

ಪುಟ 2ಕ್ಕೆ

### ವಿಪಕ್ಷಗಳ ವಿರೋಧ, ಗದ್ದಲ

**ಬೆಂಗಳೂರು:** ವಿಧಾನಸಭೆಯಲ್ಲಿ ವಿಬಿ–ಜಿ ರಾಮ್ ಜಿ ಕಾಯ್ದೆ ವಿಚಾರ ಆಡಳಿತ ಮತ್ತು ವಿಪಕ್ಷಗಳ ನಡುವೆ ಮಂಗಳವಾರ ಗದ್ದಲಕ್ಕೆ ಕಾರಣವಾಯಿತು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಬಿ–ಜಿರಾಮ್‌ಜಿ ಕಾಯ್ದೆ ವಿರೋಧಿಸಿ ನಿರ್ಣಯ ಮಂಡನೆ ವೇಳೆ ವಿಪಕ್ಷ ಸದಸ್ಯರು ತೀವ್ರವಾಗಿ ಖಂಡಿಸಿದ್ದರಿಂದ ಸದನದಲ್ಲಿ ತೀವ್ರ ಗದ್ದಲ, ವಾಕ್ಸಮರ ನಡೆಯಿತು.

ಸರ್ಕಾರದ ನಿರ್ಣಯ ಓದಿದ ಸಿಎಂ, ಈ ಮೂಲಕ ಸದನ ವಿಬಿ–ಜಿ ರಾಮ್ ಜಿ ಕಾಯ್ದೆಯನ್ನು ವಿರೋಧಿಸಿ ಈ ಸದನ ನಿರ್ಣಯ ಅಂಗೀಕರಿಸುತ್ತದೆ ಎಂದು ಗದ್ದಲದ ಮಧ್ಯೆಯೇ ನಿರ್ಣಯ ಓದಿದರು. ಆಗ ಈ ಸದನ ಅಲ್ಲ ನಿಮ್ಮ ಸರ್ಕಾರ ವಿರೋಧಿಸುತ್ತದೆ ಅಂತ ಹೇಳಿ ಎಂದು ಅಶೋಕ್ ಒತ್ತಾಯಿಸಿದರು. ಆಗ ಈ ಸದನ ಈ ಸದನ ಅಂತ ಒತ್ತಿ ಹೇಳಿದ ಸಿದ್ದರಾಮಯ್ಯ ವಿಪಕ್ಷಗಳಿಗೆ ಟಾಂಗ್ ಕೊಟ್ಟರು. ಇದಕ್ಕೆ ಸರ್ಕಾರ ಸರ್ಕಾರ ಈ ಸದನ ಅಲ್ಲ ಅಂತ ವಿಪಕ್ಷ ಸದಸ್ಯರು ಟಕ್ಕರ್ ಕೊಟ್ಟರು.

ವಿಪಕ್ಷಗಳಿಂದ ಸರ್ಕಾರದ ವಿರುದ್ಧ ಧಿಕ್ಕಾರ ಘೋಷಣೆ ಮುಂದುವರೆಯಿತು. ಆರ್.ಬಿ ತಿಮ್ಮಾಪೂರ ರಾಜೀನಾಮೆ ಕೊಡಬೇಕೆಂದು ಪಟ್ಟು ಹಿಡಿದು ಸಿಎಂ ನಿರ್ಣಯ

ಪುಟ 2ಕ್ಕೆ

# ಅಬಕಾರಿ ಸಚಿವ ತಿಮ್ಮಾಪುರ ತಲೆದಂಡಕ್ಕೆ ಬಿಜೆಪಿ ಪಟ್ಟು

* ಭ್ರಷ್ಟಾಚಾರ ಪ್ರಕರಣದ ತನಿಖೆಗೆ ಆರ್.ಅಶೋಕ್ ಆಗ್ರಹ

**ಬೆಂಗಳೂರು:** ಅಬಕಾರಿ ಇಲಾಖೆ ಭ್ರಷ್ಟಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವ ಆರ್.ಬಿ.ತಿಮ್ಮಾಪುರ ತಲೆದಂಡಕ್ಕೆ ಬಿಜೆಪಿ ಪಟ್ಟು ಹಿಡಿದಿದೆ.

ವಿಧಾನಸಭೆಯಲ್ಲಿ ಮಂಗಳವಾರ ಅಬಕಾರಿ ಅಕ್ರಮ ಆರೋಪ ಕುರಿತು ನಿಯಮ 69 ರಡಿ ಚರ್ಚಿಸಿದ ವಿಪಕ್ಷ ನಾಯಕ ಆರ್. ಅಶೋಕ್ ಅವರು, ಭ್ರಷ್ಟಾಚಾರ ಪ್ರಕರಣದ ಸೂಕ್ತ ತನಿಖೆ ನಡೆಸಬೇಕು. ಸಚಿವ ಆರ್.ಬಿ ತಿಮ್ಮಾಪೂರ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.



ಈ ವೇಳೆ ಕಲಾಪದಲ್ಲಿ ಆಡಳಿತ ವಿಪಕ್ಷಗಳ ನಡುವೆ ತೀವ್ರ ವಾಕ್ಸಮರ ನಡೆಯಿತು. ಸದನದಲ್ಲಿ ಭಾರೀ ಕೋಲಾಹಲ ಉಂಟಾಯಿತು.

ಅಬಕಾರಿ ಅಕ್ರಮ ಸಂಬಂಧ ಆಡಿಯೋ ವೈರಲ್ ಆಗಿದೆ. ಆಡಿಯೋದಲ್ಲಿ ಸನ್ನದು ಬೇಕಾದರೆ ಸಚಿವರು ಅಥವಾ ಅವರ ಮಗನನ್ನು ಸಂಪರ್ಕ ಮಾಡಬೇಕೆಂದು ಹೇಳಿದೆ. ಈ ಆಡಿಯೋ ಇರುವ ಪೆನ್‌ಡ್ರೈವ್ ನನ್ನ ಬಳಿ ಇದೆ ಎಂದು ಆರ್.ಅಶೋಕ್ ಸದನದಲ್ಲಿ ಪೆನ್‌ಡ್ರೈವ್ ಪ್ರದರ್ಶಿಸಿದರು.

ಈ ಬಗ್ಗೆ ಕೆಲವು ದಾಖಲೆಗಳನ್ನ ತೋರಿಸಿದ ಅಶೋಕ್, ಅಬಕಾರಿ ಇಲಾಖೆಯಲ್ಲಿ ಅಧಿಕಾರಿಗಳ ಲೂಟಿ ಬಗ್ಗೆ ವಿವರಿಸಿದರು. ಈ ಬಗ್ಗೆ ತನಿಖೆ ನಡೆಸಬೇಕು. ಅಲ್ಲದೆ, ತನಿಖಾ ವರದಿ ಬರುವ ವರೆಗೂ ಸಚಿವ ತಿಮ್ಮಾಪೂರ

### ತಡವಾಗಿ ಬರುವ ಪೊಲೀಸ್: ಸಿದ್ದು ಕಾಲೆಳೆದ ಅಶೋಕ್

ವಿಪಕ್ಷನಾಯಕ ಆರ್.ಅಶೋಕ್ ಮಾತನಾಡುವಾಗ ಸಿಎಂ ಸಿದ್ದರಾಮಯ್ಯ ಸದನಕ್ಕೆ ಆಗಮಿಸಿದರು. ಈ ವೇಳೆ ಸಿದ್ದರಾಮಯ್ಯ ಕಾಲೆಳೆದ ಅಶೋಕ್, ಸಿನಿಮಾದಲ್ಲಿ ಪೊಲೀಸರು ಕೊನೆಗೆ ಬರ್ತಾರೆ. ಹಾಗೆ ಸಿದ್ದರಾಮಯ್ಯ ಅವರು ಈಗ ಬಂದಿದ್ದಾರೆ. ಕೊನೆಗೆ ಬಂದು ಕಳ್ಳರ ಬಂಧನ ಮಾಡುತ್ತಾರೆ. ಹಾಗೆಯೇ ಸಿಎಂ ಅಬಕಾರಿ ಸಚಿವರ ಬಂಧನ ಮಾಡ್ತಾರಾ ನೋಡೋಣ ಎಂದು ಲೇವಡಿ ಮಾಡಿದರು.

ಅಬಕಾರಿ ಇಲಾಖೆಯಲ್ಲಿ ಕಿಕ್ ಲೆವೆಲ್ ಜಾಸ್ತಿಯಾಗಿದೆ ಕಾಸಿಗಾಗಿ ಪೋಸ್ಟಿಂಗ್ ನಡೆಯುತ್ತಿದೆ. ನಿಷ್ಕ್ರಿಯ ಪರವಾನಗಿಗೆ ಜೀವ ಕೊಡಲಾಗ್ತಿದೆ. ಹೊಸ ರೀತಿಯ ಭ್ರಷ್ಟಾಚಾರ ನಡೆಯುತ್ತಿದೆ. ಆದರೆ, ಸಿದ್ದರಾಮಯ್ಯ ಮೌನ ಮೂರ್ತಿ ಆಗಿದ್ದಾರೆ. ಅಬಕಾರಿ ಹಗರಣದ ಬಗ್ಗೆ ಚಕಾರ ಎತ್ತುತ್ತಿಲ್ಲ ಎಂದು ಅಶೋಕ್ ವಾಗ್ದಾಳಿ ನಡೆಸಿದರು.

ಲೂಟಿ ನಡೆದರೂ ಅಧಿಕಾರಿಗಳ ಆಡಿಯೋ ಸುಳ್ಳು ಅಂತಾರೆ. ಹಾಗಾದರೆ ಆಡಿಯೋ ಫೋರೆನ್ಸಿಕ್ ಲ್ಯಾಬ್‌ಗೆ ಯಾಕೆ ಕಳಿಸಿಲ್ಲ. ಇಲಾಖೆ ಲೂಟಿ

## ಎಂಎಲ್ಸಿ ನಜೀರ್ ಅಮಾನತಿಗೆ ಆಗ್ರಹ: ಅಧ್ಯಕ್ಷ ಹೊರಟ್ಟಿಗೆ ಬಿಜೆಪಿ ದೂರು

**ಬೆಂಗಳೂರು:** ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ ಆರೋಪದ ಮೇಲೆ ಕಾಂಗ್ರೆಸ್ ಎಂಎಲ್‌ಸಿ ನಜೀರ್ ಅಹ್ಮದ್ ಅವರನ್ನು ತಕ್ಷಣವೇ ಸದನದಿಂದ ಅಮಾನತುಗೊಳಿಸಬೇಕೆಂದು ಒತ್ತಾಯಿಸಿ ವಿರೋಧ ಪಕ್ಷ ಬಿಜೆಪಿ ಕರ್ನಾಟಕ ವಿಧಾನ ಪರಿಷತ್ತಿನ ಅಧ್ಯಕ್ಷ ಬಸವರಾಜ ಹೊರಟ್ಟಿ ಅವರಿಗೆ ದೂರು ನೀಡಿದೆ. ನಜೀರ್ ಅಹ್ಮದ್ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಯೂ ಆಗಿದ್ದಾರೆ.



ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ನೇತೃತ್ವದ ಬಿಜೆಪಿ ನಾಯಕರ ನಿಯೋಗ ಹೊರಟ್ಟಿ ಅವರನ್ನು ಭೇಟಿ ಮಾಡಿ ದೂರು ಸಲ್ಲಿಸಿತು. ಪ್ರಧಾನಿ ಮೋದಿ ಅವರ ವಿರುದ್ಧ ಕಾಂಗ್ರೆಸ್ ಎಂಎಲ್‌ಸಿ ನಜೀರ್ ಅಹ್ಮದ್ ಅವರು ಅವಹೇಳನಕಾರಿ ಪದಗಳನ್ನು ಬಳಸಿರುವುದು ಕೀಳು ಮಟ್ಟದ ರಾಜಕೀಯಕ್ಕೆ ಉದಾಹರಣೆಯಾಗಿದೆ ಎಂದು ನಾರಾಯಣಸ್ವಾಮಿ ಪೋಸ್ಟ್ ಮಾಡಿದ್ದಾರೆ.

ವಿಧಾನ ಪರಿಷತ್ತಿನ ಕಲಾಪದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ವಿರುದ್ಧ ಅತ್ಯಂತ ಕೀಳುಮಟ್ಟದ ಅವಹೇಳನಕಾರಿ ಪದಗಳನ್ನು ಬಳಸಿದ್ದಕ್ಕಾಗಿ ನಜೀರ್ ಅಹ್ಮದ್ ಅವರನ್ನು ತಕ್ಷಣವೇ ಸದನದಿಂದ ಅಮಾನತುಗೊಳಿಸಬೇಕೆಂದು ಒತ್ತಾಯಿಸಿ ಅಧ್ಯಕ್ಷರಿಗೆ ದೂರು ಸಲ್ಲಿಸಲಾಗಿದೆ ಎಂದು ಅವರು ಹೇಳಿದರು.

ಪುಟ 2ಕ್ಕೆ

## ಗುತ್ತಿಗೆದಾರರ ಸಂಘದ ಗೌರವ ಅಧ್ಯಕ್ಷ ಜಗನ್ನಾಥ್ ಅಮಾನತು

**ಬೆಂಗಳೂರು:** ಗುತ್ತಿಗೆದಾರರಿಂದ ಕಮಿಷನ್ ಪಡೆದ ಗುತ್ತಿಗೆದಾರರ ಸಂಘದ ಗೌರವ ಅಧ್ಯಕ್ಷ ಜಗನ್ನಾಥ್ ಶೇಗಜಿ ಮತ್ತು ನಿರ್ದೇಶಕ ಚಿಂಚಳಿ ಅವರನ್ನು ಅಮಾನತು ಮಾಡಲಾಗಿದೆ. ಸಣ್ಣ ಗುತ್ತಿಗೆದಾರರಿಂದ ಶೇ.3ವರೆಗೆ ಕಮಿಷನ್ ಕೇಳುವ ಆಡಿಯೋ ವೈರಲ್ ಆದ ಬೆನ್ನಲ್ಲೇ ಗುತ್ತಿಗೆದಾರರ ಸಂಘದ ಅಧ್ಯಕ್ಷರು ಅಮಾನತು ಮಾಡಿದ್ದಾರೆ.




ಗುತ್ತಿಗೆದಾರರ ಸಂಘದ

ಪುಟ 2ಕ್ಕೆ


## ಕುಡಿದು ಹೆಂಡತಿ ತಲೆ ಬೋಳಿಸಿದ!

**ಬಾಗಲಕೋಟೆ:** ಕುಡಿದ ಮತ್ತಿನಲ್ಲಿ ವ್ಯಕ್ತಿಯೊಬ್ಬ ತನ್ನ ಪತ್ನಿಯ ತಲೆ ಬೋಳಿಸಿರುವ ಘಟನೆ ಜಮಖಂಡಿ ತಾಲ್ಲೂಕಿನ ತೊದಲಬಾಗಿ ಗ್ರಾಮದಲ್ಲಿ ನಡೆದಿದೆ. ಉಮೇಶ್ ಕೊಟ್ಟಲಗಿ ತನ್ನ ಪತ್ನಿಯ ತಲೆ ಬೋಳಿಸಿದ ವ್ಯಕ್ತಿ. ಆರೋಪಿಯನ್ನು ಸಾವಳಗಿ ಪೊಲೀಸರು ಬಂಧಿಸಿದ್ದಾರೆ. ತನ್ನ ಪತ್ನಿ ನಡತೆ ಮೇಲೆ ಸಂಶಯ ವ್ಯಕ್ತಪಡಿಸಿ ಕಬ್ಬು ಕಡಿಯುವ ಕೊಯ್ತಾ ತೋರಿಸಿ ಬೆದರಿಕೆ ಹಾಕಿದ್ದ. ಬಳಿಕ ತಲೆ ಬೋಳಿಸಿ ವಿಕೃತಿ ಮೆರೆದಿದ್ದಾನೆ.



## ಸಿ.ಜೆ.ರಾಯ್ ಆತ್ಮಹತ್ಯೆ: ಎಸ್ಐಟಿ ತನಿಖೆ ಚುರುಕು

**ಬೆಂಗಳೂರು:** ಕಾನ್ಫಿಡೆಂಟ್ ಗ್ರೂಪ್ ಮುಖ್ಯಸ್ಥ ಸಿಜೆ ರಾಯ್ ಆತ್ಮಹತ್ಯೆ ಪ್ರಕರಣದಲ್ಲಿ ವಿಶೇಷ ತನಿಖಾ ತಂಡದ ತನಿಖೆ ಚುರು ಕುಗೊಂಡಿದೆ. ರಿಚ್ಮಂಡ್ ಸರ್ಕಲ್‌ನ ಲ್ಯಾಂಗ್‌ಫೋರ್ಡ್ ರಸ್ತೆಯಲ್ಲಿರುವ ಕಾನ್ಫಿಡೆಂಟ್ ಗ್ರೂಪ್ ಕಚೇರಿಯಲ್ಲಿ ಅಧಿಕಾರಿಗಳು ಅಪಾರ ಪ್ರಮಾಣದ ದಾಖಲೆಯನ್ನು ಸಂಗ್ರಹಿಸಿದ್ದಾರೆ. ಯಾವುದೇ ವ್ಯವಹಾರ ಮಾಡಿದರೂ ಅದನ್ನು ಕೈಯಲ್ಲಿ ಬರೆದಿಟ್ಟುಕೊಳ್ಳುವ ಹವ್ಯಾಸ ರೂಢಿಸಿ ಕೊಂಡಿದ್ದರು.



ಇಂದಿನ ವ್ಯವಹಾರ, ಯಾರನ್ನು ಭೇಟಿ ಮಾಡಬೇಕು. ಎಲ್ಲಿಗೆ ಹೋಗ ಬೇಕು ಎಲ್ಲವನ್ನೂ ಕೈ ಬರಹದಲ್ಲೇ

ಪುಟ 2ಕ್ಕೆ

# ಪ್ರಧಾನಿ ಮೋದಿ ಅವಹೇಳನ: ಮೇಲ್ಮನೆಯಲ್ಲೂ ಕೋಲಾಹಲ

## ಪ್ರಧಾನಿ ವಿರುದ್ಧ ನಜೀರ್ ಅಹ್ಮದ್ ಹೇಳಿಕೆ | ಬಾವಿಗಿಳಿದು ವಿಪಕ್ಷಗಳ ಪ್ರತಿಭಟನೆ

**ಬೆಂಗಳೂರು:** ವಿಧಾನ ಪರಿಷತ್ತಿನಲ್ಲಿ ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಕಾಂಗ್ರೆಸ್ ಎಂಎಲ್‌ಸಿ ನಜೀರ್ ಅಹ್ಮದ್ ನೀಡಿದ ಅವಹೇಳನಕಾರಿ ಹೇಳಿಕೆ ಕೋಲಾಹಲಕ್ಕೆ ಕಾರಣವಾಯಿತು.

ವಿಧಾನ ಪರಿಷತ್ತಿನಲ್ಲಿ ಮಂಗಳವಾರ ನಜೀರ್ ಅಹ್ಮದ್ ಅವರು ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ನೀಡಿದರು. ಇದರಿಂದ ಕೆರಳಿದ ಬಿಜೆಪಿ ಸದಸ್ಯರು, ಸದನದ ಬಾವಿಗಿಳಿದು ಪ್ರತಿಭಟನೆ ನಡೆಸಿ, ಆಕ್ರೋಶ ಹೊರಹಾಕಿದರು. ನಜೀರ್ ಅಹ್ಮದ್ ಬೇಷರತ್ ಕ್ಷಮೆಯಾಚಿಸಬೇಕು ಎಂದು ಪಟ್ಟು ಹಿಡಿದರು.



ಮಂಗಳವಾರ ಕೂಡ ಬಿಜೆಪಿ ಸದಸ್ಯರು ಸದನದ ಬಾವಿಗೆ ಇಳಿದು ನಜೀರ್ ಅಹ್ಮದ್ ವಿರುದ್ಧ ಘೋಷಣೆಗಳನ್ನು ಕೂಗಿದರು. ಸಭಾಪತಿ ಬಸವರಾಜ ಹೊರಟ್ಟಿ ಕೂಡ ನಜೀರ್ ಅಹ್ಮದ್ ಬೇಷರತ್ ಕ್ಷಮೆಯಾಚಿಸಬೇಕು ಎಂದು ಸೂಚಿಸಿದರು.

ಮಹಾತ್ಮ ಗಾಂಧಿ ನಿಜವಾದ ವಿಶ್ವ ಗುರು ಎಂದು ನಂಬುವುದರಿಂದ ಪ್ರಧಾನಿ ನರೇಂದ್ರ ಮೋದಿ ಅವರನ್ನು 'ವಿಶ್ವ ಗುರು' ಎಂದು ಕರೆಯುವುದನ್ನು ವಿರೋಧಿಸಿರುವುದಾಗಿ ಎಂಎಲ್‌ಸಿ ನಜೀರ್ ಅಹ್ಮದ್ ಹೇಳಿದರು. ತಮ್ಮ ಹೇಳಿಕೆಗಳಿಗಾಗಿ ಶಾಸಕಾಂಗದಿಂದ ಅಮಾನತುಗೊಳ್ಳಲು ಸಿದ್ಧವಾಗಿದ್ದು, ಕ್ಷಮೆ ಕೇಳುವ ಪ್ರಶ್ನೆಯೇ ಇಲ್ಲ ಎಂದರು. ಇದರಿಂದ ಗದ್ದಲ ಮತ್ತಷ್ಟು ಹೆಚ್ಚಾದಾಗ, ಸಭಾಪತಿ ಬಸವರಾಜ ಹೊರಟ್ಟಿ ಕಲಾಪವನ್ನು ಮುಂದೂಡಿದರು.

ರಾಜ್ಯಪಾಲರ ಭಾಷಣದ ಮೇಲಿನ ಚರ್ಚೆಗೆ ಸಿಎಂ ಸಿದ್ದರಾಮಯ್ಯ ಉತ್ತರಿಸುತ್ತಿದ್ದ ವೇಳೆ ಕಾಂಗ್ರೆಸ್ ಪರಿಷತ್ ಸದಸ್ಯ ನಜೀರ್ ಅಹ್ಮದ್ ಅವರು ಪ್ರಧಾನಿ

ಪುಟ 2ಕ್ಕೆ

## ಕುಸಿದುಬಿದ್ದ ಕಾಗೋಡು ತಿಮ್ಮಪ್ಪ



**ಶಿವಮೊಗ್ಗ:** ಸಾಗರ ಮಾರಿಕಾಂಬ ದೇವಿ ಜಾತ್ರೆಯ ಹಿನ್ನೆಲೆಯಲ್ಲಿ ಮಂಗಳವಾರ ದೇವಿಯ ದರ್ಶನಕ್ಕೆ ತೆರಳಿದ್ದ ಹಿರಿಯ ರಾಜಕಾರಣ ಕಾಗೋಡು ತಿಮ್ಮಪ್ಪ ಅವರು ಕುಸಿದು ಬಿದ್ದಿದ್ದಾರೆ. ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ಮಾರಿಕಾಂಬ ದೇವಿಯ ದರ್ಶನಕ್ಕೆ ತೆರಳಿದ್ದರು. ಈ ವೇಳೆ ತೀವ್ರ ಉಸಿರಾಟ ಹಾಗೂ ಮಧುಮೇಹ ಸಮಸ್ಯೆಯಿಂದ ಕುಸಿದು ಬಿದ್ದಿದ್ದಾರೆ. ಕೂಡಲೇ ಸ್ಥಳೀಯ ಸರ್ಕಾರಿ ಆಸ್ಪತ್ರೆಗೆ

ಪುಟ 2ಕ್ಕೆ

## ಗೌಪ್ಯತೆ ಪಾಲಿಸದಿದ್ದರೆ ದೇಶ ಬಿಟ್ಟು ಹೊರಡಿ: ಮೆಟಾಗೆ ಸುಪ್ರೀಂ ಎಚ್ಚರಿಕೆ

**ನವದೆಹಲಿ:** ದೇಶದ ಗೌಪ್ಯತೆ ನಿಯಮಗಳನ್ನ ಪಾಲಿಸಲು ಸಾಧ್ಯವಾಗದಿದ್ದರೆ ದೇಶ ಬಿಟ್ಟು ತೊಲಗಿ ಎಂದು ವಾಟ್ಸಪ್ ಒಡೆತನದ ಮೆಟಾ ಸಂಸ್ಥೆಗೆ ಸುಪ್ರೀಂ ಕೋರ್ಟ್ ಖಡಕ್ ಎಚ್ಚರಿಕೆ ನೀಡಿದೆ.

ಗೌಪ್ಯತೆ ಉಲ್ಲಂಘನೆ ಆರೋಪ ಕೇಳಿಬಂದ ಹಿನ್ನೆಲೆ ಸುಪ್ರೀಂ ಕೋರ್ಟ್ ಈ ಎಚ್ಚರಿಕೆ ನೀಡಿದೆ. ಮೆಟಾ ಒಡೆತದ ವಾಟ್ಸಪ್ ವಿಶ್ವದ ಜನಪ್ರಿಯ ಮೆಸೆಂಜರ್ ಅಪ್ಲಿಕೇಶನ್ ಆಗಿದೆ. ಆದರೆ, ಮೆಟಾ ಸಂಸ್ಥೆಯು ಉದ್ದೇಶಿತ ಜಾಹೀರಾತಿಗಾಗಿ ಬಳಕೆದಾರರ ಖಾಸಗಿ ಡೇಟಾವನ್ನ ಹಂಚಿಕೊಳ್ಳುತ್ತಿದೆ ಎನ್ನುವ ಆರೋಪ ಕೇಳಿಬಂದ ಹಿನ್ನೆಲೆ ಸುಪ್ರೀಂ ಕೋರ್ಟ್ ದೇಶ ತೊರೆಯುವಂತೆ ಎಚ್ಚರಿಕೆ ಕೊಟ್ಟಿದೆ.

ವಾಟ್ಸಪ್‌ನ 2021ರ ಗೌಪ್ಯತೆ ನೀತಿಗೆ ಸಂಬಂಧಿಸಿದ ಅರ್ಜಿ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಅವರ ನೇತೃತ್ವದ ತ್ರಿಸದಸ್ಯ ಪೀಠವು, ಪ್ಲಾಟ್‌ಫಾರ್ಮ್‌ನಲ್ಲಿ ಗೌಪ್ಯತೆ ದುರುಪಯೋಗಕ್ಕಾಗಿ ಭಾರತದ ಸ್ಪರ್ಧಾ ಆಯೋಗವು ವಿಧಿಸಿದ್ದ 213 ಕೋಟಿ ರೂ. ದಂಡವನ್ನ ಎತ್ತಿಹಿಡಿದಿದೆ.




ಪುಟ 2ಕ್ಕೆ

### ಅಮೆರಿಕದೊಂದಿಗಿನ ವ್ಯಾಪಾರ ಒಪ್ಪಂದ ಶ್ಲಾಘಿಸಿದ ಪಿಯೂಷ್ ಗೋಯಲ್

## ಭಾರತದ ಉಜ್ವಲ ಭವಿಷ್ಯಕ್ಕೆ ಇದು ಶುಭ ಸೂಚನೆ

**ನವದೆಹಲಿ:** ಭಾರತ–ಅಮೆರಿಕ ವ್ಯಾಪಾರ ಒಪ್ಪಂದವನ್ನು ಶ್ಲಾಘಿಸಿದ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರು, ಇದು "ಭಾರತದ ಉಜ್ವಲ ಭವಿಷ್ಯಕ್ಕೆ ಶುಭ ಸೂಚನೆ" ಎಂದು ಮಂಗಳವಾರ ಹೇಳಿದ್ದಾರೆ.



ಭಾರತ ಮತ್ತು ಅಮೆರಿಕ ನಡುವಿನ ಈ ಒಪ್ಪಂದವು ಬಡವರು, ಮೀನುಗಾರರು, ರೈತರು ಮತ್ತು ಯುವಕರಿಗೆ ವಿಶಾಲ ಅವಕಾಶಗಳನ್ನು ಒದಗಿಸುತ್ತದೆ ಎಂದು ಅವರು ತಿಳಿಸಿದ್ದಾರೆ.

ಪುಟ 2ಕ್ಕೆ


## ಪ್ರತಿಪಕ್ಷಗಳ 8 ಸಂಸದರ ಅಮಾನತು

### ಸ್ಪೀಕರ್ ಪೀಠದ ಮೇಲೆ ಕಾಗದ ಹರಿದು ತೂರಾಡಿದ ಸದಸ್ಯರು

**ನವದೆಹಲಿ:** ಲೋಕಸಭೆಯಲ್ಲಿ ಸ್ಪೀಕರ್ ಪೀಠದ ಮೇಲೆ ಕಾಗದ ಹರಿದು ಎಸೆದ 8 ಮಂದಿ ಸಂಸದರನ್ನ ಇಡೀ ಬಜೆಟ್ ಅಧಿವೇಶನದಿಂದಲೇ ಅಮಾನತು ಮಾಡಲಾಯಿತು.

ವಿಪಕ್ಷಗಳ ಸಂಸದರಾದ ಮಾಣಿಕ್ಕಂ ಟ್ಯಾಗೋರ್, ಗುರ್ಜೀತ್ ಸಿಂಗ್ ಔಜ್ಲಾ, ಅಮರಿಂದರ್ ಸಿಂಗ್ ರಾಜಾ ವಾರಿಂಗ್, ಕಿರಣ್ ಕುಮಾರ್ ರೆಡ್ಡಿ, ಎಸ್ ವೆಂಕಟೇಶನ್, ಹಿಬಿ ಈಡನ್, ಡೀನ್ ಕುರಿಯಾಕೋಸ್ ಮತ್ತು ಪ್ರಶಾಂತ್ ಪಡೋಲೆ ಅವರನ್ನು ಸ್ಪೀಕರ್ ಅಮಾನತು ಮಾಡಿದರು. ಈ ಪೈಕಿ 7 ಮಂದಿ ಕಾಂಗ್ರೆಸ್ ಸದಸ್ಯರು. ವೆಂಕಟೇಸನ್ ಸಿಪಿಎಂ ಸಂಸದರು.

ಕಲಾಪ ಮಂಗಳವಾರ ಮಧ್ಯಾಹ್ನ 3 ಗಂಟೆ ಹೊತ್ತಿಗೆ ಪುನಾರಂಭವಾದಾಗ ಸಭಾಪತಿಗಳು ಸ್ಪೀಕರ್ ಪೀಠದ ಮೇಲೆ ಕಾಗದ ಎಸೆದ ಸಂಸದರ ಹೆಸರುಗಳನ್ನು ಪ್ರಸ್ತಾಪಿಸಿದರು. ನಂತರ ಅಧಿವೇಶನದ ಉಳಿದ ಅವಧಿಗೆ ಕಾಗದ ಎಸೆದ ಸಂಸದರನ್ನ ಅಮಾನತುಗೊಳಿಸುವ ಪ್ರಸ್ತಾವನೆಯನ್ನ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಮಂಡಿಸಿದರು. ಇದನ್ನ ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು. ಆದರೆ, ಪ್ರಸ್ತಾವನೆ ಅಂಗೀಕಾರವಾದ ನಂತರವೂ ವಿಪಕ್ಷ ಸದಸ್ಯರು ಸಭಾಪತಿಯ ಮೇಲೆ ಕಾಗದಗಳನ್ನ ಎಸೆಯುತ್ತಲೇ ಇದ್ದರು.



ಈ ಬೆಳವಣಿಗೆ ನಂತರ ಸಂಸತ್ತಿನ ನಿಯಮಗಳನ್ನ ಉಲ್ಲಂಘಿಸಿದ್ದಕ್ಕಾಗಿ ನಿಯಮ 374ರ ಅಡಿಯಲ್ಲಿ ಸ್ಪೀಕರ್ 8

ಪುಟ 2ಕ್ಕೆ

## ರಾಹುಲ್‌ಗೆ ಅನುಮತಿ ನಿರಾಕರಣೆ: ಲೋಕಸಭೆಯಲ್ಲಿ ಕಾಂಗ್ರೆಸ್ ಗದ್ದಲ

**ನವದೆಹಲಿ:** ಮಾಜಿ ಸೇನಾ ಮುಖ್ಯಸ್ಥ ಎಂ ಎಂ ನರವಾಣೆ ಅವರ ಅಪ್ರಕಟಿತ ಆತ್ಮಚರಿತ್ರೆಯ ಕೆಲವು ಅಂಶಗಳನ್ನು ಉಲ್ಲೇಖಿಸಲು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರಿಗೆ ಸ್ಪೀಕರ್ ಓಂ ಬಿರ್ಲಾ ಅನುಮತಿ ನಿರಾಕರಿಸಿದ್ದಕ್ಕಾಗಿ ವಿಪಕ್ಷಗಳು ಲೋಕಸಭೆಯಲ್ಲಿ ಮಂಗಳವಾರ ತೀವ್ರ ಪ್ರತಿಭಟನೆ ನಡೆಸಿ ದವು.



ಇದ ರಿಂದಾಗಿ ಕಲಾಪವನ್ನು ಮಧ್ಯಾಹ್ನ 12 ಗಂಟೆಗೆ ತದನಂತರ 2 ಗಂಟೆಗೆ ಮುಂದೂಡಲಾಯಿತು. ಇಂದು ಪ್ರಶ್ನೋತ್ತರ ಕಲಾಪ ಆರಂಭವಾಗುತ್ತಿದ್ದಂತೆಯೇ ಸದನದ ಬಾವಿಗಿಳಿದ ವಿಪಕ್ಷ ಸದಸ್ಯರು, ಶರಣಾದ ಮೋದಿ ಎಂದು ಘೋಷಣೆ ಕೂಗಿ ಗದ್ದಲ ಎಬ್ಬಿಸಿದರು.

ಸ್ಪೀಕರ್ ಕೇವಲ ಒಂದು ಪ್ರಶ್ನೆಯನ್ನಷ್ಟೇ ತೆಗೆದುಕೊಂಡರು. ತದನಂತರ ವಿಪಕ್ಷ ಸದಸ್ಯರು ಪ್ರತಿಭಟನೆ ಆರಂಭಿಸಿದರು. ಈ ವೇಳೆ ಮಾತನಾಡಿದ ಸ್ಪೀಕರ್ ವಿವಿಧ ರಂಗಗಳಲ್ಲಿ ಸರ್ಕಾರವನ್ನು ಹೊಣೆಗಾರರನ್ನಾಗಿ ಮಾಡಲು ಪ್ರಶ್ನೋತ್ತರ ಕಲಾಪ ವಿಪಕ್ಷಗಳಿಗೆ ನೆರವಾಗುತ್ತದೆ ಎಂದು ಹೇಳಿ ವಿಪಕ್ಷ ಸದಸ್ಯರನ್ನು ಮನವೊಲಿಸಲು ಯತ್ನಿಸಿದರು. ಆದರೆ, ವಿಪಕ್ಷ ಸದಸ್ಯರು ಪ್ರತಿಭಟನೆಯನ್ನು ತೀವ್ರಗೊಳಿಸಿದರು.

ಯೋಜಿತ ರೀತಿಯಲ್ಲಿ ಕಲಾ

ಪುಟ 2ಕ್ಕೆ

## ಇ–ಖಾತಾ ಪಡೆಯಲು ಪರದಾಟ

### ವಾರದಲ್ಲಿ ಸಮಸ್ಯೆ ಇತ್ಯರ್ಥಕ್ಕೆ ಗಡುವು: ಶಿವಕುಮಾರ್



**ಮೈಸೂರು:** ಮೈಸೂರು ಮಹಾನಗರ ಪಾಲಿಕೆ ಮತ್ತು ನಗರಸಭೆ, ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಇ–ಖಾತಾ ಪಡೆಯಲು ಸಾರ್ವಜನಿಕರು ಪರದಾಡುತ್ತಿದ್ದಾರೆ. ವಾರದ ಒಳಗಾಗಿ ಸಮಸ್ಯೆ ಸರಿಪಡಿಸದೆ ಇದ್ದರೆ ಹೋರಾಟ ನಡೆಸಲಾಗುವುದು ಎಂದು ಮಾಜಿ ಮೇಯರ್ ಶಿವಕುಮಾರ್ ಎಚ್ಚರಿಕೆ ನೀಡಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಎರಡು ತಿಂಗಳಿನಿಂದ ಇ–ಖಾತಾ ಮಾಡಿಸಿಕೊಳ್ಳಲು ಸಾಧ್ಯವಾಗದೆ ಜನರು ಶಾಪ ಹಾಕುತ್ತಿದ್ದಾರೆ. ಪಾಲಿಕೆ ಅಧಿಕಾರಿಗಳು ಜನರನ್ನು ಪರೋಕ್ಷವಾಗಿ ತಪ್ಪು ದಾರಿಗೆ ಎಳೆಯುತ್ತಿದ್ದಾರೆ. ಸಿಎಂ ಸಿದ್ದರಾಮಯ್ಯ ಅವರ ತವರು ಮೈಸೂರಿನಲ್ಲೇ ಸಮಸ್ಯೆ ಬಗೆಹರಿಯದಿರುವುದು ದುರಂತ. ಇ–ಖಾತಾ ವ್ಯವಸ್ಥೆ ಸಂಪೂರ್ಣ ಗೊಂದಲಗೊಂಡಿದೆ ಎಂದು ಟೀಕಿಸಿದರು.

ನಗರದಲ್ಲಿ ಜಾರಿಗೆ ತರುವ ಮೊದಲು ಮನೆ ಮನೆಗೆ ತೆರಳಿ ಸಮಗ್ರ ಸರ್ವೇ

ಮೊದಲ ಪುಟದಿಂದ

## ಇ-ಖಾತಾ ಪಡೆಯಲು ಪರದಾಟ

ನಡೆಸಬೇಕಿತ್ತು. ಎಲ್ಲಾ ಆಸ್ತಿಗಳ ಡೇಟಾ ಸಂಗ್ರಹಣೆ ಬಳಿಕ ಇ-ಖಾತಾ ಕಡ್ಡಾಯಗೊಳಿಸಬೇಕಾಗಿತ್ತು. ಆದರೆ, ಯಾವುದೇ ಪೂರ್ವಸಿದ್ಧತೆ ಇಲ್ಲದೆ ತರಾತುರಿಯಲ್ಲಿ ಇ-ಖಾತಾ ಜಾರಿಗೊಳಿಸಲಾಗಿದೆ ಎಂದು ಕಿಡಿಕಾರಿದರು. ಇ-ಖಾತಾ ಸಮಸ್ಯೆಯಿಂದಾಗಿ ಆಸ್ತಿ ಮಾರಾಟ, ಖರೀದಿ ಸ್ಥಗಿತಗೊಂಡಿದೆ. ಜನರು ಕೋರ್ಟ್‌ಗಳು ಹಾಗೂ ಸರ್ಕಾರಿ ಕಚೇರಿಗಳ ಸುತ್ತಾಟ ನಡೆಸುವ ಪರಿಸ್ಥಿತಿ ನಿರ್ಮಾಣವಾಗಿದೆ. ವೆಬ್‌ಸೈಟ್‌ನಲ್ಲಿ ಸ್ಪಷ್ಟ ಮಾಹಿತಿ ಲಭ್ಯವಿಲ್ಲದ ಕಾರಣ ಜನರು ಮಧ್ಯವರ್ತಿಗಳ ಬಳಿ ಹೋಗಬೇಕಾದ ಸ್ಥಿತಿ ಉಂಟಾಗಿದೆ. ಮಧ್ಯವರ್ತಿಗಳ ಮೂಲಕ ಹಣ ಸುಲಿಗೆ ನಡೆಯುತ್ತಿದೆ ಎಂದು ಆರೋಪಿಸಿದರು.

ಬೇರೆ ರಾಜ್ಯಗಳಲ್ಲಿ ಎಐ ತಂತ್ರಜ್ಞಾನ ಬಳಸಿ ಸುಗಮವಾಗಿ ಸೇವೆ ಒದಗಿಸಲಾಗುತ್ತಿದೆ. ಆದರೆ ನಮ್ಮ ರಾಜ್ಯದಲ್ಲಿ ಕಣಜ ಎಂಬ ಸಾಫ್ಟ್‌ವೇರ್ ಮೂಲಕ ಗೊಂದಲ ಸೃಷ್ಟಿಸಲಾಗಿದೆ. ಮೈಸೂರು ಮಹಾನಗರ ಪಾಲಿಕೆಗೆ ವರ್ಷಕ್ಕೆ ಸುಮಾರು 200 ಕೋಟಿ ಕಂದಾಯ ವಸೂಲಿ ಆಗುತ್ತದೆ. ಈ ಪರಿಸ್ಥಿತಿಯಲ್ಲಿ ಜನರು ತೆರಿಗೆ ಕಟ್ಟಲು ಸಾಧ್ಯವಾಗುತ್ತಿಲ್ಲ ಎಂದು ಆತಂಕ ವ್ಯಕ್ತಪಡಿಸಿದರು.

ಐಟಿಬಿಟಿ ಇಲಾಖೆ ಸಚಿವ ಪ್ರಿಯಾಂಕ ಖರ್ಗೆ ದೇಶ ರಾಜಕಾರಣದ ಬಗ್ಗೆ ಮಾತನಾಡುತ್ತಾರೆ. ಆದರೆ, ಅವರ ಇಲಾಖೆಯಲ್ಲಿ ಕಳೆದ ಆರು ತಿಂಗಳಲ್ಲಿ ಎರಡು ಬಾರಿ ಆನ್‌ಲೈನ್ ವ್ಯವಸ್ಥೆ ಕೆಟ್ಟಿದೆ. ಯಾವುದೇ ಸರ್ವೇ ಪೂರ್ಣವಾಗಿ ನಡೆಸದೇ ಏಕಾಏಕಿ ಜಾರಿಗೊಳಿಸಿ ಸಾರ್ವಜನಿಕರಿಗೆ ಗೊಂದಲದ ಗೂಡನ್ನಾಗಿ ಮಾಡಿದ್ದಾರೆ. ಇ-ಖಾತಾ ಕಡ್ಡಾಯ ನಿಯಮವನ್ನು ಹಿಂಪಡೆಯಬೇಕು ಎಂದು ಆಗ್ರಹಿಸಿದರು. ನಗರಪಾಲಿಕೆ ಮಾಜಿ ಸದಸ್ಯರಾದ ಬಿ.ವಿ.ಮಂಜುನಾಥ್, ಎಂ.ಯು.ಸುಬ್ಬಯ್ಯ ಇನ್ನಿತರರು ಉಪಸ್ಥಿತರಿದ್ದರು.

## ಭಾರತದ ಉಜ್ವಲ ಭವಿಷ್ಯಕ್ಕೆ ಇದು ಶುಭ ಸೂಚನೆ

ಭಾರತ ಮತ್ತು ಅಮೆರಿಕ ವ್ಯಾಪಾರ ಒಪ್ಪಂದವನ್ನು ಅಂತಿಮಗೊಳಿಸಿದ ಒಂದು ದಿನದ ನಂತರ ಸುಂಕವನ್ನು ಶೇಕಡಾ 50 ರಿಂದ 18 ಕ್ಕೆ ಇಳಿಸಿದ್ದು, ಗೋಯಲ್ ಅವರು ಈ ಬಗ್ಗೆ ಸಂಸತ್ತಿನಲ್ಲಿ ಮಾತನಾಡಲು ಬಯಸಿದ್ದರು.

## ವಿಪಕ್ಷಗಳ ವಿರೋಧ, ಗದ್ದಲ

ಮಂಡನೆಗೆ ವಿಪಕ್ಷಗಳ ಸದಸ್ಯರು ಎದ್ದು ನಿಂತು ಅಡ್ಡಿ ಪಡಿಸಿದರು. ಈ ವೇಳೆ ವಿಪಕ್ಷಗಳ ಮೇಲೆ ಸಿಎಂ ಗರಂ ಆದರು. ಅಧ್ಯಕ್ಷರೇ ಅವರನ್ನ ಕೂರಿಸಿ, ಯಾರು ನಿಮ್ಮ ಮಾತು ಕೇಳಲ್ವೋ ಹೊರಗೆ ಹಾಕಿ ಅಂತ ಸಿಎಂ ಕಿಡಿ ಕಿಡಿಕಾರಿದರು.

ಸದನದಲ್ಲಿ ಗದ್ದಲ, ಕೋಲಾಹಲ, ಪರಸ್ಪರ ಆರೋಪ, ವಾಕ್ಸಮರಗಳಿಂದ ಗೊಂದಲದ ಗೂಡಾಯಿತು. ಇದು ಲೂಟಿ ಸರ್ಕಾರ ಅಂತ ವಿಪಕ್ಷ ಸದಸ್ಯರು ಘೋಷಣೆ ಕೂಗಿದರು. ವಿಪಕ್ಷಗಳ ನಡೆಗೆ ಸಿಎಂ ತೀವ್ರ ಖಂಡಿಸಿ ಮತ್ತೆ ಆಕ್ರೋಶ ವ್ಯಕ್ತಪಡಿಸಿದರು. ಗದ್ದಲ ನಿಯಂತ್ರಣಕ್ಕೆ ಬರದ ಹಿನ್ನೆಲೆ ಸದನವನ್ನೇ ಸ್ಪೀಕರ್ ಮುಂದೂಡಿದರು.

## ಮೋದಿ ಅವಹೇಳನ: ಮೇಲ್ಮನೆಯಲ್ಲೂ ಕೋಲಾಹಲ

ನರೇಂದ್ರ ಮೋದಿ ಅವರನ್ನು ದೇಶದ್ರೋಹಿ ಎಂದು ಹೇಳಿದ್ದರು. ಇದಕ್ಕೆ ಕೆರಳಿದ ಬಿಜೆಪಿ ಸದಸ್ಯರು, ಸದನದ ಬಾವಿಗಿಳಿದು ಪ್ರತಿಭಟನೆ ನಡೆಸಿದರು. ಕಾಂಗ್ರೆಸ್ ವಿರುದ್ಧ ಘೋಷಣೆ ಕೂಗಿ ಆಕ್ರೋಶ ಹೊರಹಾಕಿದರು.

ನಜೀರ್ ಅಹ್ಮದ್ ತಮ್ಮ ಹೇಳಿಕೆಯನ್ನು ಹಿಂಪಡೆಯಬೇಕು ಮತ್ತು ಕ್ಷಮೆ ಕೇಳಬೇಕು ಎಂದು ವಿಪಕ್ಷಗಳ ಸದಸ್ಯರು ಪಟ್ಟು ಹಿಡಿದಿದರು. ಸದಸ್ಯರ ವಾಗ್ವಾದ ಕೈಕೈ ಮಿಲಾಯಿಸುವ ಹಂತಕ್ಕೆ ತಲುಪಿತ್ತು. ನಂತರ ಸಭಾಪತಿ ಬಸವರಾಜ ಹೊರಟ್ಟಿ ಅವರ ಆದೇಶದಂತೆ ನಜೀರ್ ಅಹ್ಮದ್ ಅವರು ತಮ್ಮ ಹೇಳಿಕೆಗೆ ವಿಷಾದ ವ್ಯಕ್ತಪಡಿಸುವುದಾಗಿ ತಿಳಿಸಿದರು.

## ಪ್ರತಿಪಕ್ಷಗಳ 8 ಸಂಸದರ ಅಮಾನತು

ಜನ ಸಂಸದರನ್ನ ಇಡೀ ಬಜೆಟ್ ಅಧಿವೇಶನದಿಂದಲೇ ಅಮಾನತುಗೊಳಿಸಿದರು. ಸದನದಲ್ಲಿ ಕುಳಿತುಕೊಳ್ಳುವುದು, ಇತರ ಚರ್ಚೆಗಳಲ್ಲಿ ಭಾಗವಹಿಸುವುದನ್ನೂ ನಿಷೇಧಿಸಿ ಆದೇಶಿಸಿದರು.

## ರಾಹುಲ್‌ಗೆ ಅನುಮತಿ ನಿರಾಕರಣೆ: ಲೋಕಸಭೆಯಲ್ಲಿ ಕಾಂಗ್ರೆಸ್ ಗದ್ದಲ

ಪಡಿಸುವುದು ಸಂಸದರಿಗೆ ಯೋಗ್ಯ ನಿರ್ಧಾ ರವಲ್ಲ ಎಂದು ಸ್ಪೀಕರ್ ಬಿರ್ಲಾ

ಹೇಳಿದರು. ಸುಮಾರು ಒಂದು ಗಂಟೆ ಕಾಲ ಕಲಾಪವನ್ನು ಮುಂದೂಡಿದರು. ಬಳಿಕ ಸಮಾವೇಶಗೊಂಡಾಗಲೂ ಪ್ರತಿಭಟನೆ ಮುಂದುವರೆದರಿಂದ ಕಲಾಪವನ್ನು ಮಧ್ಯಾಹ್ನಕ್ಕೆ ಮುಂದೂಡಿದರು. ನಿನ್ನೆಯೂ ಇದೇ ವಿಚಾರವಾಗಿ ಲೋಕಸಭೆಯಲ್ಲಿ ಕೋಲಾಹಲ ಉಂಟಾಗಿತ್ತು.

## ತಡವಾಗಿ ಬರುವ ಪೊಲೀಸ್: ಸಿದ್ದು ಕಾಲೆಳೆದ ಅಶೋಕ್

ಹಿಂದೆ ಕಾಣದ ಕೈ ಯಾವುದು ಅಂತ ಗೊತ್ತಾಗಬೇಕಿದೆ ಎಂದು ಅಶೋಕ್ ಆಗ್ರಹಿಸಿದರು.

## ಎಂಎಲ್ಸಿ ನಜೀರ್ ಅಮಾನತಿಗೆ ಆಗ್ರಹ: ಅಧ್ಯಕ್ಷ ಹೊರಟ್ಟಿಗೆ ದೂರು

ಸದನದ ಘನತೆ ಮತ್ತು ಸಂಸದೀಯ ಮೌಲ್ಯಗಳನ್ನು ಕಸಿದುಕೊಳ್ಳಲಾಗಿದೆ ಮತ್ತು ಇದು ಅತ್ಯಂತ ಖಂಡನೀಯ. ಈ ನಡವಳಿಕೆಯು ಪ್ರಜಾಪ್ರಭುತ್ವದ ಆದರ್ಶಗಳಿಗೆ ವಿರುದ್ಧವಾಗಿದೆ ಮತ್ತು ಬೇಜವಾಬ್ದಾರಿ ಹೇಳಿಕೆಗಳನ್ನು ನೀಡಿದ ಸದಸ್ಯರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಲಾಯಿತು.

# ಯುಜಿಸಿ ಹೊಸ ನಿಯಮ ಜಾರಿಗೆ ಸಿ.ಕೆ.ಮಂಜುನಾಥ್ ಆಗ್ರಹ

ಚಾಮರಾಜನಗರ: ಹಿಂದುಳಿದ ವಿದ್ಯಾರ್ಥಿಗಳ ಹಿತ ಕಾಯುವುದಕ್ಕಾಗಿ ಯಥಾವತ್ತಾಗಿಯುಜಿಸಿ ಕಾಯ್ದೆಯನ್ನು ಜಾರಿಗೊಳಿಸಬೇಕು ಎಂದು ಚಾಮರಾಜನಗರ ತಾಲೂಕು ಡಾ.ಬಿ.ಆರ್.ಅಂಬೇಡ್ಕರ್ ಮಹಾಸಭಾದ ಕಾರ್ಯಾಧ್ಯಕ್ಷ ಸಿ.ಕೆ.ಮಂಜುನಾಥ್ ಆಗ್ರಹಿಸಿದರು.



ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಚಾಮರಾಜನಗರ ತಾಲೂಕು ಡಾ.ಬಿ.ಆರ್.ಅಂಬೇಡ್ಕರ್ ಮಹಾಸಭಾ, ಅಹಿಂದ ಸಂಘಟನೆ ಒಕ್ಕೂಟದ ವತಿಯಿಂದ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಎಸ್‌ಸಿ, ಎಸ್‌ಟಿ, ಒಬಿಸಿ ವಿದ್ಯಾರ್ಥಿಗಳ ಮೇಲೆ ಧರ್ಮ?ಜಾತಿಯ ಹೆಸರಿನಲ್ಲಿ ನಡೆಯುತ್ತಿರುವ ತಾರತಮ್ಯ, ಕಿರುಕುಳ, ದೌರ್ಜನ್ಯ ತಡೆಗೆ ವಿಶ್ವವಿದ್ಯಾಲಯಗಳ ಧನಸಹಾಯ ಆಯೋಗವು ಜಾರಿಗೆ ತಂದಿರುವ ಹೊಸ ನಿಯಮಗಳನ್ನು ಸ್ವಾಗತಿಸಲಾಗುತ್ತದೆ.'ಆದರೆ ನಿಯಮಗಳಿಗೆ ಸುಪ್ರೀಂ ತಡೆಯಾಜ್ಞೆ ನೀಡಿದೆ. ಕೇಂದ್ರ ಸರ್ಕಾರ ತಡೆಯಾಜ್ಞೆ ತೆರವುಗೊಳಿಸಬೇಕು ಎಂದು ಒತ್ತಾಯಿಸಿದರು.

ಜಾತಿ ತಾರತಮ್ಯ ಮತ್ತು ಕಿರುಕುಳ ಕಾರಣದಿಂದಾಗಿ ಮೇಲ್ವರ್ಗದ ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಿರುವ ಉದಾಹರಣೆಗಳಿಲ್ಲ. ಆದರೆ ಕೆಳವರ್ಗದವರು ಆತ್ಮಹತ್ಯೆ ಮಾಡಿಕೊಂಡಿರುವ ನೂರಾರು ಉದಾಹರಣೆಗಳಿವೆ. ಹೈದರಾಬಾದ್ ಕೇಂದ್ರೀಯ ವಿವಿಯ ಸಂಶೋಧನಾ ವಿದ್ಯಾರ್ಥಿ ರೋಹಿತ ವೇಮುಲ, ವೈದ್ಯಕೀಯ ವಿದ್ಯಾರ್ಥಿನಿ ಪಾಯಲ್ ತದ್ವಿ, ಬಾಂಬೆ ಐಐಟಿ ವಿದ್ಯಾರ್ಥಿ ದರ್ಶನ ಸೋಳಂಕಿ ಸೇರಿದಂತೆ ಸಾಕಷ್ಟು ವಿದ್ಯಾರ್ಥಿಗಳ ಪಟ್ಟಿಯೇ ಇದೆ. ಸುಪ್ರೀಂಕೋರ್ಟ್ ಮತ್ತು ಯುಜಿಸಿ ಪ್ಯಾನಲ್ ಗೆ ಸಲ್ಲಿಸಿದ ವರದಿಯಲ್ಲಿ ಉನ್ನತ ವಿಶ್ವವಿದ್ಯಾಲಯ ಗಳಲ್ಲಿ ಜಾತಿ, ತಾರತಮ್ಯದಿಂದ 2019ರಿಂದ 2020ರ ವರಗೆ 173 ದೂರು ದಾಖಲಾಗಿದ್ದು, 2023-24 ರಲ್ಲಿ 378 ದೂರುಗಳು ದಾಖಲಾಗಿದ್ದು, ವರ್ಷದಲ್ಲಿ ಶೇ 118.4 ಹೆಚ್ಚಾಗಿದೆ. 2014ರಿಂದ 2024 ರ ವರಗೆ 122 ಆತ್ಮಹತ್ಯೆ ನಡೆದಿದೆ ಇದರಲ್ಲಿ ಶೇ 55 ರಷ್ಟು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು, 2014 ರಿಂದ 2024 ರ ತನಕ ದೇಶ ಪ್ರತಿಷ್ಠಿತ ಕಾಲೇಜು ಗಳಲ್ಲಿ 122 ಆತ್ಮಹತ್ಯೆ ಪ್ರಕರಣಗಳು ನಡೆದಿದ್ದು 24 ಮಂದಿ ಎಸ್ ಸಿ, ಎಸ್ಟಿ, 41 ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಸೇರಿರುತ್ತಾರೆ. 2021 ಮತ್ತು 2023 ರಲ್ಲಿ ಲೋಕಸಭಾ, ರಾಜ್ಯಸಭಾಗಳು ತಿಳಿಸಿರುವ ದತ್ತಾಂಶವಾಗಿದೆ ಈ ಎಲ್ಲ ಬೆಳವಣಿಗೆ ಗಳಿಂದ ಈ ಕಾಯ್ದೆ ಜಾರಿಗೊಳಿಸುವುದು ಅವಶ್ಯ ಕವಾಗಿದೆ ಎಂದರು.


ಇಕ್ವಿಟಿ ಕಮಿತಿ ಮುಂದೆ ದೂರು ಬಂದ ಸಮಿತಿ ಪರಿಶೀಲಿಸಿ ವರದಿಯನ್ನು ಸಂಬಂಧಿಸಿದ ಕಾನೂನು ಪ್ರಾಧಿಕಾರ ಸಲ್ಲಿಸುವುದು ಮಾತ್ರ ಅವರ ಕೆಲಸವಾಗಿದೆ ಹೊರತು ಶಿಕ್ಷಿಸುವ ಪ್ರಾಧಿಕಾರ ವಲ್ಲ. ಆದರು ಕೂಡ ಮೇಲ್ವರ್ಗ ವಿದ್ಯಾರ್ಥಿಗಳು ವಿರೋಧ ಏಕೆ ಎಂದು ಪ್ರಶ್ನೆಸಿದರು. ಪ್ರಗತಿಪರ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಸಿ.ಎಂ.ಕೃಷ್ಣಮೂರ್ತಿ ಮಾತನಾಡಿ,ದೇಶದಲ್ಲಿ 800ಕ್ಕೂ ಹೆಚ್ಚು ವಿಶ್ವವಿದ್ಯಾಲಯಗಳಿದ್ದು, ಸಾವಿರಾರು ವಿದ್ಯಾರ್ಥಿಗಳು ಓದುತ್ತಿದ್ದಾರೆ. ಎಸ್‌ಸಿ, ಎಸ್‌ಟಿ ಹಾಗೂ ಒಬಿಸಿ ವಿದ್ಯಾರ್ಥಿಗಳ ಮೇಲೆ ನಡೆಯುತ್ತಿರುವ ದೌರ್ಜನ್ಯ ತಡೆಗೆ ಯುಜಿಸಿ ತಂದಿರುವ ನಿಯಮದ ವಿರುದ್ಧ ಮೇಲ್ವರ್ಗದವರು ಸುಪ್ರೀಂ ಕೋರ್ಟ್ ನಿಯಮಗಳಿಗೆ ತಡೆಯಾಜ್ಞೆ ನೀಡಿದ್ದು, ಸಾಕಷ್ಟು ಅನುಮಾನಗಳನ್ನು ಹುಟ್ಟುಹಾಕಿದೆ. ಈ ಹೊಸ ಕಾನೂನು ಒಳ್ಳೆಯ ಕಾನೂನು ಆಗಿದ್ದು ಹೀಗಾಗಿ ಹಿಂದುಳಿದ ವಿದ್ಯಾರ್ಥಿಗಳ ಹಿತಕಾಯುವುದಕ್ಕಾಗಿ ' ಹೊಸ ನಿಯಮ ಕಾಯ್ದೆಯನ್ನು ಜಾರಿಗೊಳಿಸಬೇಕು' ಎಂದು ಒತ್ತಾಯಿಸಿದರು. ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ಸೇನಾಪಡೆ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ಮಾತನಾಡಿ, ಇದೊಂದು ಕಾಯ್ದೆ ವಿದ್ಯಾರ್ಥಿಗಳಿಗೆ ಉತ್ತಮವಾಗಿದ್ದು, ಇದರ ಬಗ್ಗೆ ವಿದ್ಯಾರ್ಥಿಗಳು ಹೋರಾಟ ಮಾಡಬೇಕಾಗಿತ್ತು. ಅದರ ಬದಲು ನಾವು ಹೋರಾಟ ಮಾಡಬೇಕಿದೆ. ಕೇಂದ್ರ ಸರ್ಕಾರ ಪರಿಶೀಲಿಸಿ ಯಥಾವತ್ತಾಗಿ ಜಾರಿ ಮಾಡಬೇಕು ಎಂದು ಒತ್ತಾಯಿಸಿದರು. ಪತ್ರಿಕಾಗೋಷ್ಠಿಯಲ್ಲಿ ಶಿವರಾಜ್ ಸಿದ್ದಯ್ಯನಪುರ, ರಾಜಶೇಖರ, ವಾಸು, ಮಹೇಶ್ ಹಾಜರಿದ್ದರು.

# ಆಹಾರ ಆಯೋಗದ ಅಧ್ಯಕ್ಷರ ಭೇಟಿ

## ಆಸ್ಪತ್ರೆ, ಅಂಗನವಾಡಿ, ಹಾಸ್ಟೆಲ್, ನ್ಯಾಯಬೆಲೆ ಅಂಗಡಿ, ರೈತ ಸಂಪರ್ಕ ಕೇಂದ್ರಗಳಲ್ಲಿ ಪರಿಶೀಲನೆ

ಚಾಮರಾಜನಗರ:- ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ. ಹೆಚ್. ಕೃಷ್ಣ ಅವರು ಜಿಲ್ಲೆಗೆ ಭೇಟಿ ನೀಡಿ ಇಂದು ಆಸ್ಪತ್ರೆ, ಅಂಗನವಾಡಿ, ಹಾಸ್ಟೆಲ್, ನ್ಯಾಯಬೆಲೆ ಅಂಗಡಿ, ರೈತ ಸಂಪರ್ಕ ಕೇಂದ್ರಗಳಿಗೆ ಅನಿರೀಕ್ಷಿತ ಭೇಟಿ ನೀಡಿ ವ್ಯಾಪಕವಾಗಿ ಪರಿಶೀಲಿಸಿದರು.





ನಗರದ ಪ್ರವಾಸಿಮಂದಿರದಲ್ಲಿ ಅಧಿಕಾರಿಗಳ ಸಭೆ ನಡೆಸಿದ ಬಳಿಕ ಯಡಪುರದಲ್ಲಿರುವ ಚಾಮರಾಜನಗರ ವೈದ್ಯಕೀಯ ಬೋದನಾ ಆಸ್ಪತ್ರೆಗೆ ಭೇಟಿ ನೀಡಿ ಅಲ್ಲಿನ ಮೂಳೆ ಮತ್ತು ಕೀಲು ವಿಭಾಗದ ಒಳ ರೋಗಿಗಳ ವಾರ್ಡ್ ವೀಕ್ಷಿಸಿದರು. ಅಲ್ಲಿ ಹಾಕಲಾಗಿದ್ದ ಊಟ ಉಪಹಾರದ ಮೆನು ಪರಿಶೀಲಿಸಿದರು. ಸಣ್ಣದಾಗಿ ಬರೆಯಲಾಗಿದ್ದ ಮೆನು ಫಲಕದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಅಧ್ಯಕ್ಷರು ಆಸ್ಪತ್ರೆಯ ಪ್ರತಿ ವಾರ್ಡಿನಲ್ಲಿ ಎದ್ದು ಕಾಣುವಂತೆ ಆಹಾರದ ಮೆನು ಚಾರ್ಟ್ ಪ್ರದರ್ಶಿಸಲು ಸೂಚಿಸಿದರು.

ಇದೇ ವೇಳೆ ರೋಗಿಗಳಿಗೆ ವಿತರಿಸಲು ವಾರ್ಡಿಗೆ ತರಲಾದ ಮಧ್ಯಾಹ್ನದ ಊಟವನ್ನು ಪರಿಶೀಲಿಸಿದರು. ಅನ್ನ, ಸಾಂಬರ್, ಚಪಾತಿ, ಸಾಗು ಇನ್ನಿತರ ಆಹಾರಗಳನ್ನು ವೀಕ್ಷಿಸಿದರು. ಸ್ಥಳದಲ್ಲಿದ್ದ ಆಹಾರ ಸುರಕ್ಷತಾ ಅಧಿಕಾರಿಗಳಿಗೆ ಊಟದ ಸ್ಯಾಂಪಲ್ ಪಡೆದು ವೈಜ್ಞಾನಿಕವಾಗಿ ಗುಣಮಟ್ಟ ಪರೀಕ್ಷಿಸಲು ನಿರ್ದೇಶನ ನೀಡಿದರು. ವಾರ್ಡಿನಲ್ಲಿ ದಾಖಲಾಗಿರುವ ರೋಗಿಗಳ ಆರೋಗ್ಯ ವಿಚಾರಿಸಿದ ಅಧ್ಯಕ್ಷರು ನಿಮಗೆ ಗುಣಮಟ್ಟದ ಹಾಗೂ ಸರಿಯಾದ ಪ್ರಮಾಣದಲ್ಲಿ ಆಹಾರ ವಿತರಣೆಯಾಗುತ್ತಿದ್ದೆಯೇ ಎಂದು ಪ್ರಶ್ನಿಸಿ ಉತ್ತರ



ಪಡೆದುಕೊಂಡರು. ಬಳಿಕ ಇನ್ನಿತರ ವಿಭಾಗಗಳಿಗೂ ಭೇಟಿ ಕೊಟ್ಟರು. ಆಸ್ಪತ್ರೆಯ ಕಚೇರಿಯಲ್ಲಿ ಊಟ ಉಪಹಾರ ಸಂಬಂಧ ಲೆಕ್ಕಪತ್ರಗಳನ್ನು ಪರಿಶೀಲಿಸಿದರು. ರೋಗಿಗಳಿಗೆ ಅವರ ಬಳಿಯೇ ತೆರಳಿ ಊಟ ಉಪಹಾರ ನೀಡಬೇಕು. ಯಾವುದೇ ಕೊರತೆಗಳು ಆಗಬಾರದು. ಮೆನು ಪ್ರಕಾರವೇ ಊಟ ತಿಂಡಿ ಪೂರೈಸಬೇಕು ಎಂದು ತಿಳಿಸಿದರು.

ಬಳಿಕ ಹರದನಹಳ್ಳಿಯ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ ಫಲಾನುಭವಿಗಳಿಗೆ ವಿತರಿಸಿರುವ ಸೌಲಭ್ಯಗಳನ್ನು ಪರಿಶೀಲಿಸಿದರು. ಕೃಷಿ ಹೊಂಡ, ಕೃಷಿ ಪರಿಕರಗಳ ವಿತರಣೆಯ ಕಡತ ಪರಿಶೀಲಿಸಿ ಈಗಾಗಲೇ ಸೌಲಭ್ಯ ಪಡೆದುಕೊಂಡಿರುವ ಕೆಲವು ಫಲನುಭವಿಗಳಿಗೆ ಆಯೋಗದ ಅಧ್ಯಕ್ಷರೇ ಖುದ್ದು ದೂರವಾಣಿ ಮೂಲಕ ಮಾತನಾಡಿ ನಿಮಗೆ ಸೌಲಭ್ಯ ತಲುಪಿದೆಯೇ? ಸೌಲಭ್ಯ ಪಡೆದುಕೊಳ್ಳಲು ಏನಾದರೂ ಸಿಬ್ಬಂದಿಯಿಂದ ತೊಂದರೆಯಾಗಿದೆಯೇ ಎಂದು ಕೇಳಿ ಮಾಹಿತಿ ಪಡೆದುಕೊಂಡರು.

ರೈತ ಸಂಪರ್ಕ ಕೇಂದ್ರದಲ್ಲಿ ಎಷ್ಟು ಪ್ರಮಾಣದಲ್ಲಿ ಫಲಾನುಭವಿಗಳಿಗೆ ಪರಿಕರಗಳ ಬೇಡಿಕೆಯಿದೆ. ಹೇಗೆ ಪೂರೈಸಲಾಗುತ್ತಿದೆ ಎಂಬ ವಿವರ ಪಡೆದ ಅಧ್ಯಕ್ಷರು ಕಡತಗಳಲ್ಲಿ ದಾಖಲು ಮಾಡಿರುವ ಪ್ರಮಾಣಕ್ಕನುಗುಣವಾಗಿ ದಾಸ್ತಾನು ಇರುವ ಬಗ್ಗೆ ಪರಿಶೀಲಿಸಿದರು.

ಚಾಮರಾಜನಗರ ಪಟ್ಟಣದ ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ಕಾಲೇಜು ವಿದ್ಯಾರ್ಥಿನಿಲಯಕ್ಕೂ ಭೇಟಿ ಕೊಟ್ಟು ಆಹಾರ ಸಾಮಗ್ರಿಗಳ ದಾಸ್ತಾನು, ಕ್ರೀಡಾ ಸಾಮಗ್ರಿಗಳ ವಹಿ, ವಿದ್ಯಾರ್ಥಿಗಳ ಬಯೋಮೆಟ್ರಿಕ್ ಹಾಜರಾತಿ ಪರಿಶೀಲಿಸಿದರು. ಚಾಮರಾಜನಗರ ವೈದ್ಯಕೀಯ ಬೋದನಾ ಆಸ್ಪತ್ರೆಯ ಡೀನ್ ಮತ್ತು ನಿರ್ದೇಶಕರಾದ ಡಾ. ಮಂಜುನಾಥ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ, ಕೃಷಿ ಇಲಾಖೆಯ ಪ್ರಭಾರ ಜಂಟಿ ನಿರ್ದೇಶಕರಾದ ಸುಷ್ಮಾ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕರಾದ ಡಾ. ವಸುಂಧರಾ ಹೆಗಡೆ, ತಹಶೀಲ್ದಾರ್ ಗಿರಿಜಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರೂಪಣಾ ಅಧಿಕಾರಿ ಮಂಜುಳಾ ದೇವಿ, ಆಹಾರ ಸುರಕ್ಷತಾ ಅಧಿಕಾರಿ ಶ್ರೀನಿವಾಸ್, ತಾಲೂಕು ಶಿಶು ಅಭಿವೃದ್ದಿ ಯೋಜನಾಧಿಕಾರಿ ನಾಗೇಶ್, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಮೇಘ, ಇನ್ನಿತರ ಅಧಿಕಾರಿಗಳು ಈ ಸಂದರ್ಭದಲ್ಲಿ ಇದ್ದರು.



### ತಹಶೀಲ್ದಾರ್ ಕಚೇರಿಗೆ ಭೇಟಿ

ಬಳಿಕ ನಗರದ ತಹಶೀಲ್ದಾರ್ ಕಚೇರಿಗೆ ಭೇಟಿ ನೀಡಿ ದಾಖಲೆಗಳ ಪರಿಶೀಲನೆ ನಡೆಸಿದರು. ಮಲ್ಲಯ್ಯನಪುರದ ನ್ಯಾಯಬೆಲೆ ಅಂಗಡಿಗೆ ತೆರಳಿ ಪರಿಶೀಲಿಸಿ ಈ ಸಂದರ್ಭದಲ್ಲಿ ತೂಕ ಮತ್ತು ಅಳತೆಯಲ್ಲಿ ವ್ಯತ್ಯಾಸ ಕಂಡುಬಂದ ಹಿನ್ನೆಲೆಯಲ್ಲಿ ಸೂಕ್ತ ಕ್ರಮ ಜರುಗಿಸುವಂತೆ ಸೂಚಿಸಿದರು.

### ಅಂಗನವಾಡಿ ಕೇಂದ್ರಕ್ಕೆ ಭೇಟಿ

ತದನಂತರ ಬಂಡಿಗೆರೆಯ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ ಮಕ್ಕಳ ಹಾಜರಾತಿ ಪರಿಶೀಲಿಸಿದರು. ಆಹಾರ ತಯಾರಿಸುವ ಕೊಠಡಿ, ದಾಸ್ತಾನು ಮಾಡಲಾಗಿದ್ದ ಆಹಾರ ಸಾಮಗ್ರಿ, ಧಾನ್ಯಗಳು, ಇನ್ನಿತರ ಪರಿಕರಗಳನ್ನು ವೀಕ್ಷಿಸಿದರು. ಪೌಷ್ಠಿಕ ಆಹಾರ ಇನ್ನಿತರ ಸೌಲಭ್ಯಗಳಿಗೆ ನೊಂದಾಯಿಸಿರುವ ಗರ್ಭಿ ಣಿಯರು, ಬಾಣಂತಿಯರ ಮಾಹಿತಿ ಪಡೆ ದರು. ಕೆಲವು ಫಲಾನುಭವಿಗಳಿಗೆ ಅಧ್ಯ ಕ್ಷರೇ ದೂರವಾಣಿ ಮೂಲಕ ಸಂಪರ್ಕಿಸಿ ಅವರು ಪಡೆದುಕೊಳ್ಳುತ್ತಿರುವ ಪೌಷ್ಠಿಕ ಆಹಾರದ ಬಗ್ಗೆ ವಿವರ ಪಡೆದುಕೊಂಡರು. ಆಹಾರ ವಿತರಣೆಯ ಕಡತವನ್ನು ಸರಿಯಾಗಿ ನಿರ್ವಹಿಸುವಂತೆ ಅಂಗನವಾಡಿ ಸಿಬ್ಬಂದಿಗೆ ತಾಕೀತು ಮಾಡಿದರು. ಇಲಾಖೆಯ ಹಿರಿಯ ಅಧಿಕಾರಿಗಳು ಆಗಿಂದ್ದಾಗೆ ಭೇಟಿ ನೀಡಿ ಪರಿಶೀಲಿಸುವಂತೆ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ. ಹೆಚ್. ಕೃಷ್ಣ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಮೊದಲ ಪುಟದಿಂದ

## ಮೆಟಾಗೆ ಸುಪ್ರೀಂ ಎಚ್ಚರಿಕೆ

ಬಹುರಾಷ್ಟ್ರೀಯ ಕಂಪನಿಯ ವ್ಯವಹಾರ ಹಿತಾಸಕ್ತಿಗಳಿಗಾಗಿ ನಾಗರಿಕರ ಗೌಪ್ಯತೆಯ ಹಕ್ಕನ್ನು ರಾಜೀ ಮಾಡಿಕೊಳ್ಳಲಾಗುವುದಿಲ್ಲ ಎಂದು ಎಚ್ಚರಿಸಿದೆ. ಪೀಠವು ಫೆಬ್ರವರಿ 10ರಂದು ಈ ವಿಷಯದ ಕುರಿತು ವಿವರವಾದ ಆದೇಶಗಳನ್ನು ನೀಡುವುದಾಗಿ ಹೇಳಿದೆ.

ಮೆಟಾ ಮತ್ತು ವಾಟ್ಸಾಪ್ ಪರವಾಗಿ ಹಿರಿಯ ವಕೀಲ ಮುಕುಲ್ ರೋಹಟ್ಗಿ ಮತ್ತು ಹಿರಿಯ ವಕೀಲ ಅಖಿಲ್ ಸಿಬಲ್ ವಾದ ಮಂಡಿಸಿದರು. ಎಲ್ಲಾ ಸಂದೇಶಗಳು ಎಂಡ್-ಟು-ಎಂಡ್ ಎನ್‌ಕ್ರಿಪ್ಟ್ ಆಗಿವೆ, ಕಂಪನಿಗಳೂ ಸಹ ವಿಷಯವನ್ನ ನೋಡಲು ಸಾಧ್ಯವಿಲ್ಲ ಎಂದು ಹೇಳಿದರು. ವಾದ ಪ್ರತಿವಾದ ಆಲಿಸಿದ ಪೀಠವು ಫೆಬ್ರವರಿ 10ರಂದು ವಿವರವಾದ ಆದೇಶ ನೀಡುವುದಾಗಿ ತಿಳಿಸಿದೆ.

## ಕುಸಿದುಬಿದ್ದ ಕಾಗೋಡು ತಿಮ್ಮಪ್ಪ

ಚಿಕಿತ್ಸೆಗಾಗಿ ದಾಖಲಿಸಿದ್ದು ಉಪ ವಿಭಾಗೀಯ ಆಸ್ಪತ್ರೆಯ ವೈದ್ಯ ವಿಕ್ರಂ ಚಿಕಿತ್ಸೆ ನೀಡುತ್ತಿದ್ದಾರೆ. ದೇವಸ್ಥಾನದಲ್ಲಿ ತೀವ್ರ ಜನಸಂದಣಿ ಇದ್ದಿದ್ದರಿಂದ ಉಸಿರಾಟ ಸಮಸ್ಯೆಯಾಗಿದೆ. ಚಿಕಿತ್ಸೆಯಿಂದಾಗಿ ಆರೋಗ್ಯ ಸುಧಾರಣೆಯಾಗಿದೆ. ಅರೋಗ್ಯ ಚೇತರಿಕೆ ಕಂಡು ಬರುತ್ತಿದೆ ಎಂದು ಮೂಲಗಳು ತಿಳಿಸಿವೆ.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಧನಸಹಾಯಕ್ಕೆ ವಯೋಮಿತಿ ಸಡಿಲಿಕೆ ಆಗ್ರಹ

ಮೈಸೂರು: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನೀಡುವ ವಾದ್ಯ ಪರಿಕರಗಳ ಧನ ಸಹಾಯ ವೇಳೆ 50 ವರ್ಷದೊಳಗಿನವರು ಮಾತ್ರ ಅರ್ಜಿ ಸಲ್ಲಿಸಬೇಕೆಂದು ತಿಳಿಸಲಾಗಿರುವುದು ಸರಿಯಲ್ಲ. ಹಿರಿಯ ವೃತ್ತಿ ಕಲಾವಿದರು ಹಲವಾರು ದಶಕಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ. ಹೀಗಾಗಿ ಇವರಿಗೂ ನೀಡಬೇಕೆಮದು ಹಿರಿಯ ವೃತ್ತಿ ಕಲಾವಿದರ ಒಕ್ಕೂಟದ ಅಧ್ಯಕ್ಷ ಎಂ. ಪುಟ್ಟಸ್ವಾಮಿ ಮನವಿ ಮಾಡಿದರು.



ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಇವರೆಲ್ಲ ಹಾಡುವುದು, ನಟನೆ ಮೊದಲಾದ ವೃತ್ತಿಯನ್ನೇ ಅವಲಂಬಿಸಿಕೊಂಡು ಬಂದಿದ್ದಾರೆ. ಬಹಳಷ್ಟು ಮಂದಿ 50 ವರ್ಷ ಮೀರಿದ್ದಾರೆ. ಹೀಗಾಗಿ ಇವರು ಎಲ್ಲಿಗೆ ಹೋಗಬೇಕು, ಬೇರೆ ಉದ್ಯೋಗ ಸಾಧ್ಯವಿಲ್ಲ. ಹೀಗಾಗಿ ಇಲಾಖೆ ಸಚಿವ ಶಿವರಾಜ್ ತಂಗಡಗಿ, ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ. ಮಹದೇವಪ್ಪ ಇವರ ನೆರವಿಗೆ ನಿಲ್ಲಬೇಕೆಂದು ಕೋರಿದರು.

ಈ ಹಿಂದೆ ಇಲಾಖೆ ಆಯೋಜಿಸಿದ್ದ ಪ್ರಾಯೋಜಿತ ಕಾರ್ಯಕ್ರಮದ ಹಣವನ್ನು ಸುಮಾರು 3 ವರ್ಷಗಳಾದರೂ ನೀಡಿಲ್ಲ. ಬಡತನದಲ್ಲಿಯೇ ಇರುವ ಈ ಕಲಾವಿದರು ಜೀವನ ನಡೆಸುವುದಾದರೂ ಹೇಗೆ ಎಂದು ಪ್ರಶ್ನಿಸಿ, ಕೂಡಲೇ ಹಣ ನೀಡಬೇಕು, ಇಲಾಖೆ ವತಿಯಿಂದ ಪ್ರಾಯೋಜಿತ ಕಾರ್ಯಕ್ರಮ ಮುಂದುವರಿಸಬೇಕು, ದಸರ ವೇಳೆಯ ವಸ್ತು ಪ್ರದರ್ಶನದಲ್ಲಿ 3 ತಿಂಗಳು ಕಾರ್ಯಕ್ರಮ ನಡೆಸಿ ಯಬೇಕಾಗಿತ್ತು. ಆದರೆ ಇದನ್ನು ಒಂದು ತಿಂಗಳಿಗೆ ಈಗ ಸೀಮಿತಗೊಳಿಸಿರುವುದರಿಂದಾಗಿ ವೃತ್ತ ಕಲಾವಿದರಿಗೆ ಬರುತ್ತಿದ್ದ ಅಲ್ಪಸ್ವಲ್ಪ ಹಣವೂ ನಿಂತಿದೆ. ಹೀಗಾಗಿ 3 ತಿಂಗಳು ನಡೆಯುವಂತೆ ನೋಡಿಕೊಳ್ಳಬೇಕು, ಕಲಾವಿದರಿಗೆ ಇದುವರೆಗೂ ಗುರುತಿನ ಚೀಟಿ ನೀಡದಿರುವುದು ಸರಿಯಲ್ಲ. ಕೂಡಲೇ ದೊರಕಿಸಿಕೊಡಬೇಕೆಂದ ಕೋರಿದರು. ಇನ್ನಿತರ ಪದಾಧಿಕಾರಿಗಳಾದ ರಾಘವೇಂದ್ರ ಪ್ರಸಾದ್, ಲೋಕೇಶ್, ಆಲ್ಬರ್ಟ್, ಜನಾರ್ಧನ್, ಲೋಕೇಶ್, ನಿಂಗರಾಜು, ರಾಜಗೋಪಾಲ್, ಧ್ರುವ, ನಾಗೇಶ್, ಎಂ.ಸಿ. ಜಗದೀಶ್, ಉದಯಕುಮಾರ್, ರಾಮಮೂರ್ತಿ, ಸತ್ಯ ಹಾಗೂ ಇನ್ನಿತರರು ಹಾಜರಿದ್ದರು.

ಮೊದಲ ಪುಟದಿಂದ

## ಅಬಕಾರಿ ಸಚಿವ ತಿಮ್ಮಾಪುರ ತಲೆದಂಡಕ್ಕೆ ಬಿಜೆಪಿ ಪಟ್ಟು

ರಾಜೀನಾಮೆ ಕೊಡಬೇಕು ಎಂದು ಆಗ್ರಹಿಸಿದರು. ಅಶೋಕ್ ಮಾತಿಗೆ ಧ್ವನಿಗೂಡಿಸಿದ ಶಾಸಕ ಸುನಿಲ್ ಕುಮಾರ್, ಹಗರಣದ ಬಗ್ಗೆ ಸ್ವಲ್ಪ ಮಾತಾಡಲು ಸಾಧ್ಯವಿಲ್ಲ. ಹಗರಣ ವಿವರ ಅಷ್ಟು ಉದ್ದವಿದೆ. ಹಾಗಾಗಿ ಸಣ್ಣದಾಗಿ ಮಾತಾಡಲು ಸಾಧ್ಯವಿಲ್ಲ. ನರೇಗಾ ವಿಚಾರ ನಾವು ಚರ್ಚೆ ಮಾಡಲು ಸಿದ್ಧ. ಆದರೆ, ಮೊದಲು ನಮಗೆ ಅಬಕಾರಿ ಹಗರಣ ಚರ್ಚೆ ಮಾಡಲು ಅವಕಾಶ ನೀಡ ಎಂದು ಒತ್ತಾಯಿಸಿದರು.

## ಜಿ ರಾಮ್ ಜಿ ವಿರುದ್ಧ ನಿರ್ಣಯ

ಸಮಯದಲ್ಲಿ ವಿರೋಧ ಪಕ್ಷದ ಸದಸ್ಯರು ತಮ್ಮ ಆಕ್ಷೇಪಣೆಗಳನ್ನು ಎತ್ತಬಹುದು ಎಂದು ಹೇಳಿದರು. ಇದು ವಿರೋಧ ಪಕ್ಷದ ಸದಸ್ಯರನ್ನು ಕೆರಳಿಸಿತು, ಅವರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.

## ಸಿ.ಜೆ.ರಾಯ್ ಆತ್ಮಹತ್ಯೆ: ಎಸ್‌ಐಟಿ ತನಿಖೆ ಚುರುಕು

ರಾಯ್ ಡೈರಿಯಲ್ಲಿ ಬರೆಯುತ್ತಿ ದ್ದರು. ಸಿಜೆ ರಾಯ್ ಕೈಬರಹದಲ್ಲಿ ಬರೆ ದಿರುವ ಅಪಾರ ಪ್ರಮಾಣದ ದಾಖಲೆಗಳನ್ನು ಎಸ್‌ಐಟಿ ವಶಕ್ಕೆ ಪಡೆದಿದ್ದು, ಕುಲಂಕುಶವಾಗಿ ಪರಿಶೀಲನೆ ನಡೆಸುತ್ತಿದೆ.

## ಗುತ್ತಿಗೆದಾರರ ಸಂಘದ ಗೌರವ ಅಧ್ಯಕ್ಷ ಜಗನ್ನಾಥ್ ಅಮಾನತು

ಅಧ್ಯಕ್ಷ ಮಂಜುನಾಥ್ ಸುದ್ದಿಗೋಷ್ಠಿ ನಡೆಸಿ ಮಾತನಾಡಿ, ಇದು ಖಾಸಗಿ ಜಾಗದಲ್ಲಿ ಆಗಿರುವ ವ್ಯವಹಾರ. ಈ ಘಟನೆಗೂ ಗುತ್ತಿಗೆದಾರರ ಸಂಘಕ್ಕೂ ಸಂಬಂಧ ಇಲ್ಲ. ಯಾವ ಕಾರಣಕ್ಕೂ ನಾವು ಶೇ.80ರಷ್ಟು ಕಮಿಷನ್ ಇದೆ ಎಂದು ನಾವು ಹೇಳಿಲ್ಲ ಎಂದು ತಿಳಿಸಿದರು. ಅಮಾನತು ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಜಗನ್ನಾಥ್ ಶೇಗಜಿ, ನಾನು ಯಾವುದೇ ಕಮಿಷನ್ ಕೇಳಿಲ್ಲ. ಅಧಿಕಾರಿಗಳು ನನ್ನ ವಿರುದ್ಧ ಷಡ್ಯಂತ್ರ ಮಾಡಿದ್ದಾರೆ. ನನ್ನ ಧ್ವನಿಯನ್ನ ಹತ್ತಿಕ್ಕಲು ಈ ರೀತಿ ಮಾಡಿದ್ದಾರೆ ಎಂದು ದೂರಿದರು.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಪೌರಕಾರ್ಮಿಕರ ಜತೆ ಸಹ ಪಂಕ್ತಿ ಭೋಜನ

ಮೈಸೂರು: ರಾಜೀವ್‌ನಗರದ ಸರ್ಕಾರಿ ಬಾಲಕೀಯರ ಪದವಿಪೂರ್ವ ಕಾಲೇಜಿನ ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯ ಮಹಮ್ಮದ್ ಮುಷೀರ್ ಅವರು ಮಂಗಳವಾರ ಐವತ್ತಕ್ಕೂ ಹೆಚ್ಚು ಪೌರ ಸೇನಾನಿಗಳ ಜತೆ ಸಹ ಪಂಕ್ತಿ ಭೋಜನ ನಡೆಸಿದರು.



ಕಾಂಗ್ರೆಸ್ ಪಕ್ಷದ ಅಜೀಜ್ ಸೇಠ್ ಬ್ಲಾಕ್ ಅಧ್ಯಕ್ಷ ಸೈಯದ್ ಎಕ್ಬಾಲ್ ಮಾತನಾಡಿ, ಶಾಸಕ ತನ್ವೀರ್ ಸೇಠ್ ಶಿಫಾರಸ್ಸಿನ ಮೇರೆಗೆ ಮಹಮ್ಮದ್ ಮುಷೀರ್ ಅವರನ್ನು ಸರ್ಕಾರಿ ಬಾಲಕೀಯರ ಪದವಿಪೂರ್ವ ಕಾಲೇಜು ಅಭಿವೃದ್ಧಿ ಸಮಿತಿಗೆ ಸದಸ್ಯರನ್ನಾಗಿ ನೇಮಕ ಮಾಡಲಾಗಿದೆ, ಮುಷೀರ್ ಅವರು ನೇಮಕವಾದ ದಿನದಿಂದಲೂ ಕಾಲೇಜಿನ ಅಭಿವೃದ್ಧಿಗೆ ದುಡಿಯುತ್ತಿದ್ದಾರೆ. ಕಳೆದ ಒಂದು ವಾರದಿಂದ ಇಲ್ಲಿ ಸ್ವಚ್ಛತಾ ಕಾರ್ಯ ನಡೆಯುತ್ತಿದೆ. ಪಾಲಿಕೆಯ ಹಲವಾರು ಪೌರಕಾರ್ಮಿಕರು ಸ್ವಚ್ಛತಾ ಕಾರ್ಯದಲ್ಲಿ ಭಾಗವಹಿಸಿದ್ದು, ಮಹಮ್ಮದ್ ಮುಷೀರ್ ಅವರು ಪೌರಸೇನಾನಿಗಳಿಗಾಗಿಯೇ ಸೌಹಾರ್ದ ಸಹ ಪಂಕ್ತಿ ಭೋಜನ ಏರ್ಪಡಿಸಿದ್ದು ಸ್ವಾಗತಾರ್ಹ, ಈ ನಿಟ್ಟಿನಲ್ಲಿ ನಮ್ಮ ಮೈಸೂರು ನಗರವನ್ನು ದೇಶದಲ್ಲಿ ಮತ್ತೊಮ್ಮೆ ಸ್ವಚ್ಛತಾನಗರಿ ಎಂದು ಮೊದಲ ಸ್ಥಾನಗಳಿಸಲು ಈ ಸ್ವಚ್ಛತಾ ಕಾರ್ಯ ಮುನ್ನುಡಿಯಾಗಿದೆ ಎಂದರು.

ಪೌರಕಾರ್ಮಿಕರ ಸಂಘದ ಅಧ್ಯಕ್ಷ ಸಿ.ಆರ್. ರಾಚಯ್ಯ ಮಾತನಾಡಿ, ರಾಜೀವ್‌ನಗರದ ಸರ್ಕಾರಿ ಬಾಲಕೀಯರ ಪದವಿಪೂರ್ವ ಕಾಲೇಜಿನಲ್ಲಿ ಉತ್ತಮ ಶಿಕ್ಷಣ ನೀಡುವುದರ ಜತೆ ಜತೆಯಾಗಿ ಸ್ವಚ್ಛತೆಯನ್ನೂ ಕಾಪಾಡಿಕೊಳ್ಳುತ್ತಿರುವುದು ಸಂತಸದ ವಿಷಯ, ಕಾಲೇಜಿನಲ್ಲಿ ಸ್ವಚ್ಛತಾ ಕಾರ್ಯಕ್ಕೆ ನಮ್ಮ ಸಹಕಾರ ಸದಾ ಇರುತ್ತದೆ ಎಂದು ಹೇಳಿದರು.

ಉಪನ್ಯಾಸಕ ಜಮೀರ್ ಅಹಮದ್ ಖಾನ್, ಕಾಂಗ್ರೆಸ್ ಮುಖಂಡ ಅಫ್ರೋಜ್ ಖಾನ್ ಮಾತನಾಡಿದರು. ಈ ಸಂದರ್ಭದಲ್ಲಿ ಸಿಡಿಸಿ ಸದಸ್ಯರಾದ ಮಹಮ್ಮದ್ ಮುಷೀರ್, ಮುಖಂಡರಾದ ಅಫ್ರೋಜ್ ಖಾನ್, ಮಾಜಿದ್ ಅಹಮದ್, ನಗರಪಾಲಿಕೆ ಮಾಜಿ ಸದಸ್ಯ ಹಾರೂನ್, ರಫಿ, ಸೈಯದ್ ಆರೀಫ್, ಗಫೂರ್ ಆಜಾದ್, ಇನ್ನಿತರರು ಇದ್ದರು.

# ಗುರುರವಿದಾಸ್ ಜಿ ಜನ್ಮ ದಿನಾಚರಣೆ



ಮೈಸೂರು: ಬಿಜೆಪಿ ಪಕ್ಷದ ಕಛೇರಿಯಲ್ಲಿ ಎಸ್ಸಿ ಮೋರ್ಚಾವತಿಯಿಂದ ಸಂತ ಶಿರೋಮಣಿ ಗುರು ರವಿದಾಸ್ ಜಿ ಅವರ ಜನ್ಮ ದಿನ ಆಚರಿಸಲಾಯಿತು.

ಬಿಜೆಪಿ ನಗರಾಧ್ಯಕ್ಷ ರವಿದಾಸ್ ಜಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು. ಸಮಾನತೆಯ ಹರಿಕಾರರು ಅಸಮಾನತೆ ವಿರುದ್ದ ದಾರ್ಶನಿಕತೆ ಮಾರ್ಗದಲ್ಲಿ ಭಕ್ತಿಯ ದಾರಿಯಲ್ಲಿ ಸಂತ ಶಿರೋಮಣಿ ರವಿದಾಸ್ ಜಿ ಭಕ್ತಿ ಚಳು ವಳಿಯ ಮಹಾನ್ ಕವಿಯಾಗಿದ್ದಾರೆ. ಸಮಾಜ ಸುಧಾರಕ ಮತ್ತು ಆಧ್ಯಾತ್ಮಿಕ ಗುರುಗಳಾಗಿದ್ದ ಅವರು ಜಾತಿ ಪದ್ಧತಿಯನ್ನು ವಿರೋಧಿಸಿ, ಸಮಾನತೆ, ಪ್ರೀತಿ ಮತ್ತು ಭಗವಂತನ ಮೇಲಿನ ಭಕ್ತಿಯನ್ನು ಬೋಧಿಸಿದ ಅವರು, ವಾರಣಾಸಿಯಲ್ಲಿ ಜನಿಸಿದ ಇವರು ಚರ್ಮಕಾರರ ಸಮುದಾಯದಿಂದ ಬಂದವರೆಂದು ಸ್ಮರಿಸಿದರು.

ವಿಧಾನ ಪರಿಷತ್ ಮಾಜಿ ಸದಸ್ಯ ಸಿದ್ದರಾಜು, ಗ್ರಾಮಾಂತರ ಅದ್ಯಕ್ಷ ಎಂ.ಸುಬ್ಬಣ್ಣ, ವಕ್ತಾರ ಮೋಹನ್, ನಗರ ಪ್ರಧಾನ ಕಾರ್ಯದರ್ಶಿ ಸೋಮಸುಂದರ್, ಸಿ.ಕೆ.ರುದ್ರಮೂರ್ತಿ, ಎಸ್ ಮೋರ್ಚಾ ಅದ್ಯಕ್ಷ ಅನಿಲ್, ಶೈಲೇಂದ್ರ, ಎಸ್.ಟಿ.ಮೋರ್ಚಾ ಅದ್ಯಕ್ಷ ಪಡುವಾರಹಳ್ಳಿ ಎಂ.ರಾಮಕೃಷ್ಣ, ಕಾರ್ತಿಕ್, ಮರಿಯಪ್ಪ, ಸ್ವಾಮಿ, ರಾಕೇಶ್ ಗೌಡ, ಲೋಹಿತ್, ಸಚಿನ್ ಗೌಡ, ಕೆ.ಗಿರೀಶ್, ಎನ್.ಯೋಗಾನಂದ, ನಾರಾಯಣ ಲೋಲಪ್ಪ, ಕೃಷ್ಣನಾಯಕ, ಮಹೇಶ್ ರಾಜೇಅರಸ್, ಜಿ.ಎಂ.ಪಂಚಾಕ್ಷರಿ, ತ್ಯಾಗರಾಜ್, ಸರ್ವೇಶ್, ಶಿವರಾಜ್, ರಂಗಸ್ವಾಮಿ, ಚಿಕ್ಕವೆಂಕಟು, ಗುರುವಿನಾಯಕ, ನಂದಕುಮಾರ್, ಸೋಮು, ಪಾಪಣ್ಣ, ಚೆಲುವರಾಜ್ ಮತ್ತಿತರಿದ್ದರು.

# ಆಧಾರ ನಿರುದ್ಯೋಗಿಗಳಿಗೆ ಆಧಾರ



ಚಾಮರಾಜನಗರ, ಆಧಾರ ಗ್ರೂಪ್ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸಲಿದೆ ಎಂದು ಆಧಾರ ಗ್ರೂಪ್ ಮಾಲೀಕ ಹಾಗೂ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಮಹೇಶ್ ತಿಳಿಸಿದರು.

ನಗರದ ಮಾಯಾ ಗಾರ್ಡನ್ ಹೋಟೆಲ್ ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಆಧಾರ ಗ್ರೂಪ್ ಸ್ಥಳೀಯ ವಿದ್ಯಾವಂತ, ಪ್ರತಿಭಾವಂತ, ಮಧ್ಯಮ ವರ್ಗದ, ಕುಟುಂಬದ ಯುವಕರಿಂದ ಸ್ಥಾಪಿಸಲ್ಪಟ್ಟ ಸಂಸ್ಥೆಯಾಗಿದ್ದು, ಸ್ಥಳೀಯರಿಗೆ ಹೆಚ್ಚಿನ ಉದ್ಯೋಗ ಸೃಷ್ಟಿಸುವ ನಿಟ್ಟಿನಲ್ಲಿ ಹಾಗೂ ಗ್ರಾಹಕರಿಗೆ ಉತ್ತಮ ಗುಣಮಟ್ಟದ ಪದಾರ್ಥಗಳನ್ನು ಖರೀದಿಸಲು ಆರ್ಥಿಕವಾಗಿ ನಮ್ಯತೆ ಒದಗಿಸುವುದಾಗಿದೆ. ಕಳೆದ ಒಂದು ವರ್ಷದಿಂದ ಚಾಮರಾಜನಗರದಲ್ಲಿ ಎರಡು ಶೋರೂಂ ಗಳನ್ನು ಹೊಂದಿದೆ. ರೋಟರಿ ಭವನ ಪಕ್ಕದಲ್ಲಿ ತಾಲೂಕು ಕಚೇರಿಯ ಎದುರು ಮುಖ್ಯ ನಿರ್ವಾಹಕ ಕಚೇರಿ ಮತ್ತು ಫರ್ನಿಚರ್ ಶೋರೂಂ ಹಾಗೂ ಭಗೀರಥ ನಗರದ ಗುರು ರಾಘವೇಂದ್ರ ಥಿಯೇಟರ್ ಎದುರು ಎಲೆಕ್ಟ್ರಿಕ್ ಸ್ಕೂಟರ್ ಶೋರೂಂ. ಮಾರುಕಟ್ಟೆಯಲ್ಲಿ ಆಧಾರ್ ಗ್ರೂಪ್ ನ ಹೊಸ ಕ್ರಾಂತಿ ಸೃಷ್ಟಿಯಾಗಿದ್ದು, ನೂರಕ್ಕೂ ಹೆಚ್ಚು ಜನರು ಬ್ರಾಂಡ್ ಮತ್ತು ಖರೀದಿ ಯೋಜನೆಯನ್ನು ಪ್ರಮೋಟ್ ಮಾಡುವ ಮೂಲಕ ಆದಾಯ ಸೃಷ್ಟಿಸಿಕೊಂಡಿದ್ದಾರೆ ಕೆಲವೇ ತಿಂಗಳುಗಳಲ್ಲಿ ಸ್ವಂತ ಉತ್ಪಾದನಾ ಘಟಕವನ್ನು ತೆರೆಯಲು ಯೋಜನೆ ರೂಪಿಸಿದೆ ಎಂದು ಆಧಾರ ಗ್ರೂಪ್ ನ ಸನ್ಮಾನಿತರು ಹಾಗೂ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹೇಶ್ ತಿಳಿಸಿದರು. ಆಧಾರ ಗ್ರೂಪ್ ಸಂಸ್ಥೆಯ ನಿರ್ದೇಶಕ ಬೀರೇಶ್, ಶಾಖಾಧಿಕಾರಿ ಮಣಿಶಂಕರ್, ಸಹ ನಿರ್ದೇಶಕರಾದ ಶಿವಕುಮಾರ್, ನಾಗು, ಬಸವಣ್ಣ, ಹಾಗೂ ಸುಮಾರು ಸಾವಿರಕ್ಕೂ ಹೆಚ್ಚು ಆಧಾರ ಗ್ರೂಪ್ ನ ಸದಸ್ಯರು ಸೇರಿದಂತೆ ಉಪಸ್ಥಿತರಿದ್ದರು.

# ಗುಣಮಟ್ಟದ ಶಿಕ್ಷಣಕ್ಕೆ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಿ: ರಾಜೀವ್



ಚಾಮರಾಜನಗರ, ಮೌಲ್ಯಾಧಾರಿತ ಹಾಗೂ ಗುಣಮಟ್ಟದ ಶಿಕ್ಷಣಕ್ಕಾಗಿ ಪೋಷಕರು ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಬೇಕು ಎಂದು ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ ರಾಜೀವ್ ತಿಳಿಸಿದರು.

ತಾಲೂಕಿನ ಸಮೂಹ ಸಂಪನ್ಮೂಲ ಕೇಂದ್ರ ಮಂಗಲ ವ್ಯಾಪ್ತಿಯ ಕಿರಗಸೂರು ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಜಿಲ್ಲಾ ಪಂಚಾಯತಿ, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿಗಳ ಕಚೇರಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ವತಿಯಿಂದ ನಡೆದ ಕ್ಲಸ್ಟರ್ ಹಂತದ ಎಫ್‌ಎಲ್‌ಎನ್ ಆಧಾರಿತ ಕಲಿಕಾ ಹಬ್ಬವನ್ನು ಉದ್ಘಾಟಿಸಿ ಮಾತನಾಡಿದರು.

ಕಲಿಕಾ ಹಬ್ಬವು ಮಕ್ಕಳ ಕಲಿಕೆ ಹೇಗಿದೆ ಎಂಬುದನ್ನು ತಿಳಿಯುವುದಾಗಿದೆ. ಈ ಕಲಿಕಾ ಹಬ್ಬವು ಐದನೇ ತರಗತಿಯ ಒಳಗಿನ ವಿದ್ಯಾರ್ಥಿಗಳಿಗೆ ಏಳು ರೀತಿಯ ವಿವಿಧ ಚಟುವಟಿಕೆಗಳಿಗೆ ಸಂಬಂಧಿಸಿದೆ. ಇತ್ತೀಚಿನ ದಿನಗಳಲ್ಲಿ ಪೋಷಕರು ತಮ್ಮ ಮಕ್ಕಳನ್ನು ಖಾಸಗಿ ಶಾಲೆಗಳಿಗೆ ಸೇರಿಸುತ್ತಿದ್ದಾರೆ. ಖಾಸಗಿ ಶಾಲೆಗಳಿಗೆ ಸೇರಿಸುವುದು ಬೇಡ ಎನ್ನುತ್ತಿಲ್ಲ ಆದರೆ ಸರ್ಕಾರಿ ಶಾಲೆಯಲ್ಲಿ ಸರ್ಕಾರವು ಮಕ್ಕಳ ಕಲಿಕೆಗೆ ಕಲಿಕಾ ಹಬ್ಬದಂತಹ ಅನೇಕ ಕಾರ್ಯಕ್ರಮಗಳನ್ನ ನಡೆಸುತ್ತಿದೆ ಅಲ್ಲದೆ ಮೂಲಭೂತ ಸೌಕರ್ಯಗಳನ್ನು ಉಚಿತವಾಗಿ ಒದಗಿಸುತ್ತಿದೆ ಇಂತಹ ಸೌಲಭ್ಯಗಳು ಖಾಸಗಿ ಶಾಲೆಗಳಲ್ಲಿ ನೀಡುವುದಿಲ್ಲ. ಖಾಸಗಿ ಶಾಲೆಗಳಲ್ಲಿ ಕಲಿಕೆಯ ಜೊತೆಗೆ ಮೌಲ್ಯ ಕುಸಿಯುತ್ತಿದೆ ಆದರೆ ಸರ್ಕಾರಿ ಶಾಲೆಯಲ್ಲಿ ಮೌಲ್ಯಾಧಾರಿತ ಶಿಕ್ಷಣ ಹೆಚ್ಚಾಗಿದೆ. ಸರ್ಕಾರಿ ಶಾಲೆಯಲ್ಲಿ ಓದಿ ಎಷ್ಟೋ ವಿದ್ಯಾರ್ಥಿಗಳು ಉನ್ನತ ಸ್ಥಾನಮಾನ ಗಳಿಸಿರುವುದರ ಜೊತೆಗೆ ಉತ್ತಮ ಸಾಧನೆ ಮಾಡಿದ್ದಾರೆ. ಆದ್ದರಿಂದ ಖಾಸಗಿ ಶಾಲೆಯ ವಿದ್ಯಾರ್ಥಿಗಳಿಗೆ ನಮ್ಮ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಹೋಲಿಕೆ ಮಾಡಿದರೆ ಯಾವುದರಲ್ಲೂ ನಮ್ಮ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳು ಕಡಿಮೆ ಇಲ್ಲ. ಕಲಿಕಾ ಹಬ್ಬದಂತಹ ಕಾರ್ಯಕ್ರಮಗಳನ್ನು ಮಾಡುವ ಉದ್ದೇಶ ಪೋಷಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ಸೇರಿಸಿ ಸರ್ಕಾರಿ ಶಾಲೆಗಳ ಉಳಿವಿಗೆ ಸಹಕಾರ ನೀಡಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಮೋಹನ್ ಕುಮಾರ್, ಪಟೇಲ್ ನಾಗರಾಜಪ್ಪ, ಲೆಕ್ಕಪರಿಶೋಧಕ ಮಹೇಂದ್ರ ಕೆ.ಎಸ್, ಸಿಆರ್ ಪಿ ಶಿವಮೂರ್ತಿ, ಮುಖ್ಯ ಶಿಕ್ಷಕ ಸ್ವಾಮಿ, ಬಿ ಆರ್ ಪಿ ಯವರಾದ ರಮೇಶ್, ಸವಿತಾ, ತಾಲೂಕು ಶಿಕ್ಷಕರ ಸಂಘದ ಅಧ್ಯಕ್ಷ ಸಿ.ಕೆ. ರಾಮಸ್ವಾಮಿ, ಉಮಾಪತಿ, ಮಂಗಲ ಕ್ಲಸ್ಟರ್ ವ್ಯಾಪ್ತಿಯ ಶಾಲೆಗಳ ಮುಖ್ಯ ಶಿಕ್ಷಕರಾದ ಪುಟ್ಟಸ್ವಾಮಿ.ಎಂ, ರಾಜು, ಮಹೇಶ್.ಕೆ, ರತ್ನಮ್ಮ, ಕುಮಾರ್, ದಾನೇಂದ್ರ ಸೇರಿದಂತೆ ಗ್ರಾಮಸ್ಥರು ಹಾಗೂ ಶಾಲೆಯ ಸಿಬ್ಬಂದಿಗಳು ಹಾಜರಿದ್ದರು.

# 15 ದಿನದಲ್ಲಿ ಕಬ್ಬಿನ ಬಾಕಿಗೆ ಕ್ರಮ

## ಡಿಸಿ ಜಿ.ಲಕ್ಷ್ಮೀಕಾಂತರೆಡ್ಡಿ ಹೇಳಿಕೆ | ಸಕ್ಕರೆ ಕಾರ್ಖಾನೆ ಆಡಳಿತ ಮಂಡಳಿ ಜೊತೆ ಸಭೆ



ಮೈಸೂರು: ಹದಿನೈದು ದಿನಗಳಲ್ಲಿ ಟನ್ ಕಬ್ಬಿಗೆ ಬಾಕಿ ಹಣವನ್ನು ಕಬ್ಬು ಕಾರ್ಖಾನೆ ಮಾಲೀಕರಿಂದ ಕೊಡಿಸುವ ನಿಟ್ಟಿನಲ್ಲಿ ಕ್ರಮವಹಿಸಲಾಗುವುದು ಎಂದು ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತರೆಡ್ಡಿ ತಿಳಿಸಿದರು.

ನಗರದ ಜಿಲ್ಲಾ ಪಂಚಾಯಿತಿಯ ಡಿ.ದೇವರಾಜ ಅರಸು ಸಭಾಂಗಣದಲ್ಲಿ ಮಂಗಳವಾರ ನಡೆದ ಕಬ್ಬು ಬೆಳೆಗಾರರು ಹಾಗೂ ಬನ್ನಾರಿ ಅಮ್ಮನ್ ಸಕ್ಕರೆ ಕಾರ್ಖಾನೆ ಆಡಳಿತ ಮಂಡಳಿ ಜೊತೆಗಿನ ಸಭೆಯಲ್ಲಿ ಮಾತನಾಡಿದರು. ಕಬ್ಬು ಬೆಳೆಗಾರರಿಗೆ ಸರ್ಕಾರ ಹಾಗೂ ಸಕ್ಕರೆ ಕಾರ್ಖಾನೆಗಳೂ ಎರಡೂ ಸೇರಿ ಪ್ರತಿ ಟನ್ ಕಬ್ಬಿಗೆ ಬಾಕಿ ನೀಡಬೇಕಾಗಿರುವ ನೂರು ರೂಪಾಯಿಯನ್ನು ಇನ್ನೂ ಹದಿನೈದು ದಿನದಲ್ಲಿ ಸಂದಾಯ ಮಾಡಲು ಕ್ರಮ ವಹಿಸಲಾಗುತ್ತದೆ. ರೈತರು ಬೆಳೆದ ಕಬ್ಬಿಗೆ ಹೆಚ್ಚುವರಿಯಾಗಿ ಸರ್ಕಾರ 50 ರೂಪಾಯಿ ನೀಡಬೇಕು ಹಾಗೂ ಕಬ್ಬು ಸರಬರಾಜು ಮಾಡಿಸಿ ಕೊಂಡಿರುವ ಸಕ್ಕರೆ ಕಾರ್ಖಾನೆಯೂ 50 ರೂಪಾಯಿಯನ್ನು ನೀಡಬೇಕು. ಇದರ ಅನ್ವಯ ಸರ್ಕಾರವು ಆದ್ಯತೆ ಮೇರೆಗೆ ಮೈಸೂರು ಜಿಲ್ಲೆಗೆ ಮುಂಚಿತವಾಗಿಯೇ ಹಣವನ್ನು ಬಿಡುಗಡೆ ಮಾಡುತ್ತಿದೆ. ಸರ್ಕಾರದ ಮಟ್ಟದಿಂದ ಜಿಲ್ಲಾ ಮಟ್ಟಕ್ಕೆ ಹಣವು ಬರಲು ವಾರದ ಮೇಲೆಗಾಗುತ್ತದೆ. ತದನಂತರ ಇಲ್ಲಿ ಪ್ರಕ್ರಿಯೆಗಳು ಮುಗಿಯಲು ಒಂದು ವಾರಕ್ಕೂ ಹೆಚ್ಚು ಸಮಯಬೇಕಾಗುತ್ತದೆ. ಈ ಹಿನ್ನೆಲೆಯಲ್ಲಿ ಹದಿನೈದು ದಿನಗಳ ನಂತರ ರೈತರ ಬ್ಯಾಂಕ್ ಖಾತೆಗೆ ಹಣ ಜಮೆಯಾಗುತ್ತದೆ ಎಂದು ಹೇಳಿದರು.

ಬನ್ನಾರಿ ಅಮ್ಮನ್ ಸಕ್ಕರೆ ಕಾರ್ಖಾನೆಯೂ ಕೂಡ ಇದೇ ಸಮಯದಲ್ಲೇ ತಾನು ನೀಡಬೇಕಾಗಿರುವ 50 ರೂಪಾಯಿಯನ್ನು ರೈತರ ಖಾತೆಗೆ ಜಮೆ ಮಾಡಬೇಕು. ಯಾವುದೇ ಕಾರಣಕ್ಕೂ ಸಬೂಬುಗಳನ್ನು ಹೇಳಬಾರದು. ಇದು ಸರ್ಕಾರದ ಆದೇಶವಾಗಿದ್ದೂ, ಅದೇಶವನ್ನು ಕಡ್ಡಾಯವಾಗಿ ಪಾಲಿಸಬೇಕಾಗಿರುವುದು ಕಾರ್ಖಾನೆಯ ಕರ್ತವ್ಯವಾಗಿದೆ. ಇದನ್ನು ಮೀರಿ ರೈತರ ಬಾಕಿ ಹಣವನ್ನು ಪಾವತಿ ಮಾಡಲು ವಿಫಲರಾದರೆ ಕಾನೂನಾತ್ಮಕ ಕ್ರಮಗಳನ್ನು ತಗೆದುಕೊಂಡು ಸಕ್ಕರೆ ಕಾರ್ಖಾನೆ ಮೇಲೆ ದಂಡವನ್ನು ವಿಧಿಸುವ ಹಾಗೂ ಬೇರೆ ರೀತಿಯ ಕ್ರಮಗಳನ್ನು ನಿರ್ದಾಕ್ಷಿಣ್ಯವಾಗಿ ತಗೆದುಕೊಳ್ಳಲಾಗುತ್ತದೆ ಎಂದು ಎಚ್ಚರಿಕೆಯನ್ನು ನೀಡಿದರು.

ಸಕ್ಕರೆ ಕಾರ್ಖಾನೆಯಲ್ಲಿ ಕಬ್ಬಿನ ಇಳುವರಿ ಅಂಶದಲ್ಲಿ ವಂಚನೆ ಮಾಡಲಾಗುತ್ತಿದೆ ಎಂದು ರೈತರು ಆರೋಪ ಮಾಡುತ್ತಿದ್ದಾರೆ. ಶಂಕೆಯನ್ನು ವ್ಯಕ್ತಪಡಿಸುತ್ತಿದ್ದಾರೆ. ಹೀಗಾಗಿ ಕಳೆದ ವರ್ಷವೂ ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯ ವತಿಯಿಂದ ಕಬ್ಬಿನ ಇಳುವರಿಯ ಪರೀಕ್ಷೆ ಮಾಡಿಸಲಾಗುತ್ತು. ಅವರು ಯಾವುದೇ ವ್ಯತ್ಯಾಸ ಇಲ್ಲ ಎಂದು ವರದಿ ಕೊಟ್ಟಿದ್ದರು. ಆದರೆ ರೈತರ ಅನುಮಾನವೂ ದೂರವಾಗದ ಹಿನ್ನೆಲೆಯಲ್ಲಿ ಈ ಸಲ ಕಾರ್ಖಾನೆಯಲ್ಲಿ ಕಬ್ಬು ಅರೆಯುವ ಹೊತ್ತಿಗೆ ತಾವೇ ಖುದ್ದಾಗಿ ಅನಿರೀಕ್ಷಿತವಾಗಿ ಭೇಟಿ ನೀಡಿ, ಸ್ಥಳದಲ್ಲೇ ಇಳುವರಿ ಪರೀಕ್ಷೆ ಮಾಡು ತ್ತೇವೆ. ನಮ್ಮ ಜೊತೆ ರೈತ ಸಂಘಟನೆಗಳ ಮುಖಂಡರು, ಕಬ್ಬು ಬೆಳೆಗಾರರು ಇರುತ್ತಾರೆ. ಅವರ ಸಮ್ಮುಖದಲ್ಲೇ ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯವರಿಂದ ಪರೀಕ್ಷಾ ಉಪಕರಣಗಳನ್ನು ತರಿಸಿ ಪರೀಕ್ಷೆಯನ್ನು ಮಾಡಲಾಗುತ್ತದೆ. ಇದನ್ನು ಒಂದೇ ಸಲಕ್ಕೆ ಮುಗಿಸದೇ ಎರಡೂ-ಮೂರು ಬಾರಿ ಪರೀಕ್ಷೆ ನಡೆಸಿ, ಅಮೇಲೆ ಒಂದು ನಿರ್ಣಯಕ್ಕೆ ಬರಲಾಗುತ್ತದೆ ಎಂದು ತಿಳಿಸಿದರು. ಜಿಲ್ಲಾ ಪಂಚಾಯತಿ ಸಿಇಒ ಎಸ್.ಯುಕೇಶ್ ಕುಮಾರ್, ಕೃಷಿ ಇಲಾಖೆ ಜಂಟಿ ನಿರ್ದೇಶಕ ಕೆ.ಎಚ್.ರವಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ಮಂಟೇಸ್ವಾಮಿ, ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್,ಸಂಘಟನಾ ಕಾರ್ಯದರ್ಶಿ ಹತ್ತಳ್ಳಿ ದೇವರಾಜು,ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರ ಸಂಘದ ರಾಜ್ಯಾಧ್ಯಕ್ಷ ಹಳ್ಳಿ ಕೆರೆಹುಂಡಿ ಭಾಗ್ಯರಾಜ್, ಕೆರೆ ಹುಂಡಿ ರಾಜಣ್ಣ ವಳಗೇರ ಗಣೇಶ, ದೇವನೂರು ನಾಗೇಂದ್ರ ಮತ್ತಿತರರು ಇದ್ದರು.

### ರೈತರಿಂದ ಜಿಲ್ಲಾಧಿಕಾರಿಗೆ ಹಲವಾರು ಬೇಡಿಕೆ

**ರೈತ ಮುಖಂಡರು ಜಿಲ್ಲಾಧಿಕಾರಿಗಳಿಗೆ ಹಲವಾರು ಬೇಡಿಕೆ ಸಲ್ಲಿಸಿದರು. ಉತ್ತರ ಕರ್ನಾಟಕದಲ್ಲಿ ಕಬ್ಬಿನ ಇಳುವರಿಯನ್ನು 10.15 ರಷ್ಟು ನೀಡಲಾಗುತ್ತದೆ. ನಮ್ಮಲ್ಲಿ ಮಾತ್ರ 9.5ರಷ್ಟನ್ನು ನೀಡಲಾಗುತ್ತದೆ. ಈ ತಾರತಮ್ಯ ತಪ್ಪಿಸಬೇಕು. ಸಕ್ಕರೆ ಕಾರ್ಖಾನೆಯೂ ಕಬ್ಬು ಬೆಳೆಗಾರರಿಗೆ ನೀಡುವ ಅಣುಗೊಬ್ಬರ, ಸೂಕ್ಷ್ಮ ಪೋಷಕಾಂಶಗಳಿಗೆ ವಿಧಿಸುವ ಬಡ್ಡಿಯನ್ನು ರದ್ದುಪಡಿಸಬೇಕು. ಕಾರ್ಖಾನೆ ಜೊತೆ ದ್ವಿಪಕ್ಷೀಯ ಒಪ್ಪಂದ ಮಾಡಿಕೊಳ್ಳುವಂತೆ ಯೋಜನೆ ಜಾರಿಯಾಗಬೇಕು. ಸಕಾಲದಲ್ಲಿ ಕಬ್ಬನ್ನು ಕಟಾವು ಮಾಡಿಕೊಳ್ಳಬೇಕು ಎಂದು ಆಗ್ರಹಿಸಿದರು.**

> **ಕಬ್ಬಿನ ಕಾರ್ಖಾನೆಗಳಿಂದ ಹೆಚ್ಚುವರಿ ಉಪ ಉತ್ಪನ್ನಗಳ ವೈಜ್ಞಾನಿಕ ಬೆಲೆ ಸಿಗುತ್ತಿಲ್ಲ. ಅಲ್ಲದೆ, ಕಟಾವಿನ ಅವಧಿ ಮುಗಿದರೂ ಕಟಾವು ಮಾಡದೇ ವಿಳಂಬ ಮಾಡುವ ಕಾರ್ಖಾನೆಗಳು ವಿಳಂಬದ ನಷ್ಟ ಭರಿಸಬೇಕು. ಉತ್ತರ ಕರ್ನಾಟಕದಲ್ಲಿರುವ 10.15ರಷ್ಟನ್ನು ನಮ್ಮಲ್ಲಿಯೂ ನೀಡಬೇಕು. ಕಾರ್ಖಾನೆ ಜತೆಗಿನ ದ್ವಿಪಕ್ಷೀಯ ಒಪ್ಪಂದ ಜಾರಿಯಾಗಬೇಕು.**
> **– ಕುರುಬೂರು ಶಾಂತಕುಮಾರ್**
> ಅಧ್ಯಕ್ಷ ಕಬ್ಬು ಬೆಳೆಗಾರರ ಸಂಘ

# ಜಾಗೃತಿ ಜಾಥಾ ಮೆರವಣಿಗೆ




ಕೆ ಆರ್ ಪೇಟೆ: ಯುವಜನರು ಹಾಗೂ ವಿದ್ಯಾರ್ಥಿಗಳು ರಸ್ತೆ ಸುರಕ್ಷತಾ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವ ಮೂಲಕ ಅಪಘಾತಗಳಿಂದ ಮುಕ್ತರಾಗಿ ಸುರಕ್ಷಿತವಾಗಿ ವಾಹನ ಚಾಲನೆ ಮಾಡಬೇಕು ಎಂದು ಕೆ.ಆರ್. ಪೇಟೆ ಪಟ್ಟಣದ ಜೆಎಂಎಫ್‌ಸಿ ಹಿರಿಯ ಶ್ರೇಣಿ ನ್ಯಾಯಾಲಯದ ನ್ಯಾಯಾಧೀಶ ರಾದ ಸುಧೀರ್ ಮನವಿ ಮಾಡಿದರು*.

ಪಟ್ಟಣದಲ್ಲಿ ನಾಗಮಂಗಲದ ಪ್ರಾದೇಶಿಕ ಸಾರಿಗೆ ಇಲಾಖೆ ಹಾಗೂ ಪಟ್ಟಣ ಪೋಲೀಸರು ಸಂಯುಕ್ತವಾಗಿ ರಸ್ತೆ ಸುರಕ್ಷತಾ ಸಪ್ತಾಹದ ಅಂಗವಾಗಿ ಆಯೋಜಿಸಿದ್ದ ಜಾಗೃತಿ ಜಾಥಾ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದರು. 18 ವರ್ಷ ತುಂಬದೇ ಇರುವ ಯುವ ಜನರು ಹಾಗೂ ವಿದ್ಯಾರ್ಥಿಗಳು ದ್ವಿಚಕ್ರ ವಾಹನಗಳು ಸೇರಿದಂತೆ ಯಾವುದೇ ವಾಹನಗಳನ್ನು ಚಾಲನೆ ಮಾಡಬಾರದು. ವಾಹನ ಚಾಲನಾ ಪರವಾನಗಿಯನ್ನು ಹೊಂದಿಲ್ಲದೆ ವಾಹನ ಚಾಲನೆ ಮಾಡುವುದು ಕಾನೂನಿನ ಪ್ರಕಾರ ಅಕ್ಷಮ್ಯವಾದ ಅಪರಾಧವಾಗಿದೆ. ವಾಹನ ಚಾಲನಾ ಪರವಾನಗಿ ಹೊಂದಿಲ್ಲದೆ ಅಪಘಾತ ನಡೆಸಿದರೆ, ವಾಹನಗಳ ಮಾಲೀಕರು ತೀವ್ರ ಸಂಕಷ್ಟವನ್ನು ಎದುರಿಸ ಬೇಕಾಗುತ್ತದೆ ಆದ್ದರಿಂದ ಪೋಷಕರು ತಮ್ಮ ಮಕ್ಕಳು ವಾಹನ ಚಾಲನೆ ಮಾಡುವುದನ್ನು ಕಡ್ಡಾಯವಾಗಿ ನಿರ್ಬಂಧಿಸಬೇಕು ದ್ವಿಚಕ್ರವಾಹನ ಚಾಲನೆ ಮಾಡುವಾಗ ಹೆಲ್ಮೆಟ್ ಧರಿಸುವ ಜೊತೆಗೆ ಮೊಬೈಲ್ ಫೋನಿನಲ್ಲಿ ಸಂಭಾಷಣೆ ಮಾಡಬಾರದು ಎಂದು ಕಿವಿಮಾತು ಹೇಳಿದ ನ್ಯಾಯಾಧೀಶರು ಕಾರುಗಳನ್ನು ಚಾಲನೆ ಮಾಡುವಾಗ ಕಡ್ಡಾಯವಾಗಿ ಸೀಟ್ ಬೆಲ್ಟ್ ಧರಿಸಿ ಸುರಕ್ಷಿತವಾಗಿ ಚಾಲನೆ ಮಾಡಬೇಕು ಎಂದು ಮನವಿ ಮಾಡಿದರು.

ನಾಗಮಂಗಲದ ಪ್ರಾದೇಶಿಕ ಸಾರಿಗೆ ಇಲಾಖೆಯ ಸಹಾಯಕ ಸಾರಿಗೆ ಅಧಿಕಾರಿಹೊನ್ನೇಗೌಡ ಮಾತನಾಡಿದರು. ನಾಗಮಂಗಲ ಡಿವೈಎಸ್ ಪಿ ಚೆಲುವರಾಜು, ಅಪರ ಸಿವಿಲ್ ನ್ಯಾಯಾಧೀಶರಾದ ದೇವರಾಜು, ಅರ್ಪಿತಾ, ಪಾರ್ವತಿ, ಪಟ್ಟಣ ಪೊಲೀಸ್ ಠಾಣೆಯ ಆರಕ್ಷಕ ನಿರೀಕ್ಷಕರಾದ ಸುಮಾರಾಣಿ, ಗ್ರಾಮಾಂತರ ಠಾಣೆಯ ಆನಂದೇಗೌಡ, ಹಿರಿಯ ವಕೀಲರಾದ ಕೆ.ಆರ್. ಮಹೇಶ್, ಎಂ.ಆರ್.ಪ್ರಸನ್ನ ಕುಮಾರ್, ಕೆ.ಎನ್.ನಾಗರಾಜು, ಎನ್.ಆರ್.ರವಿಶಂಕರ್, ಸಹಾಯಕ ಸಾರಿಗೆ ಅಧಿಕಾರಿಗಳಾದ, ಸತೀಶ್, ಶಹಬಾಜ್ ಖಾನಂ, ನಂದೀಶ್, ಹಂಪಾ, ಸಂಜಯ್ ಸೇರಿದಂತೆ ವಿವಿಧ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಜಾಗೃತಿ ಜಾಥಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಘೋಷಣೆ ಕೂಗಿ ಶ್ರೀ ಸಾಮಾನ್ಯರಲ್ಲಿ ರಸ್ತೆ ಸುರಕ್ಷತೆ ಕುರಿತು ಜಾಗೃತಿ ಮೂಡಿಸಿದರು.

# ಸಾರಂತ ರಂಗ ತಂಡ ಅಭಿನಯ




ಮೈಸೂರು: ಸಂಚಲನ ಮೈಸೂರು ದಶಮಾನೋತ್ಸವದ ನಾಟಕೋತ್ಸವದ ನಾಲ್ಕನೇ ದಿನವಾದ ಮಂಗಳವಾರ ಮಹಾಜನ ಕಾಲೇಜಿನ ಸಾರಂತ ರಂಗ ತಂಡ ಊರ ಸುಟ್ಟರೂ ಹನುಮ್ಮಪ್ಪ ಹೊರಗ ನಾಟಕವನ್ನು ಮನೋಜ್ಞವಾಗಿ ಅಭಿನಯಿಸಿದರು.

ಕಿರುರಂಗಮಂದಿರದಲ್ಲಿ ಹನುಮಂತ ಹಾಲಿಗೆರೆ ರಚನೆಯ ಸುಮತಿ ಕೆ.ಆರ್ ನಿರ್ದೇಶನದಲ್ಲಿ ಕಾಲೇಜು ವಿದ್ಯಾರ್ಥಿಗಳು ಪ್ರಸ್ತುತಪಡಿಸಿದರು. ನಾಟಕವು ದೇವರ ಮೇಲೆ ನಂಬಿಕೆ ಮುಖ್ಯ ಆದರೆ ಮೂಢ ನಂಬಿಕೆಯಲ್ಲ ಎಂಬುದನ್ನು ಸಾರುತ್ತದೆ .ಹನುಮ ಎಂಬ ದೇವರ ವಿಗ್ರಹದ ಪ್ರತಿಷ್ಠಾಪನೆಗಾಗಿ ಎರಡು ಊರುಗಳ ಮಧ್ಯ ಜರಗುವ ಜಗಳ ಕಿತ್ತಾಟಗಳನ್ನು ಕಲಾವಿದರು ಸುಂದರವಾಗಿ ಅಭಿನಯಿಸಿ ತೋರಿಸಿದರು. ದೇವರ ಮೇಲಿನ ಅತಿಯಾದ ಪ್ರೀತಿ ಕುರುಡುತನ ಎರಡು ಊರುಗಳ ಮಧ್ಯೆ ಬಿಕ್ಕಟ್ಟನ್ನು ಸೃಷ್ಟಿಸುವುದಲ್ಲದೆ ಅದು ನ್ಯಾಯಾಲಯದ ಮೆಟ್ಟಿಲನ್ನು ಸಹ ಏರುತ್ತದೆ. ಕೊನೆಗೆ ಹೇಗಾದರೂ ಮಾಡಿ ದೇವರ ವಿಗ್ರಹವನ್ನು ಪಡೆದುಕೊಳ್ಳಬೇಕು ಎಂದು ಹ ಠಕ್ಕೆ ಬಿದ್ದ ಊರಿನ ಜನಗಳು 15 ವರ್ಷದ ನ್ಯಾಯಾಂಗ ಹೋರಾಟ ಮಾಡಿ ಕೊನೆಗೆ ತಮ್ಮ ಎಲ್ಲಾ ಆಸ್ತಿಯನ್ನು ಮಾರಿ ಊರನ್ನು ಬಿಟ್ಟು ಹೋಗುತ್ತಾರೆ. ಅಂತಿಮವಾಗಿ ಯಾವ ದೇವರಿಗಾಗಿ ಅವರು ಹೋರಾಟ ಮಾಡಿದ್ದರು ಅದೇ ದೇವರ ವಿಗ್ರಹವನ್ನು ತೆಗೆದುಕೊಂಡು ಹೋಗಿ ಎಂದು ಊರಿನವರಿಗೆ ಹೇಳಿದಾಗ ನಮ್ಮ ಬದುಕನ್ನು ಕಿತ್ತುಕೊಂಡ ಈ ವಿಗ್ರಹ ನಮಗೆ ಬೇಡ ಎಂದು ತಿರಸ್ಕರಿಸುವುದರೊಂದಿಗೆ ನಾಟಕ ಅಂತ್ಯಗೊಳ್ಳುತ್ತದೆ.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಎಂ.ಡಿ. ಸುದರ್ಶನ್, ಸಾಮಾಜಿಕ ಹೋರಾಟಗಾರ ಅಹಿಂದ ಜವರಪ್ಪ, ಮೈಸೂರಿನ ಬಿಜಿಎಸ್ ಕಾಲೇಜಿನ ಪ್ರಾಂಶುಪಾಲ ಡಾಕ್ಟರ್ ನಾಗರಾಜು, ರಂಗಕರ್ಮಿ ಸುರೇಶ್ ಬಾಬು, ಸುಮತಿ ಕೆ ಆರ್, ದೀಪಕ್ ಮೈಸೂರು ಉಪಸ್ಥಿತರಿದ್ದರು.

# ಲಕ್ಷ್ಮೀನಾರಾಯಣಸ್ವಾಮಿ ರಥೋತ್ಸವ



ಕೊಳ್ಳೇಗಾಲ: ಇಲ್ಲಿನ ಶ್ರೀ ಲಕ್ಷ್ಮೀನಾರಾಯಣಸ್ವಾಮಿ ರಥೋತ್ಸವ ಮಂಗಳವಾರ ಸಾವಿರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ಜರುಗಿತು.

ಪಟ್ಟಣದ ಕಾವೇರಿ ರಸ್ತೆಯಲ್ಲಿರುವ ಶ್ರೀ ಲಕ್ಷ್ಮೀನಾರಾಯಣ ಸ್ವಾಮಿ ದೇವಸ್ಥಾನದಲ್ಲಿ ವಿಶೇಷ ಪೂಜೆ ನಡೆಸಿ ಮೀನಾ ಲಗ್ನದಲ್ಲಿ ನಡೆದ ರಥೋತ್ಸವಕ್ಕೆ ಕ್ಷೇತ್ರದ ಶಾಸಕ ಎ.ಆರ್.ಕೃಷ್ಣಮೂರ್ತಿ ಅವರು ಚಾಲನೆ ನೀಡಿದರು. ಬಳಿಕ ಮಂಗಳವಾದ್ಯದೊಂದಿಗೆ ರಾಜಬೀದಿಗಳಲ್ಲಿ ರಥೋತ್ಸವ ನಡೆಯಿತು. ಈವೇಳೆ ದಾಸರುಗಳು ಜಾಗಟೆ ಹಾಗೂ ಶಂಖ ನಾದ ಮೊಳಗಿಸಿದರು.

ಮಾಂಬಳ್ಳಿಯ ದಾಸರು ಪಾರ್ವತಿ ಸತ್ತಿಗೆಯನ್ನು ಪೂಜೆ ಸಲ್ಲಿಸಿ ಆಗಮಿಸಿ ರಥೋತ್ಸವದಲ್ಲಿ ಪಾಲ್ಗೊಂಡ್ದರು. ನೆರೆದಿದ್ದ ಭಕ್ತರು ಹರಕೆ ಹೊತ್ತು ಹಣ್ಣು ಜವನೆ ಎಸೆದರು. ನಂತರ ದೇವಸ್ಥಾನಕ್ಕೆ ತೆರಳಿ ಪೂಜೆ ಸಲ್ಲಿಸಿ, ಮಹಾಮಂಗಳಾರತಿ ಸ್ವೀಕರಿಸಿದರು. ರಥೋತ್ಸವದಲ್ಲಿ ಸೇವಾರ್ಥರು ಬಾಳೆ ಹಣ್ಣು, ಮಜ್ಜಿಗೆ, ಪಾನಕ ಹಾಗೂ ಕೊಸಂಬರಿಯನ್ನು ಭಕ್ತರಿಗೆ ವಿತರಿಸಿದರು.

ಇಂದಿನ ಪೂಜಾ ಕಾರ್ಯವನ್ನು ದೇವಸ್ಥಾನದ ಪ್ರಧಾನ ಅರ್ಚಕರು ಶೇಷಾದ್ರಿ ಭಟ್ಟರು, ಸುದರ್ಶನ್ ನಡೆಸಿದರು. ವೀರಾಂಜನೇಯಸ್ವಾಮಿ ದೇವಸ್ಥಾನದ ಅರ್ಚಕ ಟಿ.ವಿ.ಎಸ್.ರಾಘವನ್, ನಂದಕುಮಾರ್ ಹಾಗೂ ಇತರರು ಇದ್ದರು.

ಈ ಸಂಧರ್ಭದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಚಂದ್ರು, ಮಾಜಿ ಸಚಿವ ಎನ್.ಮಹೇಶ್, ಮಾಜಿ ಶಾಸಕರು ಜಿ.ಎನ್.ನಂಜುಂಡಸ್ವಾಮಿ, ಎಸ್.ಬಾಲರಾಜು, ಅಪರ ಪೊಲೀಸ್ ವರಿಷ್ಠಾಧಿಕಾರಿ ಶಶಿಧರ್, ತಹಶಿಲ್ದಾರ್ ಬಸವರಾಜು, ನಗರಸಭೆ ಪೌರಯುಕ್ತ ರುದ್ರಮ್ಮ ಶರಣಯ್ಯ, ಮಾಜಿ ಸದಸ್ಯರು, ಮುಖಂಡರು ಕಂದಹಳ್ಳಿ ನಂಜುಂಡಸ್ವಾಮಿ, ಕೊಪ್ಪಾಳಿ ಮಹದೇವ ನಾಯಕ ಹಾಗೂ ಇತರರು ಇದ್ದರು. ರಥೋತ್ಸವದಲ್ಲಿ ಡಿವೈಎಸ್ಪಿ ಧರ್ಮೇಂದ್ರ ರವರ ನೇತೃತ್ವದಲ್ಲಿ ಸೂಕ್ತ ಬಂದೋಬಸ್ತ್ ಒದಗಿಸಲಾಗಿತ್ತು.

# ಪದಾಧಿಕಾರಿಗಳ ನೇಮಕ

ಕೊಳ್ಳೇಗಾಲ. ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಣದ ಚಾ.ನಗರ ಜಿಲ್ಲಾ ಉಸ್ತುವಾರಿ ಅಧ್ಯಕ್ಷ ಹಾಗೂ ಕೊಳ್ಳೇಗಾಲ ತಾಲ್ಲೂಕು ಅಧ್ಯಕ್ಷರಾಗಿ ಅಜ್ಗರ್ ಪಾಷ ಹಾಗೂ ಮಹಿಳಾ ಘಟಕ ತಾಲ್ಲೂಕು ಅಧ್ಯಕ್ಷರಾಗಿ ವಿಜಯರಾಣಿ ರನ್ನು ರಾಜ್ಯಾಧ್ಯಕ್ಷ ಪಿ.ಕೃಷ್ಣೇಗೌಡ್ರು ಅವರು ನೇಮಕ ಮಾಡಿ ಆದೇಶ ಪತ್ರ ನೀಡಿದರು.

ಇತ್ತೀಚೆಗೆ ಬೆಂಗಳೂರಿನ ರಾಜ್ಯ ಸಂಘಟನೆಯ ಕಚೇರಿಯಲ್ಲಿ ಚಾ.ನಗರ ಪದಾಧಿಕಾರಿಗಳನ್ನು ನೇಮಕಗೊಳಿಸಿ, ಕನ್ನಡ ನಾಡು, ನುಡಿ ರಕ್ಷಣೆ ಮಾಡಿ ಗಡಿ ನಾಡು ಪ್ರದೇಶಗಳಲ್ಲಿ ಕನ್ನದ ಭಾಷೆಯನ್ನು ಶಾಶ್ವತ ಗೊಳಿಸಬೇಕು. ಮುಂದಿನ ದಿನಗಳಲ್ಲಿ ಚಾ.ನಗರ ಜಿಲ್ಲೆಯ ಎಲ್ಲಾ ತಾಲ್ಲೂಕಿನಲ್ಲಿ ನಮ್ಮ ಸಂಘಟನೆಯನ್ನು ಸಂಘಟಿಸಬೇಕು ಎಂದು ಆದೇಶ ನೀಡಿದ್ದಾರೆ. ಈ ಸಂಧರ್ಭದಲ್ಲಿ ರಾಜ್ಯ ಉಸ್ತುವಾರಿ ಅಧ್ಯಕ್ಷ ಶಿವುಗೌಡ್ರು, ರಾಜ್ಯ ಉಪಾಧ್ಯಕ್ಷರು ಶಿವಕುಮಾರ್ ಗೌಡ್ರು, ಚಾ.ನಗರ ಮಹಿಳಾ ಘಟಕದ ಅಧ್ಯಕ್ಷ ಭಾಗ್ಯಲಕ್ಷ್ಮೀ, ಜಿಲ್ಲಾಧ್ಯಕ್ಷರು ಸಬ್ಬೀರ್ ಪಾಷ ಹಾಗೂ ಇತರರು ಇದ್ದರು.



**ಹೆಚ್ಚುವರಿ ಚೆಕ್‌ಪೋಸ್ಟ್ ಓಪನ್**

# ಚಾ.ನಗರ: ಕೇರಳ ದರೋಡೆ ಗ್ಯಾಂಗ್ ಮೇಲೆ ಹದ್ದಿನ ಕಣ್ಣು



ಚಾಮರಾಜನಗರ, ಗುಂಡ್ಲುಪೇಟೆ ತಾಲೂಕಿನ ಕೇರಳ ರಾಷ್ಟ್ರೀಯ ಹೆದ್ದಾರಿಯಲ್ಲಿ ದರೋಡೆಕೋರರ ಹಾವಳಿ ಮಿತಿ ಮೀರಿದೆ. ಈ ಹಿನ್ನೆಲೆ ಇದಕ್ಕೆ ಕಡಿವಾಣ ಹಾಕುವ ಉದ್ದೇಶದಿಂದ ಪೊಲೀಸರು ಅಲರ್ಟ್ ಆಗಿದ್ದು, ತಪಾಸಣೆ ಬಿಗಿಗೊಳಿಸಿದ್ದಾರೆ.

ಕೇರಳ ಹೆದ್ದಾರಿಯ ಕನ್ನೇಗಾಲ ಟೋಲ್ ಬಳಿ ಗುಂಡ್ಲುಪೇಟೆ ಠಾಣೆ ವತಿಯಿಂದ ಹೆಚ್ಚುವರಿ ಚೆಕ್ ಪೋಸ್ಟ್ ತೆರೆದು ಪೊಲೀಸರನ್ನು ನೇಮಕ ಮಾಡಿ ಗುಂಡ್ಲುಪೇಟೆಗೆ ಆಗಮಿಸುವ ಮತ್ತು ತೆರಳುವ ಪ್ರತಿಯೊಂದು ವಾಹನಗಳ ಮೇಲೆ ಹದ್ದಿನ ಕಣ್ಣಿಟ್ಟು ತಪಾಸಣೆ ಮಾಡಲಾಗುತ್ತಿದೆ.

ಚಿನ್ನದ ಉದ್ಯಮಿಗಳನ್ನೇ ಟಾರ್ಗೆಟ್ ಮಾಡುವ ದರೋಡೆಕೋರರು: ಗುಂಡ್ಲುಪೇಟೆ ಮಾರ್ಗವಾಗಿ ಕೇರಳಕ್ಕೆ ತೆರಳುವ ಚಿನ್ನದ ಉದ್ಯಮಿಗಳನ್ನೇ ಟಾರ್ಗೆಟ್ ಮಾಡಿ ದರೋಡೆ ಮಾಡುತ್ತಿದ್ದಾರೆ. ಕಳೆದ ಎರಡು ತಿಂಗಳ ಹಿಂದಷ್ಟೇ ಒಂದು ಕಾಲು ಕೆಜಿ ಚಿನ್ನ ಲೂಟಿ ಮಾಡಿ ಪರಾರಿಯಾಗಿದ್ದ ಆರೋಪಿಗಳ ಪೈಕಿ ಈಗಾಗಲೇ ಪೊಲೀಸರು 3 ಮಂದಿ ಆರೋಪಿಗಳನ್ನು ಬಂಧಿಸಿದ್ದಾರೆ. ಈ ಮಧ್ಯೆ ಪ್ರಕರಣದ ಕಿಂಗ್ ಪಿನ್ ಗಾಗಿ ಶೋಧಕಾರ್ಯ ನಡೆಸಲಾಗುತ್ತಿದೆ.

ಈ ಘಟನೆ ಮಾಸುವ ಮುನ್ನವೇ ಮತ್ತೊಂದು ಚಿನ್ನದ ಉದ್ಯಮಿಯ ದರೋಡೆ ಪ್ರಕರಣ ಬೆಳಕಿಗೆ ಬಂದಿದೆ. ಕೇರಳದ ಚಿನ್ನದ ಉದ್ಯಮಿಗಳಾದ ಫೈಸಲ್ ಮತ್ತು ಜಮ್ಶಿದ್ ಇಬ್ಬರು ಕೇರಳದಿಂದ ಬಂದು ತಮ್ಮ ಚಿನ್ನವನ್ನು ಮಾರಾಟ ಮಾಡಿ 10 ಲಕ್ಷ ನಗದನ್ನು ತೆಗೆದುಕೊಂಡು ಹೋಗುತ್ತಿದ್ದರು. ಈ ವೇಳೆ ಗುಂಡ್ಲುಪೇಟೆ ಕೇರಳ ಗಡಿ ಮಧ್ಯೆ ಬರುವ ಕಾಡಿನಲ್ಲಿ ನೆಟ್?ವರ್ಕ್ ಕಂಪ್ಲೀಟ್ ಬಂದ್ ಆಗುತ್ತದೆ. ಯಾವ ಮೊಬೈಲ್? ಸಿಮ್ ಕೂಡ ವರ್ಕ್ ಆಗಲ್ಲ. ಸಂಪರ್ಕ ಕಡಿತವಾಗುವ ಸ್ಥಳದಲ್ಲಿ ಚಿನ್ನದ ಉದ್ಯಮಿಗಳನ್ನು ಕಾರಿನಲ್ಲಿ ಬಂದು ಅಡ್ಡಗಟ್ಟಿದ ನಾಲ್ಕೈದು ಜನರ ತಂಡ ಮಾರಕಾಸ್ತ್ರ ತೋರಿಸಿ, ಬೆದರಿಸಿ 10 ಲಕ್ಷ ರೂಪಾಯಿ ದರೋಡೆ ಮಾಡಿ ಪರಾರಿಯಾಗಿದೆ.

ದರೋಡೆ ಘಟನೆ ಜ. 10 ರಂದು ನಡೆದಿದ್ದರೂ ಕೂಡ ದೂರುದಾರರು ಜ. 27 ಕ್ಕೆ ಬಂದು ಗುಂಡ್ಲುಪೇಟೆ ಪೊಲೀಸರಿಗೆ ದೂರು ನೀಡಿದ್ದರು. ಪ್ರಕರಣ ಕೈಗೆತ್ತಿಕೊಂಡ ಪೊಲೀಸರು ಈಗ ಟೋಲ್ ಗೇಟ್ ಬಳಿ ಮತ್ತೊಂದು ಚೆಕ್?ಪೋಸ್ಟ್ ನಿರ್ಮಾಣ ಮಾಡಿದ್ದು, ಕೇರಳದಿಂದ ಕರ್ನಾಟಕ, ಕರ್ನಾಟಕದಿಂದ ಕೇರಳಕ್ಕೆ ತೆರಳುವ ವಾಹನಗಳ ಮೇಲೆ ಹದ್ದಿನ ಕಣ್ಣಿಟ್ಟಿದ್ದಾರೆ. ಈ ಕುರಿತು ಚಾಮರಾಜನಗರ ಎಸ್ಪಿ ಮುತ್ತುರಾಜ್ ಪ್ರತಿಕ್ರಿಯಿಸಿ, ಕೇರಳದಿಂದ ಬರುವ ದರೋಡೆಕೋರರ ವಿರುದ್ಧ ವಿಶೇಷ ಕಾರ್ಯಾಚರಣೆ ನಡೆಸಲಾಗುತ್ತಿದ್ದು, ಈಗಾಗಲೇ ಚೆಕ್ ಪೋಸ್ಟ್ ತೆರೆದು ಪ್ರತಿ ವಾಹನ ತಪಾಸಣೆ ಮಾಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

## ಸರಗೂರಿನಲ್ಲಿ ಮಡಿವಾಳ ಮಾಚಿದೇವನ ಜಯಂತಿ



ಸರಗೂರು: ಕಾಯಕ ಮತ್ತು ವಿಶಿಷ್ಟ ವಚನಗಳ ಮೂಲಕ ಸಮಾಜ ತಿದ್ದುವ ಕಾರ್ಯ ಮಾಡಿದ ಮಡಿವಾಳ ಮಾಚಿದೇವರು ಕಾಯಕ ಯೋಗಿ ಎನಿಸಿಕೊಂಡಿದ್ದಾರೆ. ಅವರ ಬದುಕಿನ ಚಿಂತನೆಗಳನ್ನು ನಾವು ತಿಳಿದುಕೊಂಡು ಇತರರಿಗೂ ತಿಳಿಸಬೇಕು ಎಂದು ವೇಳೆ ಮುಖ್ಯ ಭಾಷಣಕಾರರಾದ ರಂಗನಾಥ್ ಹೇಳಿದರು.

ಸರಗೂರು ತಾಲೂಕಿನ ತಹಸೀಲ್ದಾರ್ ಕಛೇರಿಯ ಅವರಣದಲ್ಲಿ ಭಾನುವಾರ ರಂದು ನಡೆದ ರಾಷ್ಟ್ರೀಯ ಹಬ್ಬದ ಆಚರಣಾ ಸಮಿತಿಯ ವತಿಯಿಂದ ಹಮ್ಮಿಕೊಂಡಿದ್ದ, ಮಡಿವಾಳ ಮಾಚಿದೇವರಜಯಂತಿ, ಕಾರ್ಯಕ್ರಮ ಆಯೋಜಿಸಲಾಗಿದ್ದು, ಸಮಾಜದ ಮುಖಂಡರು ವೀರ ಮಡಿವಾಳ ಮಾಚಿದೇವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿ, ಶಿವಶರಣರು ಬೋಧಿಸಿದ ತತ್ವಗಳನ್ನು ಪ್ರಪಂಚದ ಪ್ರತಿಯೊಬ್ಬರು ತಮ್ಮ ನಿತ್ಯ ಜೀವನದಲ್ಲಿ ರೂಢಿಸಿ ಕೊಂಡು ಬಂದಾಗ, ಬದುಕಿನಲ್ಲಿ ಏಕತೆಯನ್ನು ರೂಪಿಸಿಕೊಂಡು ಮಾನವೀಯ ಮೌಲ್ಯಗಳ ಅಡಿಯಲ್ಲಿ ನೆಮ್ಮದಿಯ ಬದುಕನ್ನು ಕಾಣಬಹುದು, ಮಡಿವಾಳ ಮಾಚಿದೇವ ಅಥವಾ ಮಾಚಯ್ಯ ಹುಟ್ಟಿದ್ದು ಬಿಜಾಪುರ ಜಿಲ್ಲೆಯ ಹಿಪ್ಪರಗಿಯಲ್ಲಿ ಕ್ರಿ.ಶ 1120 --1130 ನಡುವೆ ,ತಂದೆ ಪರುವತಯ್ಯ ತಾಯಿ ಸುಜ್ಞಾನವ್ವ, ವೃತ್ತಿ ಮಡಿವಾಳ, ದಿಕ್ಷಾಗುರು ಮಲ್ಲಿಕಾರ್ಜುನ ಎಂಬ ಅಂಕಿತದಲ್ಲಿ 354ವಚನಗಳನ್ನು ಬರೆದಿದ್ದಾರೆ ಎಂದು ಹೇಳಿದರು,

ಸರಗೂರು ತಾಲೂಕು ವೀರ ಮಡಿವಾಳ ಸಂಘದ ಅಧ್ಯಕ್ಷ ಧರಣೇಶ್ ಮಾತನಾಡಿ ಮಾಚಿದೇವರು ಜನರ, ಸಮಾಜದ ಮನೆ-ಮನಗಳನ್ನು ಶುಚಿಗೊಳಿಸುವ ಕಾಯಕದಲ್ಲಿ ನಿರತರಾದವರು, ಅವರು ಕೇವಲ ಬಟ್ಟೆಯ ಕೊಳಕನ್ನು ತೊಳೆಯದೆ ಸಮಾಜದಲ್ಲಿರುವ ಮೌಢ್ಯತೆ, ಕಂದಾಚಾರ, ವರ್ಣಭೇದಗಳಂತಹ ಕೊಳಕನ್ನು ತೊಳೆಯಲು ಹೊರಾಟ ನಡೆಸಿದ ಶ್ರೇಷ್ಠ ಶರಣರು ಮಡಿವಾಳ ಸಮಾಜ ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕವಾಗಿ ಇನ್ನೂ ಪ್ರಗತಿ ಸಾಧಿಸಬೇಕಿದೆ. ಸಮಾಜದ ಕುಲಕಸುಬಿಗೆ ಬೇಕಾಗುವ ಸೌಲಭ್ಯಗಳ ಸರ್ಕಾರ ಇಡೇರಿಸಬೇಕಿದೆ ಎಂದು ತಿಳಿಸಿದರು. ಮಡಿವಾಳ ಸಂಘದ ಗೌರವಧ್ಯಕ್ಷ ಮಹದೇವ ಶೆಟ್ಟಿ, ಶಿವಣ್ಣ ಶೆಟ್ಟಿ ಅಧ್ಯಕ್ಷ ಧರಣೇಶ್, ಉಪಾಧ್ಯಕ್ಷ ಸುರೇಶ್ ಶೆಟ್ಟಿ, ಕಾರ್ಯದರ್ಶಿ ವೆಂಕಟೇಶ್, ಖಜಾಂಚಿ ನಾಗರಾಜ್, ವೆಂಕಟೇಶ್ ರಂಗನಾಥ್, ಆರ್.ಐ ಲ.ಮುಜೀಬ್, ಚಂದ್ರ, ಸುಶ್ಮಿತಾ ಮಾದೇವಸ್ವಾಮಿ ಶ್ರೀನಿವಾಸ, ಎಲ್ಲಾ ಗ್ರಾಮದ ಮಡಿವಾಳ ಸಾಮಾಜದ ಯಜಮಾನರು ಹಾಗೂ ಮುಖಂಡರು ಇದ್ದರು.

## ಸಂಭ್ರಮದ ಹಿಂದೂ ಸಮಾಜೋತ್ಸವ



ಚಾಮರಾಜನಗರ: ನಮ್ಮ ದೇಶದ ಸಂಸ್ಕೃತಿ, ಪರಂಪರೆಯನ್ನು ಸಾರುವವರೆಲ್ಲರೂ ಹಿಂದೂಗಳೇ ಆಗಿದ್ದಾರೆ ಎಂದು ಎಬಿವಿಪಿ ರಾಜ್ಯ ದಕ್ಷಿಣ ಪ್ರಾಂತ್ಯ ಸಂಚಾಲಕಿ ಡಾ.ಎಚ್.ಎನ್.ನಿರ್ಮಲಾ ತಿಳಿಸಿದರು.

ನಗರದ ರಥಬೀದಿಯಲ್ಲಿ ಆಯೋಜಿಸಿದ್ದ ಹಿಂದೂ ಸಮಾಜೋತ್ಸವ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು. ಶತಮಾನಗಳ ಪರಂಪರೆ, ಸೇವೆ, ಸಂಘಟನೆಯಿಂದ ರಾಷ್ಟ್ರೀಯ ಸ್ವಯಂಸೇವಕ ಸಂಘ ಶತಾಬ್ಧಿಯನ್ನು ಪೂರೈಸಿದೆ. ದೇಶದ ಮೂಲೆಗಳಲ್ಲಿ 80 ಸಾವಿರಕ್ಕೂ ಹೆಚ್ಚು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ನಮ್ಮ ಭಾರತೀಯ ಪರಂಪರೆಯಲ್ಲಿ ತಮ್ಮ ಸಂಸ್ಕೃತಿಯನ್ನು ಸಾರುವಂತವರೆಲ್ಲರೂ ಹಿಂದೂವಾಗಿದ್ದಾರೆ. ಆರ್.ಎಸ್.ಎಸ್ ಕುಟುಂಬದ ಪರಿಕಲ್ಪನೆಯನ್ನು ಸಾರುತ್ತಿದ್ದು, ನಮ್ಮ ದೇಶದ ಮಹಿಳೆಯರ ಸಾಧನೆಯನ್ನು ಹಿಂದೂಗಳಿಗೆ ತಿಳಿಸಿಕೊಡಲಾಗುತ್ತಿದೆ ಎಂದರು. ಹರವೇ ವಿರಕ್ತಮಠದ ಪೀಠಾಧ್ಯಕ್ಷರಾದ ಶ್ರೀ ಸರ್ಪಭೂಷಣ ಸ್ವಾಮಿಜಿ, ಭಾರತೀಯ ಕಿಸಾನ್ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ನಾರಾಯಣ ಸ್ವಾಮಿ, ಜವಳಿ ವ್ಯಾಪಾರಿ ವೆಂಕಟ ನಾಗಪ್ಪಶೆಟ್ಟಿ ಹಾಗೂ ಹಿಂದೂ ಸಮಾಜೋತ್ಸವ ಆಚರಣಾ ಸಮಿತಿ ಸದಸ್ಯರು ಹಾಜರಿದ್ದರು.

**ಅದ್ದೂರಿ ಶೋಭಾಯಾತ್ರೆ:**

ಹಿಂದೂ ಸಮಾಜೋತ್ಸವದ ಅಂಗವಾಗಿ ಆಯೋಜಿಸಿದ್ದ ಶೋಭಾಯಾತ್ರೆ ಅದ್ದೂರಿಯಾಗಿ ನೆರವೇರಿತು. ನಗರದಶ್ರೀ ಮಾರಮ್ಮ ದೇವಸ್ಥಾನ (ಮಾರಿಗುಡಿ) ದಿಂದ ಪ್ರಾರಂಭವಾದ ಶೋಭಾಯಾತ್ರೆ ಚಿಕ್ಕ ಅಂಗಡಿಬೀದಿ ಮಾರ್ಗವಾಗಿ ಸಾಗಿ ಶ್ರೀ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗ ಅಂತ್ಯವಾಯಿತು. ಗೊರುಕನ ಕುಣಿತ, ಕಂಸಾಳೆ, ಡೊಳ್ಳುಕುಣಿತ ಹಾಗೂ ಇನ್ನಿತರೆ ಕಲಾತಂಡಗಳು ಭಾಗವಹಿಸಿದ್ದವು.

## ಮೊಬೈಲ್ ಬಿಟ್ಟು ಓದಿನ ಕಡೆ ಗಮನಹರಿಸಿ



ಮೈಸೂರು: ಇಂದಿನ ಯುವ ಸಮೂಹ ಮೊಬೈಲ್ ಗೆ ಹೆಚ್ಚು ಆಕರ್ಷಿತರಾಗದೇ ಓದಿನ ಕಡೆಗೆ ಹೆಚ್ಚು ಗಮನ ಹರಿಸಬೇಕೆಂದು ಮೈಸೂರು ವಿಶ್ವ ವಿದ್ಯಾನಿಲಯದ ಕುಲಸಚಿವೆ ಎಂ.ಕೆ.ಸವಿತಾ ತಿಳಿಸಿದರು.

ಮೈಸೂರಿನ ಮಹಾರಾಜ ಕಾಲೇಜಿನ ಶತಮಾನೋತ್ಸವ ಭವನದಲ್ಲಿ ಆಯೋಜಿಸಿದ್ದ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಶಿಕ್ಷಣದ ಜತೆಗೆ ಹೆಚ್ಚು ಉದ್ಯೋಗದ ಕೌಶಲ್ಯಗಳನ್ನು ಜೀವನದಲ್ಲಿ ಅಳವಡಿಸಿ ಕೊಳ್ಳಬೇಕು. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಮೊಬೈಲ್ ಹಾಗೂ ಸೋಷಿಯಲ್ ಮೀಡಿಯಾಗಳಿಗೆ ಬಲಿಯಾಗದೇ ಭವಿಷ್ಯವನ್ನು ಉತ್ತಮ ರೀತಿಯಲ್ಲಿ ರೂಪಿಸಿಕೊಳ್ಳಿ. ಮುಂದಿನ ದಿನಗಳಲ್ಲಿ ನಾನಾ ಕ್ಷೇತ್ರಗಳಲ್ಲಿ ಆಯ್ಕೆ ಮಾಡಿ ಸಮಾಜದಲ್ಲಿ ಮುಖ್ಯವಾಹಿನಿಗೆ ಬನ್ನಿ. ಪ್ರತಿನಿತ್ಯ ಪತ್ರಿಕೆಗಳನ್ನು ಓದುವ ಹವ್ಯಾಸ ಬೆಳೆಸಿಕೊಳ್ಳಿ ಎಂದು ಹೇಳಿದರು.

ಸರ್ಕಾರಿ ಪದವಿ ಪೂರ್ವಕಾಲೇಜು ಪ್ರೊ.ಹೇಮಾಚಂದ್ರ ಖಾಸಗಿ ಕ್ಷೇತ್ರಗಳಲ್ಲಿಯೂ ಸಾಕಷ್ಟು ಉದ್ಯೋಗವಕಾಶಗಳಿದ್ದು, ಅವುಗಳನ್ನು ತಿಳಿದುಕೊಳ್ಳುವ ಮೂಲಕ ಎಲ್ಲಾ ಕ್ಷೇತ್ರದಲ್ಲಿಯೂ ಸಾಧನೆ ಮಾಡುವ ಕೆಲಸ ಮಾಡಬೇಕು. ಮಾತ್ರವಲ್ಲದೆ, ಇಂದು ಗೂಗಲ್ ಮೂಲಕ ಎಲ್ಲವನ್ನೂ ಅರಿತುಕೊಳ್ಳಬಹುದಾದ ನಿಟ್ಟಿನಲ್ಲಿ ಅದರ ಒಳಿತನ್ನು ಸದುಪಯೋಪಡಿಸಿಕೊಳ್ಳಬೇಕು. ಅಲ್ಲದೆ ವಿವಿದೆಡೆ ನಡೆಯುವ ಉದ್ಯೋಗಮೇಳಗಳ ಸದ್ಬಳಕೆ ಆಗಲಿದೆ ಎಂದು ತಿಳಿಸಿದರು. ಮೈಸೂರು ವಿವಿ ಪರೀಕ್ಷಾಂಗ ವಿಭಾಗ ಕುಲಸಚಿವ ಪ್ರೊ.ನಾಗರಾಜ್, ಭೀಮ್ಸ್ ನಿರ್ದೇಶಕ ಪ್ರೊ.ಮಹೇಶ್, ಪ್ರಾಂಶುಪಾಲ ಡಾ.ಷಣ್ಮುಗಂ, ಮೈಸೂರು ವಿವಿ ವಿಶ್ವಮಾನವ ನೌಕರರ ವೇದಿಕೆಯ ವಾಸುದೇವ್ ಇನ್ನಿತರರು ಉಪಸ್ಥಿತರಿದ್ದರು.

## ಆಹಾರ ಭದ್ರತೆ, ಸುರಕ್ಷತೆ ಕಾಯ್ದೆ ಉಲ್ಲಂಘನೆ ವಿರುದ್ಧ ಕಠಿಣ ಕ್ರಮ

**ರಾಜ್ಯ ಆಹಾರ ಆಯೋಗದ ಅಧ್ಯಕ್ಷ ಡಾ. ಎಚ್. ಕೃಷ್ಣ**

ಚಾಮರಾಜನಗರ:- ಜಿಲ್ಲೆಯಲ್ಲಿ ಆಹಾರ ಭದ್ರತೆ ಹಾಗೂ ಆಹಾರ ಸುರಕ್ಷತಾ ಕಾಯ್ದೆ ನಿಯಮಗಳ ಉಲ್ಲಂಘನೆ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ. ಎಚ್. ಕೃಷ್ಣ ಅವರು ತಿಳಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ. ಎಚ್. ಕೃಷ್ಣ ಅವರು ಭಾರತ ದೇಶದಲ್ಲಿ ಆಹಾರ ಭದ್ರತೆ ಇದೆ. ಸಾರ್ವಜನಿಕ ಆಹಾರ ವಿತರಣಾ ವ್ಯವಸ್ಥೆಯಡಿ ಬಡವರು, ದುರ್ಬಲರು, ಮಹಿಳೆಯರು, ಅಂಗವಿಕಲರು, ವೃದ್ಧರು ಸೇರಿದಂತೆ ಪ್ರತಿಯೊಬ್ಬರಿಗೂ ಸಮರ್ಪಕ ಆಹಾರ ಒದಗಿಸುವುದು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಪ್ರಮುಖ ಉದ್ದೇಶವಾಗಿದೆ. ಸರ್ಕಾರದ ಆಹಾರ ಯೋಜನೆ, ಕಾರ್ಯಕ್ರಮಗಳ ಪರಿಶೀಲನೆಗಾಗಿ ವಿವಿಧ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳಲಾಗುತ್ತಿದೆ ಎಂದರು.

ಆಹಾರ ಮತ್ತು ನಾಗರಕ ಸರಬರಾಜು ಇಲಾಖೆಯ ಉಪನಿರ್ದೇಶಕರಾದ ಡಾ. ವಸುಂಧರಾ ಹೆಗಡೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ನಿರೂಪಣಾ ಅಧಿಕಾರಿ ಮಂಜುಳಾ ದೇವಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಇದ್ದರು.



# ಶೂನ್ಯ ತ್ಯಾಜ್ಯ ರಾಮನಗರಕ್ಕೆ ಸಂಕಲ್ಪ

**ನಗರಸಭಾಧ್ಯಕ್ಷ ಕೆ.ಶೇಷಾದ್ರಿ ಹೇಳಿಕೆ । ಇನ್ಮುಂದೆ ಫ್ಲೆಕ್ಸ್ ವಿಚಾರದಲ್ಲಿ ಕಠಿಣ ಕ್ರಮ**

### ದೇಶದ ಅತ್ಯಂತ ಸ್ವಚ್ಛ ನಗರ ಇಂಧೋರ್ ಅಧ್ಯಯನದ ಬಗ್ಗೆ ಮಾಹಿತಿ



ರಾಮನಗರ: ರಾಮನಗರ ನಗರಸಭಾ ಪ್ರದೇಶವನ್ನು ಶೂನ್ಯ ತ್ಯಾಜ್ಯ ನಗರವನ್ನಾಗಿಸಲು ಎಲ್ಲ ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತೇವೆ ಎಂದು ನಗರಸಭಾಧ್ಯಕ್ಷ ಕೆ.ಶೇಷಾದ್ರಿ ತಿಳಿಸಿದರು.

ನಗರಸಭೆಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ದೇಶದ ಅತ್ಯಂತ ಸ್ವಚ್ಛ ನಗರ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ಮಧ್ಯಪ್ರದೇಶ ರಾಜ್ಯದ ಇಂದೋರ್ ನಗರಕ್ಕೆ ನಗರಸಭಾ ಸದಸ್ಯರು ಮತ್ತು ಅಧಿಕಾರಿಗಳೊಂದಿಗೆ ಭೇಟಿ ನೀಡಿ ನಡೆಸಿದ ಅಧ್ಯಯನದ ವಿವರಗಳನ್ನು ಅವರು ಸುದ್ದಿಗಾರರೊಂದಿಗೆ ಹಂಚಿಕೊಂಡರು. ಇಂಧೋರ್ ನಗರದಲ್ಲಿನ ತ್ಯಾಜ್ಯ ಉತ್ಪತ್ತಿ, ವಿಲೇವಾರಿ, ಸಂಸ್ಕರಣೆ ವಿಚಾರದಲ್ಲಿ ಅಧ್ಯಯನದ ವೇಳೆ ಸಾಕಷ್ಟು ವಿಚಾರಗಳನ್ನು ಸಂಗ್ರಹಿಸಿದ್ದೇವೆ. ಅವರು ಅಳವಡಿಸಿರುವ ಕ್ರಮಗಳನ್ನು ಇಲ್ಲಿನ ಅಗತ್ಯಕ್ಕೆ ತಕ್ಕಂತೆ ಬಳಸಿಕೊಂಡು ರಾಮನಗರವನ್ನು ಸ್ವಚ್ಛ ನಗರವನ್ನಾಗಿಸಲು ಎಲ್ಲ ನಗರಸಭಾ ಸದಸ್ಯರು, ಅಧಿಕಾರಿಗಳು ಮತ್ತು ಸಿಬ್ಬಂದಿ ಸಂಕಲ್ಪಿಸಿದ್ದೇವೆ ಎಂದರು.

ಇಂದೋರ್ ನಗರ 35 ಲಕ್ಷ ಜನಸಂಖ್ಯೆ ಹೊಂದಿರುವ ನಗರ. ಮೈಸೂರು ನಗರಕ್ಕಿಂತ ದೊಡ್ಡ ನಗರ. ಕಳೆದ 8 ವರ್ಷಗಳಿಂದ ಸತತವಾಗಿ ಸ್ವಚ್ಛ ನಗರ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಅಲ್ಲಿನ ನಾಗರೀಕರು ಸಹ ಅಲ್ಲಿನ ನಗರಸಭಾ ಆಡಳಿತದೊಂದಿಗೆ ಸಹಕರಿಸುತ್ತಿದ್ದಾರೆ. ಅಧ್ಯಯನದ ವೇಳೆ ತ್ಯಾಜ್ಯ ವಿಲೇವಾರಿ, ಸಂಸ್ಕರಣೆ, ನಾಗರೀಕರಿಂದ ನಿಯಮಗಳ ಪಾಲನೆ, ಅವರಲ್ಲಿರುವ ನಾಗರೀಕ ಪ್ರಜ್ಞೆ, ಅಧಿಕಾರಿಗಳು ಮತ್ತು ಸಿಬ್ಬಂದಿಯ ಕರ್ತವ್ಯಗಳ ಬಗ್ಗೆ ತಿಳಿದುಕೊಳ್ಳಲಾಯಿತು. ಪಕ್ಷ ಬೇದವಿಲ್ಲದೆ ಜನಪ್ರತಿನಿಧಿಗಳ ಸಹಕಾರ ಕೊಡುತ್ತಿದ್ದಾರೆ. ಅನೇಕ ಸವಾಲುಗಳನ್ನು ಎದುರಿಸಿದೆ. ಹೀಗಾಗಿಯೇ ಸ್ವಚ್ಛತೆ ಕಾಪಾಡಿಕೊಳ್ಳಲು ಯಶಸ್ವಿಯಾಗಿದೆ ಎಂದರು.

ಸಂಗ್ರಹವಾದ ತ್ಯಾಜ್ಯವನ್ನು ಮಾನವ ಶಕ್ತಿ ಮತ್ತು ಯಂತ್ರ ಶಕ್ತಿಯಿಂದ ಬೇರ್ಪಡಿಸಿ, ಬಯೋ ಸಿಎನ್‌ಜಿ ಅನೀಲವನ್ನು ಉತ್ಪಾದಿಸಲಾಗುತ್ತಿದೆ ಎಂದರು.

### ಸ್ವಚ್ಛ ನಗರದೆಡೆಗೆ ರಾಮನಗರ

ರಾಮನಗರವನ್ನು ತ್ಯಾಜ್ಯ ಮುಕ್ತ ನಗರವನ್ನಾಗಿಸಲು ನಮ್ಮ ಪ್ರಯತ್ನಗಳು ನಿರಂತರ ಸಾಗುತ್ತಿದೆ. ಈ ನಿಟ್ಟಿನಲ್ಲಿ ನಾಗರೀಕರಲ್ಲಿ ಜಾಗೃತಿ ಮೂಡಿಸುವ ಕೆಲಸಗಳು ನಡೆಯುತ್ತಿವೆ. ಸ್ವಚ್ಛತೆಯ ರಾಯಭಾರಿಯನ್ನಾಗಿ ಚಿತ್ರ ರಾವ್ ನೇಮಕಮಾಡಲಾಗಿದೆ. ಅವರು ತಮ್ಮ ತಂಡದೊಂದಿಗೆ ನಾಗರೀಕರಲ್ಲಿ ಜಾಗೃತಿ ಮೂಡಿಸಲು ಮುಂದಾಗಿದ್ದಾರೆ. ಬೀದಿ ಬದಿಯಲ್ಲಿ ಹೆಚ್ಚು ಕಸ ಸಂಗ್ರಹವಾಗುತ್ತಿದ್ದ ಸ್ಥಳಗಳನ್ನು ನಗರಸಭೆ ಬ್ಲಾಕ್ ಸ್ಪಾಟ್‌ಗಳೆಂದು ಗುರುತಿಸಿದೆ. ಈ ಸ್ಪಾಟ್‌ಗಳನ್ನೀಗ ಸುಂದರಗೊಳಿಸಲಾಗುತ್ತಿದೆ. ನಾಗರೀಕರು ಇದನ್ನು ಗಮನಿಸುತ್ತಿದ್ದಾರೆ. ಎಲ್ಲೆಂದರಲ್ಲಿ ಕಸ ಎಸೆಯುವುದನ್ನು ಬಿಟ್ಟು ನಗರಸಭೆಯ ವಾಹನಕ್ಕೆ ಕಸ ಕೊಡಬೇಕು ಎಂಬ ಮನಸ್ಸು ಮಾಡಬೇಕಾಗಿದೆ ಎಂದರು.

### ಜಾಗೃತಿ, ಮನವಿ, ದಂಡ!

ಸ್ವಚ್ಛ ಮತ್ತು ಸುಂದರ ರಾಮನಗರಕ್ಕೆ ನಾಗರೀಕರ ಸಹಕಾರ ಅಗತ್ಯವಾಗಿ ಬೇಕಾಗಿದೆ. ಹೀಗಾಗಿ ಅವರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಎಲ್ಲೆಂದರಲ್ಲಿ ಕಸ ಎಸೆಯದೆ ನಗರಸಭೆಯ ಕಸ ಸಂಗ್ರಹಣೆ ವಾಹನಗಳಿಗೆ ಕೊಡಬೇಕು ಎಂದು ತಿಳುವಳಿಕೆ ಮೂಡಿಸಲಾಗುತ್ತಿದೆ. ನಿಯಮಗಳನ್ನು ಪಾಲಿಸಿ ಎಂದು ಮನವಿ ಮಾಡಲಾಗುತ್ತಿದೆ. ಬೇಸರವೆಂದರೆ ವಿದ್ಯಾವಂತರೇ ಹೆಚ್ಚು ವಾಸಿಸುವ ಬಡಾವಣೆಗಳು, ರಸ್ತೆಗಳ ಬದಿಯಲ್ಲಿ ಕಸ ಸಂಗ್ರಹವಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು. ಸ್ವಚ್ಛ ನಗರಕ್ಕಾಗಿ ದಂಡ ವಿಧಿಸುವುದನ್ನು ಆರಂಭಿಸಲಾಗುವುದು ಎಂದರು. ಇಂಧೋರ್ ನಗರಸಭೆ ಕೂಡ ದಂಡ ವಿಧಿಸುತ್ತಿದೆ. ಅಲ್ಲಿನ ನಾಗರೀಕರು ಪೊಲೀಸರಿಗಿಂತ ನಗರಸಭೆಯ ಸಿಬ್ಬಂದಿಗೆ ಹೆಚ್ಚು ಭಯ ಪಡುವಂತಾಗಿದೆ ಎಂದರು.

> ಇಂಧೋರ್ ನಗರದ ನಾಗರೀಕರು ಹಸಿಕಸ, ಒಣಕಸ, ಪ್ಲಾಸ್ಟಿಕ್, ವಿದ್ಯುನ್ಮಾನ ತ್ಯಾಜ್ಯ, ಸ್ಯಾನಿಟರಿ ಮತ್ತು ಅಪಯಾಕಾರಿ ವಸ್ತುಗಳು ಹೀಗೆ 6 ವಿಧಾನಗಳಲ್ಲಿ ಪ್ರತ್ಯೇಕಿಸಿ ಅಲ್ಲಿನ ನಗರಸಭೆಯ ತ್ಯಾಜ್ಯ ಸಂಗ್ರಹ ವಾಹನಕ್ಕೆ ಕೊಡುತ್ತಿದ್ದಾರೆ. ಅಲ್ಲಿ ಅಳವಡಿಸಿಕೊಂಡಿರುವ ಕ್ರಮಗಳಿಂದಾಗಿ ಆ ನಗರದಲ್ಲಿ ಶೇ 60ರಷ್ಟು ಸಾಂಕ್ರಮಿಕ ರೋಗಗಳು ಕಡಿಮೆಯಾಗಿದೆ. ಗಾಳಿಯ ಶುದ್ದತೆ ಕಾಪಾಡಿಕೊಳ್ಳಲಾಗಿದೆ. ಮುಖ್ಯವಾಗಿ ಲ್ಯಾಂಡ್ ಫಿಲ್ ಅವಲಂಭನೆಯನ್ನು ಶೇ 95ರಷ್ಟು ಕಡಿಮೆ ಮಾಡಿದೆ.
>
> ▸▸ **ಸುಬ್ರಮಣಿ** ನಗರಸಭೆಯ ಇಂಜಿನಿಯರ್

**ಫ್ಲೆಕ್ಸ್ ವಿಚಾರದಲ್ಲಿ ಕಠೀಣ ಕ್ರಮ**

ಫ್ಲೆಕ್ಸ್‌ಗಳ ಅಳವಡಿಕೆ ವಿಚಾರದಲ್ಲಿ ನಗರಸಭೆ ಕಠೀಣ ನಿಲುವು ತೆಗೆದುಕೊಳ್ಳುತ್ತಿದೆ. ಅನುಮತಿ ಇಲ್ಲದೆ ಫ್ಲೆಕ್ಸ್ ಅಳವಡಿಸಿದರೆ ಕಾನೂನು ಕ್ರಮ ಜರುಗಿಸುತ್ತೇವೆ. ಈ ವಿಚಾರದಲ್ಲಿ ಯಾವ ಮುಲಾಜು ಇಲ್ಲ, ಎಷ್ಟೇ ಪ್ರಭಾವಿಗಳಾಗಿದ್ದರೂ ಕ್ರಮ ವಹಿಸುತ್ತೇವೆ ಎಂದರು.

ನಗರಸಭೆಯ ಇಂಜಿನಿಯರ್ ಸುಬ್ರಮಣಿ ಇಂಧೋರ್ ನಗರದಲ್ಲಿ ತ್ಯಾಜ್ಯ ಸಂಬಂಧಿತ ಕ್ರಮಗಳು, ಅಲ್ಲಿನ ಅಧಿಕಾರಿಗಳು ಸಿಬ್ಬಂದಿಯೊಂದಿಗೆ ನಡೆಸಿದ ಚರ್ಚೆ, ತಾವೆಲ್ಲ ಕಂಡ ನಗರದ ರಸ್ತೆಗಳು ಹೀಗೆ ಹಲವಾರು ವಿಚಾರಗಳ ಬಗ್ಗೆ ವೀಡಿಯೋ, ಚಿತ್ರಗಳು ಮತ್ತು ಅಂಕಿ ಅಂಶಗಳ ಸಮೇತ ವಿವರಿಸಿದರು.

ಈ ವೇಳೆ ನಗರಸಭೆಯ ಉಪಾಧ್ಯಕ್ಷ ಗಿರಿಜಮ್ಮ, ಸ್ಥಾಯಿ ಸಮಿತಿ ಅಧ್ಯಕ್ಷ ಫೈರೋಜ್ ಪಾಷ ಮತ್ತು ನಗರಸಭಾ ಸದಸ್ಯರು ಉಪಸ್ಥಿತರಿದ್ದರು.

## ಫೆ.6ಕ್ಕೆ ಮಹದೇವಪ್ಪ ಅಭಿಮಾನಿ ಬಳಗದ ಸಮಿತಿ ವಾರ್ಷಿಕೋತ್ಸವ

ಮೈಸೂರು: ಅಖಿಲ ಕರ್ನಾಟಕ ಡಾ.ಎಚ್.ಸಿ.ಮಹದೇವಪ್ಪ ಅಭಿಮಾನಿ ಬಳಗದ ರಾಜ್ಯ ಸಮಿತಿಯ 8 ನೇ ವಾರ್ಷಿಕೋತ್ಸವ, ಜಿಲ್ಲಾ, ತಾಲೂಕು ಅಧ್ಯಕ್ಷರ ಪದಗ್ರಹಣ, ವಿವಿಧ ಕ್ಷೇತ್ರದ ಸಾಧಕರ ಸನ್ಮಾನ ಸಮಾರಂಭ ಫೆ. 6 ರ ಬೆಳಗ್ಗೆ 11ಕ್ಕೆ ಮಾನಸ ಗಂಗೋತ್ರಿ ರಾಣಿ ಬಹದ್ದೂರ್ ಸಭಾಂಗಣದಲ್ಲಿ ನಡೆಯಲಿದೆ ಎಂದು ಪದಾಧಿಕಾರಿ ಹಿನಕಲ್ ನಂಜುಮಂಡ ತಿಳಿಸಿದರು.

ಸಚಿವ ಸಂತೋಷ್ ಲಾಡ್ ಉದ್ಘಾಟಿಸುವರು, ಸಚಿವ ಮಹದೇ ವಪ್ಪ ಉಪಸ್ಥಿತರಿರುವರು, ಎಂಎಲ್‌ಸಿ ಡಾ. ಯತೀಂದ್ರ ಸಿದ್ದರಾಮಯ್ಯ ಅಧ್ಯಕ್ಷತೆ ವಹಿಸುವರು, ಮತ್ತೋರ್ವ ಎಂಎಲ್ಸಿ ಡಾ. ಡಿ ತಿಮ್ಮಯ್ಯ, ಚಿಂತಕ ಪ್ರೊ. ರಾಜಪ್ಪ ದಳವಾಯಿ, ಪ್ರೊ. ಆನಂದ್ ಅತಿಥಿಗಳಾಗಿರುವರು ಎಂದರು. ಇನ್ನಿತರ ಪದಾಧಿಕಾರಿಗಳಾದ ಡಾ.ಕೆ. ಬಸವರಾಜ್, ನಾಗೇಶ್, ಮಧುಕುಮಾರ್, ಬಿ.ಆರ್. ನಾಗರಾಜು, ಮಹೇಶ್ ಬಾಬು, ಮಂಜುಕೋಟೆ ಹಾಜರಿದ್ದರು.



## ಹೆಸರು ಸರಿಪಡಿಸುವಿಕೆ

ಮಂಜುನಾಥ ಆರಾಧ್ಯ ಎಂಬುವರ ಮಡದಿಯಾಗಿರುವ **RANI MANJUNATH ARADHYA** ಎಂಬ ನಾನು ಅರಳೇಪೇಟೆ, ರಾಮನಗರ 562159 ನಿವಾಸಿಯಾಗಿದ್ದೇನೆ. ನನ್ನ ಮಗ **Prajwal Manjunath Aradhya** ನ ಎಸ್.ಎಸ್.ಎಲ್.ಸಿ ಅಂಕಪಟ್ಟಿಯಲ್ಲಿ ನನ್ನ ಹೆಸರು **HONNAMMA RANI** ಎಂದು ನಮೂದಾಗಿದೆ. ಪ್ರಸ್ತುತ ನನ್ನ ಹೆಸರು ಎಲ್ಲ ಸರ್ಕಾರಿ ದಾಖಲೆಗಳಲ್ಲಿ ಹಾಗೂ ಬ್ಯಾಂಕಿನಲ್ಲಿ **RANI MANJUNATH ARADHYA** ಎಂದೇ ಇದೆ. **HONNAMMA RANI** ಮತ್ತು **RANI MANJUNATH ARADHYA** ಎಂಬ ಎರಡು ಹೆಸರುಗಳು ಒಬ್ಬರದ್ದೇ ಆಗಿದ್ದು, ಅದು ನಾನೇ ಆಗಿದ್ದೇನೆ. ನನ್ನ ಮಗನ ಪಾಸ್‌ಪೋರ್ಟ್ ಅರ್ಜಿಯ ಉದ್ದೇಶಕ್ಕಾಗಿ ನನ್ನ ಹೆಸರಿನಲ್ಲಿನ ವ್ಯತ್ಯಾಸವನ್ನು ಸ್ಪಷ್ಟಪಡಿಸಲು ನಾನು ಜನವರಿ 17, 2026ರಂದು ನೋಟರಿ ಪಬ್ಲಿಕ್ ಟಿ.ವಿ.ಇಂದಿರಾ ಅವರ ಸಮಕ್ಷಮ ಅಫಿಡವಿಟ್ ಮೂಲಕ ಎಂದು ಘೋಷಿಸಿದ್ದೇನೆ.

## ಅಧಿಕಾರಿ ವರ್ಗಾವಣೆ ವಿರೋಧಿಸಿ ಪ್ರತಿಭಟನೆ



ಕೆ.ಆರ್.ಪೇಟೆ, ರೈತಪರ ಆಡಳಿತ ನೀಡುತ್ತಿದ್ದ ಪ್ರಾಮಾಣಿಕ ಕಂದಾಯ ಅಧಿಕಾರಿ ಅಸ್ಲಾಂಭಾಷಾ ವರ್ಗಾವಣೆ ವಿರೋಧಿಸಿ ಪ್ರಗತಿಪರ ಸಂಘಟನೆಗಳು ಹಾಗೂ ರೈತ ಸಂಘದ ಕಾರ್ಯಕರ್ತರು ಬೃಹತ್ ತಮಟೆ ಚಳುವಳಿ ನಡೆಸಿದರು.

ತಾಲೂಕಿನ ಕಂದಾಯ ಇಲಾಖೆಯ, ಭೂ ಮಂಜೂರಾತಿ ಶಾಖೆಯಲ್ಲಿ ಶಿರಸ್ತೆದಾರರಾಗಿ ಕಳೆದ ಮೂರು ತಿಂಗಳಿನಿಂದ ಕರ್ತವ್ಯ ನಿರ್ವಹಿಸುತ್ತಿದ್ದ ಅಸ್ಲಾಂ ಭಾಷಾ ಅವರನ್ನು ಏಕಾಏಕಿ ವರ್ಗಾಯಿಸಿ ಅವರ ಸ್ಥಾನಕ್ಕೆ ಬೇರೊಬ್ಬರನ್ನು ವರ್ಗಾವಣೆ ಆದೇಶವನ್ನು ವಿರೋಧಿಸಿ ಎಂದು ಪ್ರಗತಿಪರ ಸಂಘಟನೆಗಳು ಹಾಗೂ ರೈತ ಸಂಘದ ಕಾರ್ಯಕರ್ತರು ತಾಲ್ಲೂಕು ಕಚೇರಿಯ ಎದುರು ಬೃಹತ್ ಪ್ರತಿಭಟನೆ ನಡೆಸಿದರು. ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿದ ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ್ ಅವರಿಗೆ ಮನವಿ ಸಲ್ಲಿಸಿದರು. ಈ ಹಿಂದೆ ತಾಲ್ಲೂಕು ಕಚೇರಿಯಲ್ಲಿ ಆರ್.ಆರ್.ಟಿ ವಿಭಾಗದಲ್ಲಿ ರವಿಯವರು ಸಕಾಲಕ್ಕೆ ಕಡತಗಳನ್ನು ವಿಲೇವಾರಿ ಮಾಡದೆ ಬಾಕಿ ಇಟ್ಟುಕೊಂಡಿದ್ದ ಕಾರಣ ಬೇರೆ ಕಡೆಗೆ ವರ್ಗಾವಣೆಗೊಂಡಿದ್ದರು. ಮತ್ತೆ ಕೆಎಟಿ ಮೂಲಕ ವರ್ಗಾವಣೆಗೆ ತಡೆಯಾಜ್ಞೆ ಮಾಡಿಸಿ ಮರು ವರ್ಗಾವಣೆಯಾಗಿ ಬಂದಿದ್ದಾರೆ. ಕೂಡಲೇ ರಾಜ್ಯ ಸರ್ಕಾರವು ದಕ್ಷ ಅಧಿಕಾರಿ ಅಸ್ಲಾಂ ಭಾಷಾ ಅವರ ವರ್ಗಾವಣೆಯನ್ನು ರದ್ದು ಪಡಿಸಿ ಕೆ.ಆರ್.ಪೇಟೆಯಲ್ಲಿಯೇ ಕರ್ತವ್ಯ ನಿರ್ವಹಿಸಲು ಅವಕಾಶ ಮಾಡಿಕೊಡಬೇಕು ಇಲ್ಲದಿದ್ದರೆ ಉಗ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ರೈತ ನಾಯಕ ಮುದುಗೆರೆ ರಾಜೇಗೌಡ ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಪುರಸಭೆಯ ಹಿರಿಯ ಸದಸ್ಯ ಡಿ.ಪ್ರೇಮ್‌ಕುಮಾರ್, ದಲಿತ ಸಂಘರ್ಷ ಸಮಿತಿಯ ತಾಲೂಕು ಸಂಚಾಲಕ ನಾಟನಹಳ್ಳಿ ಸೋಮರಾಜು ಛಲವಾದಿ ಮಹಾಸಭಾ ತಾಲ್ಲೂಕು ಅಧ್ಯಕ್ಷ ಊಚನಹಳ್ಳಿ ನಟರಾಜು, ಜಿಲ್ಲಾಧ್ಯಕ್ಷ ಉಸ್ತುವಾರಿ ಮಾಂಬಳ್ಳಿ ಜಯರಾಮ್, ಚೌಡೇನಹಳ್ಳಿ ದೇವರಾಜು, ರೈತ ಸಂಘದ ತಾಲೂಕು ಘಟಕದ ಅಧ್ಯಕ್ಷ ಪುಟ್ಟೇಗೌಡ, ಮರುವನಹಳ್ಳಿ ಶಂಕರ್, ಬೂಕನಕೆರೆ ನಾಗರಾಜು, ನೀತಿಮಂಗಲ ಮಹೇಶ್, ಲತಾಕೇಶವ್, ದಲಿತ ಮುಖಂಡರಾದ ಬಂಡಿಹೊಳೆ ರಮೇಶ್, ಲಕ್ಷ್ಮಿ?ಮೇಪುರ ರಂಗಸ್ವಾಮಿ, ಮುದುಗೆರೆ ಮಹೇಂದ್ರ, ಎನ್.ಜೆ.ಮಂಜು, ಹರಿಹರಪುರ ನರಸಿಂಹ, ಜೈನಹಳ್ಳಿ ಹರೀಶ್, ಆಟೋ ಜಾವಿದ್, ಗಂಗಾಧರ್ ಸೇರಿದಂತೆ ನೂರಾರು ಪ್ರತಿಭಟನಾಕಾರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

## ನಾಳೆ ಉಚಿತ ಆರೋಗ್ಯ ತಪಾಸಣಾ ಶಿಬಿರ



ಚಾಮರಾಜನಗರ: ಅಖಿಲ ಭಾರತೀಯ ವೀರಶೈವ ಮಹಾಸಭಾ ಜಿಲ್ಲಾಧ್ಯಕ್ಷ ಮೂಡ್ಲುಪುರ ನಂದೀಶ್ ಅವರ ಹುಟ್ಟುಹಬ್ಬದ ಅಂಗವಾಗಿ ನಂದಿಬ್ರಿಗೇಡ್, ಜೆಎಸ್‌ಎಸ್ ವೈದ್ಯಕೀಯ ಸಂಸ್ಥೆ, ಜೆಎಸ್‌ಎಸ್ ನರ್ಸಿಂಗ್ ಕಾಲೇಜು, ರೋಟರಿ ಸಂಸ್ಥೆ ವತಿಯಿಂದ ಫೆ. 5 ರಂದು ನಗರದಲ್ಲಿ ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಗಿದೆ ಎಂದು ನಂದಿ ಬ್ರಿಗೇಡ್ ಮುಖ್ಯಸ್ಥ ಶಿವರಾಜ್ ಸಿದ್ದಯ್ಯಪುರ ಹೇಳಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಅಂದು ನಗರದ ರೋಟರಿ ಭವನದಲ್ಲಿ ಬೆಳಿಗ್ಗೆ 9: 30 ರಿಂದ ಮಧ್ಯಾಹ್ನ 2 ಗಂಟೆಯ ತನಕ ಶಿಬಿರ ನಡೆಯಲಿದ್ದು, ಮೂಳೆಗೆ ಸಂಬಂಧಿಸಿದ ಸಮಸ್ಯೆಗಳು, ಸ್ತ್ರೀರೋಗ ತಜ್ಞರು, ರಕ್ತದೊತ್ತಡ, ಮಧುಮೇಹ, ಇಸಿಜಿ, ಹಾಗೂ ಇನ್ನಿತರ ಸಮಸ್ಯೆಗಳು ಮೈಸೂರಿನ ತಜ್ಞ ವೈದ್ಯರುಗಳು ಇರುತ್ತಾರೆ. ಶಿಬಿರವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು. ಶ್ರೀಗಣಪತಿ ಮಂಡಳಿಯ ಮಾಜಿ ಅಧ್ಯಕ್ಷ ಕೃಷ್ಣಪ್ಪ, ಅಮಚವಾಡಿ ಮಹದೇವ, ಅರ್ಜುನ್ ಸಿ.ಕೆ, ಮಹೇಶ್ ಇತರರು ಹಾಜರಿದ್ದರು.

**ಗ್ರಾಮಸ್ಥರಿಂದ ಅಪರ ಜಿಲ್ಲಾಧಿಕಾರಿ ಮನವಿ**

## ಸ್ಮಶಾನ ಜಾಗ ಹದ್ದುಬಸ್ತು ಮಾಡಲು ವಿಳಂಬ



ಚಾಮರಾಜನಗರ, ತಾಲೂಕಿನ ಸಪ್ಪಯ್ಯನಪುರ ಗ್ರಾಮದ ಪರಿಶಿಷ್ಟ ಜಾತಿಗೆ ಸೇರಿದ ಸ್ಮಶಾನ ಜಾಗವನ್ನು ಹದ್ದುಬಸ್ತು ಮಾಡಲು ತಹಶೀಲ್ದಾರ್ ಅವರು ವಿಳಂಬ ಮಾಡುತ್ತಿದ್ದಾರೆ ಎಂದು ಸಪ್ಪಯ್ಯನಪುರ ಗ್ರಾಮದ ಗ್ರಾಮಸ್ಥರು ಅಪರ ಜಿಲ್ಲಾಧಿಕಾರಿ ಟಿ. ಜವರೇಗೌಡರಿಗೆ ಮನವಿ ಸಲ್ಲಿಸಿದರು.

ನಗರದ ಜಿಲ್ಲಾಡಳಿತ ಭವನದಲ್ಲಿ ಜಮಾಯಿಸಿ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ತಾಲೂಕಿನ ಭೋಗಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಪ್ಪಯ್ಯನಪುರ ಗ್ರಾಮದ ಎಲ್ಲೆ ಯಲ್ಲಿರುವ ಸಪ್ಪಯ್ಯನಪುರ ಗ್ರಾಮದ ಪರಿಶಿಷ್ಟ ಜನಾಂಗಕ್ಕೆ ಸೇರಿದ ಸ್ಮಶಾನದ ಸರ್ವೇ ನಂ.76 ರಲ್ಲಿನ 1 ಎಕರೆ ವಿಸ್ತೀರ್ಣದ ಹದ್ದುಬಸ್ತು ಕಾರ್ಯವನ್ನು ತಹಸೀಲ್ದಾರ್ ಅವರು ಸುಮಾರು ಒಂದು ವರ್ಷಗಳಿಂದಲೂ ವಿಳಂಬ ಮಾಡುತ್ತಿದ್ದಾರೆ ಎಂದು ದೂರಿದರು. ಈ ಬಗ್ಗೆ ನಾವು ಚಾಮರಾಜನಗರ ತಾಲೂಕು ತಹಸಿಲ್ದಾರ್ ರವರಿಗೆ ಸಪ್ಪಯ್ಯನಪುರ ಗ್ರಾಮದ ಸ್ಮಶಾನಕ್ಕೆಂದು ಗುರುತಿಸಿರುವ ಆ ಜಾಗವನ್ನು ಹದ್ದುಬಸ್ತು ಮಾಡಲು ನಮ್ಮ ಗ್ರಾಮಸ್ಥರು ಮನವಿ ನೀಡಿರುತ್ತಾರೆ ಆದರೆ ಈ ಮನವಿಗೆ ತಹಸಿಲ್ದಾರ್ ಅವರು ಸ್ಮಶಾನ ಜಾಗವನ್ನು ಹದ್ದುಬಸ್ತು ಮಾಡಲು ವಿಳಂಬ ಮಾಡುತ್ತಿದ್ದಾರೆ. ಆದ್ದರಿಂದ ಜಿಲ್ಲಾಧಿಕಾರಿಯವರು ನಮ್ಮ ಬೇಡಿಕೆಯಾದ ಸ್ಮಶಾನ ಜಾಗಕ್ಕೆ ಹದ್ದುಬಸ್ತು ಮಾಡಿಸಿಕೊಡಬೇಕೆಂದು ಅಪರ ಜಿಲ್ಲಾಧಿಕಾರಿಯವರ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಪ್ಪಯ್ಯನಪುರದ ಗ್ರಾಮದ ಪರಿಷ್ಟ ಜಾತಿಯ ಮುಖಂಡರಾದ ಸುಬ್ಬಯ್ಯ, ಮಹಾದೇವಯ್ಯ, ಮಹದೇವಯ್ಯ ಸೇರಿದಂತೆ ಗ್ರಾಮಸ್ಥರು ಭಾಗವಹಿಸಿದ್ದರು.

# ಸಂಕ್ಷಿಪ್ತ ಸುದ್ದಿ

## ವಾಕಥಾನ್ ಕಾರ್ಯಕ್ರಮ

**ಮಂಡ್ಯ:** ಜಿಲ್ಲಾಡಳಿತ ಸಾರಿಗೆ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಸ್ಕೌಟ್ ಅಂಡ್ ಗೈಡ್ ಇವರುಗಳ ಸಹಯೋಗದೊಂದಿಗೆ ರಾಷ್ಟ್ರೀಯ ರಸ್ತೆ ಸುರಕ್ಷತಾ ಜಾಗೃತಿ ಮಸಾಚಾರಣೆ 2026 ರ ಅಂಗವಾಗಿ ಬೃಹತ್ ಕಾಲ್ನಡಿಗೆ ಜಾಥ – ವಾಕಥಾನ್ ಕಾರ್ಯಕ್ರಮ ವನ್ನು ಫೆಬ್ರವರಿ 4 ರಂದು ಬೆಳಿಗ್ಗೆ 8.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಿಂದ ಸಂಜಯ ಟಾಕೀಸ್ ವೃತ್ತದವರಿಗೆ ಜಾಥವನ್ನು ಹಮ್ಮಿಕೊಳ್ಳಲಾಗಿದೆ.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಅಧ್ಯಕ್ಷರಾದ ಡಾ. ಕುಮಾರ ರವರು ಕಾರ್ಯಕ್ರಮದ ಚಾಲನೆ ನೀಡಲಿದ್ದಾರೆ.

ಜಿಲ್ಲಾ ಕಾನೂನು ಸೇವಗಳ ಪ್ರಾಧಿಕಾರ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳಾದ ಆನಂದ್ ಎಮ್. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ನಂದಿನಿ ಕೆ. ಆರ್,ಆರಕ್ಷಕ ಅಧೀಕ್ಷಕರಾದ ಶೋಭಾರಾಣಿ ವಿ. ಜೆ,ಅಪರ ಜಿಲ್ಲಾಧಿಕಾರಿಗಳಾದ ಬಿ. ಸಿ ಶಿವಾನಂದಮೂರ್ತಿ,ಜಂಟಿ ಸಾರಿಗೆ ಆಯುಕ್ತರಾದ ಎಂ ಶೋಭಾ, ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಕಾರ್ಯನಿರ್ವಾಹಕ ಅಭಿಯಂತರರಾದ ಪುರುಷೋತ್ತಮ್ ಕೆ.ಎಂ,ವಿಭಾಗೀಯ ನಿಯಂತ್ರಣ ಅಧಿಕಾರಿಗಳಾದ ಶರಣ್ ಬಸವರಾಜು ಕೆ.ಎಂ,ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ನಿರ್ದೇಶಕರಾದ ಟಿ.ಕೆ ಹರೀಶ್ ರವರು ಘನ ಉಪಸ್ಥಿತಿ ವಹಿಸಲಿದ್ದಾರೆ.

ಪ್ರಾದೇಶಿಕ ಸಾರಿಗೆ ಅಧಿಕಾರಿಯಾದ ಹೇಮಾವತಿ ಟಿ.ಜಿ ರವರು ಗಣ್ಯರನ್ನು ಸ್ವಾಗತಿಸಲಿದ್ದಾರೆ.

## ಸಾರ್ವಜನಿಕ ಪ್ರಕಟಣೆ

**ಮಂಡ್ಯ:** ರಾಜ್ಯ ಸರ್ಕಾರದ ಅಧಿಕಾರಿ/ನೌಕರರಿಗೆ ಸರ್ವೋತ್ತಮ ಸೇವಾ ಪ್ರಶಸ್ತಿ ನೀಡುವ ಯೋಜನೆಯನ್ನು 2012 ರಿಂದ ಜಾರಿಗೆ ತರಲಾಗಿದ್ದು, ಪ್ರತೀ ವರ್ಷದ ರೀತ್ಯಾ ಪ್ರಸ್ತುತ 2026ನೇ ಸಾಲಿನಲ್ಲಿ ರಾಜ್ಯ ಮಟ್ಟ ಹಾಗೂ ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಯನ್ನು ಪಡೆಯಲು ರಾಜ್ಯ ಸರ್ಕಾರದ ಅಧಿಕಾರಿ/ನೌಕರರು ತಮ್ಮ ನಾಮನಿರ್ದೇಶನಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಉಲ್ಲೇಖ(2)ರನ್ವಯ ಅವಕಾಶವನ್ನು ಕಲ್ಪಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ (ಆಸು) 11 ಇಳಿಸು 2022 ದಿನಾಂಕ: 19/03/2022 ಅನ್ನು ಪರಿಶೀಲಿಸಿಕೊಂಡು ಮಾರ್ಗಸೂಚಿಗಳನ್ವಯ ನಾಮನಿರ್ದೇಶನಗಳನ್ನು ಆನ್ ಲೈನ್ ಮೂಲಕ ಸಲ್ಲಿಸಬಹುದು.

2026ನೇ ಸಾಲಿನ ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮ ನಿರ್ದೇಶನ ಸಲ್ಲಿಸಲು 2025ನೇ ಕ್ಯಾಲೆಂಡರ್ ವರ್ಷದಲ್ಲಿ ಮಾಡಿರುವ ಉಪ ಕ್ರಮ/ಸಾಧನೆಯನ್ನು ಪರಿಗಣಿಸುವುದು.2026ನೇ ಸಾಲಿನ ರಾಜ್ಯ ಹಾಗೂ ಜಿಲ್ಲಾ ಮಟ್ಟದ ಎರಡೂ ಹಂತದ ಸರ್ವೋತ್ತಮ ಸೇವಾ ಪ್ರಶಸ್ತಿಗಳಿಗೂ ಅರ್ಜಿ ಸಲ್ಲಿಸಬಯಸುವವರು ಆನ್‌ಲೈನ್ ವೆಬ್ಸೈಟ್ https://dparar.karnataka.gov.in/https://sarvothamaawards. karnataka.gov.in ಮೂಲಕ ಫೆಬ್ರವರಿ 03 ರಿಂದ ಫೆಬ್ರವರಿ 25 ರೊಳಗಾಗಿ ಸಲ್ಲಿಸಬೇಕು ಎಂದು ಮಂಡ್ಯ ಜಿಲ್ಲಾಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುಂದು ಕೊರತೆ ಆಲಿಸುವ ಸಭೆ

**ಮೈಸೂರು:** ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಕಾರ್ಯ ವ್ಯಾಪ್ತಿಗೆ ಒಳಪಡುವ ಮೈಸೂರು, ಮಂಡ್ಯ, ಚಾಮರಾಜನಗರ ಜಿಲ್ಲೆಯ ಮಾಜಿ ಸೈನಿಕರು ಹಾಗೂ ಅವಲಂಬಿತರ ಕುಂದು ಕೊರತೆ ಆಲಿಸುವ ಸಭೆಯನ್ನು ಫೆ. ರಂದು ಬೆಳಗ್ಗೆ 10 ಗಂಟೆಯಿಂದ ಜಿಲ್ಲಾ ಪಂಚಾಯತ್, ಮೈಸೂರು ಕಛೇರಿಯ 'ಅಬ್ದುಲ್ ನಜೀರ್ ಸಾಬ್' ಸಭಾಂಗಣದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಏರ್ಪಡಿಸಲಾಗುತ್ತದೆ.

ಮೈಸೂರು. ಮಂಡ್ಯ ಮತ್ತು ಚಾಮರಾಜನಗರ ಜಿಲ್ಲೆಗೆ ಒಳಪಡುವ ಮಾಜಿ ಸೈನಿಕರು ಹಾಗೂ ಅವಲಂಬಿತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ತಮ್ಮ ಕುಂದುಕೊರತೆ ನಿವಾರಣೆಗಾಗಿ ಅರ್ಜಿಗಳನ್ನು ಲಿಖಿತ ರೂಪದಲ್ಲಿ ದ್ವಿಪ್ರತಿಯಲ್ಲಿ ಸಲ್ಲಿಸಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ಕಾರ್ಯಾಲಯದ ದೂರವಾಣಿ ಸಂಖ್ಯೆ 0821 2425240ನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಉಪ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೌಶಲ್ಯ ತರಬೇತಿ ಫೆ.17ಕ್ಕೆ

**ರಾಮನಗರ:** ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಪ್ರಾಯೋಜಕತ್ವದಲ್ಲಿ ಬೆಂಗಳೂರು ದಕ್ಷಿಣ (ರಾಮನಗರ) ಜಿಲ್ಲಾ ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ (ಸಿಡಾಕ್) ವತಿಯಿಂದ ಸ್ವಂತ ಉದ್ಯೋಗ ಸ್ಥಾಪಿಸಲು ಇಚ್ಚಿಸುವವರಿಗಾಗಿ 4–ವಾರಗಳ (ಬ್ಯೂಟಿಷಿಯನ್) ಕೌಶಲ್ಯಾಧಾರಿತ ಉದ್ಯಮಶೀಲತಾ ಅಭಿವೃದ್ಧಿ ತರಬೇತಿಯನ್ನು ಇದೇ ಫೆ.17 ರಂದು ಆಯೋಜಿಸಲಾಗಿದ್ದು, ಆಸಕ್ತ ಮಹಿಳಾ ಅಭ್ಯರ್ಥಿಗಳಿಂದ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಬ್ಯೂಟಿಷಿಯನ್ ಉದ್ಯಮ ಸ್ಥಾಪಿಸಲು ಅನುಸರಿಸುವ ಕ್ರಮಗಳು, ತರಬೇತಿ, ಸ್ವಂತ ಉದ್ಯಮ ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಸರ್ಕಾರದ ಸ್ವಂತ ಉದ್ಯೋಗ ಯೋಜನೆಗಳು, ಬ್ಯಾಂಕ್ ವ್ಯವಹಾರ, ಮಾರುಕಟ್ಟೆ ಸಮೀಕ್ಷೆ, ಯೋಜನಾ ವರದಿ ತಯಾರಿಕೆ ಹಾಗೂ ಉದ್ಯಮ ನಿರ್ವಹಣೆ, ಇತ್ಯಾದಿ ವಿಷಯಗಳ ಕುರಿತು ತರಬೇತಿ ನೀಡಲಾಗುವುದು.ಫೆ. 12ರೊಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಮೊ.7090299843, 7760145784 ಸಂಪರ್ಕಿಸಬಹುದಾಗಿದೆ.

## ವಸತಿ ಶಾಲೆಗೆ ಅರ್ಜಿ ಸಲ್ಲಿಸಿ


**ಮೈಸೂರು:** 2026ನೇ ಸಾಲಿನ ವಸತಿ ಶಾಲೆಗಳ 6ನೇ ತರಗತಿ ಪ್ರವೇಶಾತಿಗೆ ಆನ್‌ಲೈನ್ ಮುಖಾಂತರ ಹತ್ತಿರದ ವಸತಿ ಶಾಲೆ, ಕಾಲೇಜುಗಳ ಮೂಲಕ ಅರ್ಜಿ ಸಲ್ಲಿಸುವ ದಿನಾಂಕವನ್ನು ಫೆ.7 ರವರೆಗೆ ವಿಸ್ತರಿಸಲಾಗಿದೆ.

ಪರಿಶಿಷ್ಟ ಜಾತಿಗೆ ಸೇರಿದ ಒಳಮೀಸಲಾತಿ ಕಲ್ಪಿಸಿರುವ ಪ್ರವರ್ಗ ಎ, ಬಿ ಮತ್ತು ಸಿ ವರ್ಗೀಕರಣ ಮಾಡಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಒಳಮೀಸಲಾತಿ ವಿವರಗಳನ್ನು ತಮ್ಮ ಜಾತಿ ಪ್ರಮಾಣ ಪತ್ರದಲ್ಲಿ ಮುದ್ರಿತವಾಗಿರುವ ಆರ್‌ಡಿ ಸಂಖ್ಯೆಯನ್ನು ಆನ್‌ಲೈನ್ ಅರ್ಜಿಯಲ್ಲಿ ಕಡ್ಡಾಯವಾಗಿ ಫೆ.7 ರ ಕೊನೆಯ ದಿನಾಂಕದೊಳಗೆ ನಮೂದಿಸಿ ಅರ್ಜಿಯನ್ನು ಸಲ್ಲಿಸತಕ್ಕದ್ದು. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಮೀಸಲಾತಿ ಮತ್ತು ಇತರೆ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ನಮೂದಿಸಬೇಕೆಂದು ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫೆಬ್ರವರಿಯಲ್ಲೇ ಉದ್ಯೋಗ ಮೇಳ

### ಜಿಲ್ಲೆಯಲ್ಲಿ ಉದ್ಯೋಗ ಆಕಾಂಕ್ಷಿಗಳು ಮೇಳದ ಸದುಪಯೋಗ ಪಡಿಸಿಕೊಳ್ಳಿ : ನಂದಿನಿ

**ಮಂಡ್ಯ:** ಸ್ಥಳೀಯ ಮತ್ತು ಮೈಸೂರು, ಬೆಂಗಳೂರು ಕಂಪನಿಗಳಿಗೆ ಹೆಚ್ಚು ಒತ್ತು ನೀಡಿ, ಉದ್ಯೋಗ ಆಕಾಂಕ್ಷಿಗಳಿಗೆ ಆಸಕ್ತಿಯುತ ಉದ್ಯೋಗ ಅವಕಾಶಗಳನ್ನು ಕಲ್ಪಿಬೇಕು. ಜಿಲ್ಲೆಯಲ್ಲಿ ಉದ್ಯೋಗ ಆಕಾಂಕ್ಷಿಗಳು ಉದ್ಯೋಗ ಮೇಳವನ್ನು ಸದುಪಯೋಗ ಪಡಿಸಿಕೊಳ್ಳಲು ಮುಂದಾಗಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಕೆ. ಆರ್. ನಂದಿನಿ ರವರು ತಿಳಿಸಿದರು.



ಫೆಬ್ರವರಿಯಲ್ಲಿ ನಡೆಯಲಿರುವ ಜಿಲ್ಲಾ ಮಟ್ಟದ "ಉದ್ಯೋಗ ಮೇಳ" ಕುರಿತು ಜಿಲ್ಲಾ ಪಂಚಾಯತ್ ನ ಮಿನಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮಂಡ್ಯ ಬಾಲಕರ ಪದವಿ ವಿಶ್ವ ವಿದ್ಯಾಲಯದಲ್ಲಿ ಉದ್ಯೋಗ ಮೇಳವನ್ನು ಆಯೋಜಿಸಲಾವುದು. ಗ್ರಾಮೀಣ ಪ್ರದೇಶಗಳಲ್ಲಿ ವಾಸಿಸುವ ಕೌಶಲಯುತ ಯುವ ಜನರಿಗೆ ಉದ್ಯೋಗ ಕಲ್ಪಿಸಬೇಕು. ಉದ್ಯೋಗ ಮೇಳವನ್ನು ಆಯೋಜನೆ ಕುರಿತು ಹೆಚ್ಚು ಪ್ರಚಾರ ನೀಡಬೇಕು ಎಂದು ಹೇಳಿದರು.

ಉದ್ಯೋಗ ಮೇಳ ಕುರಿತು ಆಟೋ ಪ್ರಚಾರ,ಬ್ಯಾನರ್, ಕರಪತ್ರ, ದೂರದರ್ಶನ ಹಾಗೂ ಸರ್ಕಾರಿ ಕಚೇರಿಗಳಲ್ಲಿನ ಆವರಣದಲ್ಲಿ ಜಾಹೀರಾತು ಫಲಕಗಳನ್ನು ಹಾಕಬೇಕು.ಸೋಶಿಯಲ್ ಮಿಡಿಯಾ ಮೂಲಕ ಪ್ರಚಾರ ಪಡಿಸಬೇಕು ಎಂದು ತಿಳಿಸಿದರು.

ಉದ್ಯೋಗ ಮೇಳದಲ್ಲಿ ಭಾಗವಹಿಸುವ ಎಲ್ಲ ಉದ್ಯೋಗ ಆಕಾಂಕ್ಷಿಗಳಿಗೆ ಸೂಕ್ತ ಮಾಹಿತಿಯೊಂದಿಗೆ ಆಕಾಂಕ್ಷಿಗಳ ಅರ್ಹತೆಯ ಅನುಗುಣವಾಗಿ ಉದ್ಯೋಗವನ್ನು ಕಲ್ಪಿಸಬೇಕು ಎಂದು ಸೂಚಿಸಿದರು.

ಜಿಲ್ಲೆಗೆ ಸೀಮಿತವಾಗದೇ ಬೇರೆ ಸ್ಥಳಗಳಲ್ಲಿಯೂ ಉದ್ಯೋಗ ಸಿಕ್ಕರೆ ಅಲ್ಲಿ ಹೋಗಿ ಕೆಲಸ ಮಾಡುವಂತೆ ಸ್ಥಳೀಯ ಅಧಿಕಾರಿಗಳು ಅರಿವು ಮೂಡಿಸಬೇಕು. ಜಿಲ್ಲೆಯಲ್ಲಿ ಉದ್ಯೋಗ ಆಕಾಂಕ್ಷಿಗಳು ಉದ್ಯೋಗ ಮೇಳವನ್ನು ಸದುಪಯೋಗ ಪಡಿಸಿ ಕೊಳ್ಳಬೇಕು ಎಂದು ಹೇಳಿದರು.

ಶಾಲಾ ಕಾಲೇಜು, ಪ್ರಾಂಶುಪಾಲರಿಗೆ ಉದ್ಯೋಗ ಪೂರ್ವತಯಾರಿ ಬಗ್ಗೆ ಅರಿವು ಮೂಡಿಸುವುದು

ಉದ್ಯೋಗ ಮೇಳದಲ್ಲಿ ವಿವಿಧ ರೀತಿಯ ಉದ್ಯೋಗ ಅವಕಾಶಗಳನ್ನು ಕಲ್ಪಿಸಲಾಗಿದೆ. ಉದ್ಯೋಗ ಆಕಾಂಕ್ಷಿಗಳು ನಿಮ್ಮ ಆಯ್ಕೆಯ ಉದ್ಯೋಗವನ್ನು ಅರಿಸಿಕೊಳ್ಳಬಹುದು ಎಂದು ಹೇಳಿದರು.

ಎಲ್ಲಾ ತಾಲ್ಲೂಕು ಕ್ಷೇತ್ರದಲ್ಲಿ ಉದ್ಯೋಗ ಮೇಳದ ಬಗ್ಗೆ ಜನರಿಗೆ ಮಾಹಿತಿ ದೊರಕುವಂತೆ ತಿಳಿಸಬೇಕು ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ ಎಲ್ಲಾ ಯುವ ಉದ್ಯೋಗ ಆಕಾಂಕ್ಷಿಗಳಿಗೆ ಉದ್ಯೋಗ ಮೇಳದ ಬಗ್ಗೆ ಅರಿವು ಮೂಡಿಸಬೇಕು.

ತಾಲ್ಲೂಕು ಮಟ್ಟದಲ್ಲಿ ಉದ್ಯೋಗ ಮೇಳ ಕುರಿತು ಸಭೆ ನಡೆಸಿ ತಾಲ್ಲೂಕು ಮತ್ತು ಗ್ರಾಮೀಣ ಪಂಚಾಯ್ತಿಗಳಲ್ಲಿ ಉದ್ಯೋಗ ಮೇಳದ ನೊಂದಣಿ ಪ್ರಕ್ರಿಯೆಯನ್ನು ಆರಂಭಿಸಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ನ ಮುಖ್ಯ ಯೋಜನಾಧಿಕಾರಿ ಧನುಷ್, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕರಾದ ರೂಪಶ್ರೀ, ನಬಾರ್ಡ್ ನ ಅಧಿಕಾರಿಗಳಾದ ಹರ್ಷಿತಾ, ಕೌಶಲ್ಯ ಅಭಿವೃದ್ಧಿ ಇಲಾಖೆಯ ಅಧಿಕಾರಿ ನಾಗಾನಂದ, ಪಶು ಸಂಗೋಪನ ಇಲಾಖೆಯ ಉಪನಿರ್ದೇಶಕರಾದ ಬಾಬಾ ಸಾಹೇಬ್, ಕೃಷಿ ಇಲಾಖೆ ಜಂಟಿ ನಿರ್ದೇಶಕರು ಡಾ.ವಿ.ಎಸ್. ಅಶೋಕ್,ಡಿ. ಡಿ. ಪಿ ಲೋಕೇಶ್, ಪ್ರಸನ್ನ ಕುಮಾರ್, ವಿ ಸಿ. ಫಾರಂ ನ ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಮುಖ್ಯಸ್ಥರಾದ ಡಾ. ಕಮಲಾ ಬಾಯಿ ಕೂಡಗಿ, ಕೈಗಾರಿಕಾ ಹಾಗೂ ವಾಣಿಜ್ಯ ಇಲಾಖೆಯ ಜಂಟಿ ನಿರ್ದೇಶಕರಾದ ಟಿ ದಿನೇಶ್ ರವರು ಕಾರ್ಯಕ್ರಮ ದಲ್ಲಿ ಉಪಸ್ಥಿತರಿದ್ದರು.

# ಸಾಮಾನ್ಯ ಸಭೆ ಯಶಸ್ವಿ

**ಹೊಸಕೋಟೆ:** ತಾಲ್ಲೂಕಿನ ಜಡಿಗೇನಹಳ್ಳಿ ಗ್ರಾಮ ಪಂಚಾಯ್ತಿ ಅವಧಿ ಫೆಬ್ರವರಿ 6ಕ್ಕೆ ಮುಕ್ತಾಯವಾಗಿಲಿದ್ದು ಗ್ರಾಪಂ ಅಧ್ಯಕ್ಷ ವೆಂಕಟೇಗೌಡ ಅಧ್ಯಕ್ಷತೆಯಲ್ಲಿ ಕಡೆಯ ಸಾಮಾನ್ಯ ಸಭೆಯನ್ನು ನಡೆಸಲಾಯಿತು.

ಐದು ವರ್ಷಗಳ ಕಾಲ ಗ್ರಾಪಂ ವ್ಯಾಪ್ತಿಯ ಎಲ್ಲಾ ಗ್ರಾಮಗಳ ಅಬಿವೃದ್ಧಿ ದೃಷ್ಠಿಯಿಂದ ಚುನಾಯಿತರಾಗಿದ್ದ ಸದಸ್ಯರು ಪರಸ್ಪರ ಸಹಕಾರ ನೀಡುವ ಮೂಲಕ ಪಕ್ಷತೀತವಾಗಿ ಅಧಿಕಾರ ನಿರ್ವಹಿಸಿ ಅಭಿವೃದ್ದಿಗೆ ಸಹಕರಿಸಿದ್ದು ಸರ್ಕಾರದ ಅನುದಾನಗಳನ್ನು ಸಮರ್ಪಕವಾಗಿ ಜನರಿಗೆ ತಲುಪಿಸಿದ್ದೇವೆ. ಐದು ವರ್ಷಗಳ ಅಧಿಕಾರ ಅವಧಿ ಮುಕ್ತಾಯ ಆಗುತ್ತಿದೆ. ಜನಪ್ರತಿನಿಧಿಗಳಿಗೆ ಅದಿಕಾರ ಎನ್ನುವುದು ಶಾಶ್ವತವಲ್ಲ. ಬದಲಾಗಿ ನಮ್ಮ ಅಧಿಕಾರಾವಧಿಯಲ್ಲಿ ಮಾಡಿರುವ ಅಬಿವೃದ್ದಿ ಕಾರ್ಯಗಳು ನಮ್ಮ ಹೆಸರೇಳುತ್ತವೆ. ಅಂತಹ ಕೆಲಸ ಮಾಡಿರುವ ತೃಪ್ತಿ ಎಲ್ಲರಿಗಿದೆ ಎಂದರು.

ಇದೇ ಸಂಧರ್ಭದಲ್ಲಿ ಸಾಮಾನ್ಯ ಸಭೆಯ ನಂತರ ಅಧ್ಯಕ್ಷ ವೆಂಕಟೇಗೌಡ ಎಲ್ಲಾ ಸದಸ್ಯರನ್ನು ಸನ್ಮಾನಿಸಿದರು

ಸಭೆಯಲ್ಲಿ ಉಪಾಧ್ಯಕ್ಷೆ ರಾಧಿಕಾ, ಸದಸ್ಯರುಗಳಾದ ರಮೇಶ್, ಮಂಜುನಾಥ್‌ಜೆಡಿ, ಕಾಂತಮ್ಮ, ಮಾಧುರಿ, ಪಲ್ಲವಿ, ವೆಂಕಟಾಚಲಯ್ಯ, ವೀಣಾ, ರತ್ನಮ್ಮ,ಹೆಚ್.ಎಸ್ ರವಿ, ರಘುನಾಥ್, ವೆಂಕಟೇಶಪ್ಪ, ಮುನಿರತ್ನಮ್ಮ, ಆಶಾರಾಣಿ, ಪಿಡಿಓ ಲೋಕೇಶ್, ಪಂಚಾಯ್ತಿ ಸಿಬ್ಬಂದಿ ಹಾಜರಿದ್ದರು.



# ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ

## ಏ.12ರಂದು ಅಖಿಲ ಭಾರತ ಸಾರ್ವತ್ರಿಕ ಮುಷ್ಕರಕ್ಕೆ ಕರೆ

**ಮಂಡ್ಯ:** ಸಾಮಾನ್ಯ ಜನರ ಜೀವನೋ ಪಾಯ ಮತ್ತು ಹಕ್ಕುಗಳ ಮೇಲಿನ ನಿರಂತರ ದಾಳಿ ನಿಲ್ಲಿಸಲು ಕೇಂದ್ರ ಸರಕಾರದ ಕಾರ್ಮಿಕ ಕೋಡ್ ರದ್ದು ಪಡಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಏ.12ರಂದು ಅಖಿಲ ಭಾರತ ಸಾರ್ವತ್ರಿಕ ಮುಷ್ಕರ ಮತ್ತು ಸ್ವಯಂ ಪ್ರೇರಿತ ಬಂದ್ ನಡೆಸಲಾಗುವುದು ಎಂದು ಸಿಐಟಿಯು ಪ್ರಧಾನ ಕಾರ್ಯದರ್ಶಿ ಸಿ.ಕುಮಾರಿ ತಿಳಿಸಿದರು.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶದಲ್ಲಿದ್ದ 29 ಕಾರ್ಮಿಕ ಕಾನೂನುಗಳನ್ನು ರದ್ದುಗೊಳಿಸಿ ಕಾರ್ಪೊರೇಟ್ ಸಂಸ್ಥೆಗಳಿಗೆ ನೆರವಾಗಲು 4 ಕಾರ್ಮಿಕ ಸಂಹಿತೆಗಳನ್ನು ಪ್ರಕಟಿಸಿದೆ. 2019 ಹಾಗೂ 2020ರಲ್ಲೂ ಇದು ಜಾರಿಯಾಗದಂತೆ 5 ಮುಷ್ಕರಗಳನ್ನು ಮಾಡಿ ತಡೆಹಿಡಿಯಲಾಗಿತ್ತು ಎಂದರು.

ಸಾರ್ವಜನಿಕ ಬಳಕೆಯ ವಿದ್ಯುತ್, ದೂರ ಸಂಪರ್ಕ, ಕಲ್ಲಿದ್ದಲು, ಗಣಿಗಾರಿಕೆ, ರೈಲ್ವೆ, ಹೆದ್ದಾರಿ, ಬಂದರು, ಹಡುಗು ಕಟ್ಟೆಗಳು, ನಗರಾಭಿವೃದ್ಧಿ, ತೈಲ ಮುಂತಾದವನ್ನು ಖಾಸಗೀಕರಣ ಮಾಡಲಾಗಿದೆ. ಭೂಸ್ವಾಧೀನ ಕಾಯ್ದೆ ಮೂಲಕ ಶೇ.70ರಷ್ಟು ಕೃಷಿಕರು ನಿರುದ್ಯೋಗಿಗಳಾಗಿದ್ದಾರೆ. ಇದೀಗ ಯೂನಿಯನ್ ಮುಕ್ತ ವಾತಾವರಣ ಕಲ್ಪಿಸಲು ಕಾರ್ಮಿಕ ಸಂಹಿತೆಗಳನ್ನು ಜಾರಿ ಮಾಡಿ ಹೊಸ ಶ್ರಮಿಕ ನೀತಿ ಜಾರಿಗೆ ತರಲು ಯತ್ನಿಸುತ್ತಿದೆ ಎಂದು ಆರೋಪಿಸಿದರು.

ಪರಮಾಣು ಶಕ್ತಿಯ ಸುಸ್ಥಿರ ಬಳಕೆ ಮತ್ತು ಪ್ರಗತಿಯ ಕಾಯ್ದೆಯ ಮೇಲಿನ ನಿಯಂತ್ರಣ, ಮನರೇಗಾ ಯೋಜನೆ ಮುಂದುವರಿಕೆ, ಬಲವಂತದ ಭೂ ಸ್ವಾಧೀನ, ಭೂ, ಸುಧಾರಣಾ ಕಾಯ್ದೆ ಹಿಂಪಡೆಯಬೇಕು. ಕೃಷಿ ಉತ್ಪನ್ನಗಳಿಗೆ ಎಂಎಸ್‌ಪಿ ಶಾಸನ ಭದ್ರತೆ ಮುಕ್ತ ವಾಣಿಜ್ಯ ಒಪ್ಪಂದ ಹಾಗೂ ರಾಜ್ಯ ಸರಕಾರ 4 ಲೇಬರ್ ಕೋಡ್ ನಿಯಮಾವಳಿ ಹಾಗೂ ಕೇಂದ್ರ ಸರಕಾರದ ಎಲ್ಲ ಮಾನವ ವಿರೋಧಿ ಮಸೂದೆ ತಿರಸ್ಕರಿಸಬೇಕು ಎಂದು ಒತ್ತಾಯಿಸಿದರು.

ಡಿಎಸ್‌ಎಸ್ ಜಿಲ್ಲಾ ಸಂಚಾಲಕ ಎಂ.ವಿ.ಕೃಷ್ಣ ಮಾತನಾಡಿ, ದೇಶಾದ್ಯಂತ ಕರೆ ನೀಡಿರುವ ಸಾರ್ವತ್ರಿಕ ಮುಷ್ಕರ ಹಾಗೂ ಸ್ವಯಂ ಪ್ರೇರಿತ ಬಂದ್‌ನ ಹಿನ್ನಲೆ ಫೆ.5ರಿಂದ ಜಿಲ್ಲೆ ಎಲ್ಲ ಹೋಬಳಿ ಮಟ್ಟದಲ್ಲಿ ಪ್ರಚಾರ ಮಾಡಲಾಗುವುದು. ಫೆ.12ರಂದು ನಗರದಾದ್ಯಂತ ಬೈಕ್ ಹಾಗೂ ಆಟೋಗಳ ಜಾಥ ನಡೆಸಲಾಗುವುದು ಎಂದು ಮಾಹಿತಿ ನೀಡಿದರು.

ಗೋಷ್ಠಿಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಎ.ಎಲ್. ಕೆಂಪೂಗೌಡ, ಸಿಐಟಿಯು ಜಿಲ್ಲಾಧ್ಯಕ್ಷ ಎಂ.ಎಂ.ಶಿವಕುಮಾರ್, ಕರುನಾಡ ಸೇವಕರು ಅಧ್ಯಕ್ಷ ಎಂ.ಬಿ.ನಾಗಣ್ಣಗೌಡ, ಆಟೋ ಚಾಲಕರ ಸಂಘದ ಅಧ್ಯಕ್ಷ ಕೃಷ್ಣ, ಎಐಎಡಬ್ಲ್ಯೂಯು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಿ.ಹನುಮೇಶ್, ಜನಶಕ್ತಿಯ ಎಂ.ಸಿದ್ದರಾಜು ಇದ್ದರು.

# ಬಡವರ ಮಕ್ಕಳು ಉನ್ನತ ಮಟ್ಟದ ಅಧಿಕಾರಿಗಳಾಗಲಿ: ವಕೀಲರು ಎಂ.ಶಿವಪ್ರಸಾದ್

**ತಿ.ನರಸೀಪುರ:** ಬಡವರು ಮತ್ತು ಮಧ್ಯಮ ವರ್ಗದ ಕುಟುಂಬಗಳ ಮಕ್ಕಳು ಕೂಡ ಉನ್ನತ ಮಟ್ಟದ ಅಧಿಕಾರಿಗಳಾಗಬೇಕು ಎಂಬ ಅಭಿಲಾಷೆಯಿಂದ ದೇವರತ್ನ ಫೌಂಡೇಶನ್ ಯುಪಿಎಸ್ಸಿ ಮತ್ತು ಕೆಪಿಎಸ್ಸಿ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತವಾಗಿ ತರಬೇತಿಯನ್ನ ಹಲವು ವರ್ಷಗಳಿಂದ ನೀಡಲಾಗುತ್ತಿದ್ದೇವೆ ಎಂದು ಫೌಂಡೇಶನ್ ಸಂಸ್ಥಾಪಕ ಹಾಗೂ ವಕೀಲ ಎಂ.ಶಿವಪ್ರಸಾದ್ ಹೇಳಿದರು.



ಪಟ್ಟಣದ ಡಾ.ಬಿ.ಆರ್. ಅಂಬೇಡ್ಕರ್ ಸಮುದಾಯ ಭವನದಲ್ಲಿ ಭಾನುವಾರ ದೇವರತ್ನ ಫೌಂಡೇಶನ್ ವತಿಯಿಂದ ಆಯೋಜಿಸಿದ್ದ 2026–27 ನೇ ಶೈಕ್ಷಣಿಕ ಸಾಲಿನ ಯುಪಿಎಸ್ಸಿ ಮತ್ತು ಕೆಪಿಎಸ್ಸಿ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿ ಕಾರ್ಯಾಗಾರದಲ್ಲಿ ಮಾತನಾಡಿದ ಅವರು ಅಧಿಕಾರಿಗಳಾಗುವ ಕನಸನ್ನು ಕಾಣುವ ಮಕ್ಕಳಿಗೆ ಆರ್ಥಿಕ ಹೊರೆಯಾಗದಂತೆ ಕಾರ್ಯಾಗಾರದಲ್ಲಿ ನುರಿತ ಶಿಕ್ಷಕರಿಂದ ಬೋಧನೆಯನ್ನು ಕಲ್ಪಿಸಿಕೊಡುತ್ತಿದ್ದೇವೆ ಎಂದರು.

ಆರ್ಥಿಕವಾಗಿ ಹಿಂದುಳಿದ ಜನರಿಗೆ ಮೂಲಸೌಕರ್ಯವನ್ನು ಕಲ್ಪಿಸಿ, ಮಕ್ಕಳ ಶಿಕ್ಷಣಕ್ಕೆ ತಾಂತ್ರಿಕ ಪರಿಕರಗಳನ್ನು ಉಚಿತವಾಗಿ ಕೊಟ್ಟಿದ್ದೇವೆ. ದೇವರತ್ನ ಫೌಂಡೇಶನ್ ಯಾವೊಂದು ಜಾತಿ, ಧರ್ಮ ಅಥವಾ ರಾಜಕೀಯ ಪಕ್ಷಕ್ಕೆ ಸೀಮಿತವಾದ ಸಂಸ್ಥೆಯಲ್ಲ. ಹಳ್ಳಿಗಾಡಿನ ಹಿನ್ನೆಲೆಯಿರುವ ಬಡವರ ಮಕ್ಕಳಿಗೆ ಆಶ್ರಯವಾಗುವ ಶೈಕ್ಷಣಿಕ ಸಂಸ್ಥೆಯಾಗಿದೆ. ತರಬೇತಿ ಪಡೆದ ವಿದ್ಯಾರ್ಥಿಗಳು ಮುಂದಿನ ವರ್ಷದಲ್ಲಿ ಜಿಲ್ಲಾಧಿಕಾರಿಯಾಗಿಯೂ, ಪೊಲೀಸ್ ವರಿಷ್ಠಾಧಿಕಾರಿಗಳಾಗಿಯೂ ಅಥವಾ ಸ್ಥಳೀಯ ಸಂಸ್ಥೆಗಳ ಆಯುಕ್ತರಾಗಿಯೂ ರೂಪುಗೊಳ್ಳಬೇಕೆಂದು ಎಂ.ಶಿವಪ್ರಸಾದ್ ಕರೆ ನೀಡಿದರು.

ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷ ಬಿ.ಮಹದೇವಸ್ವಾಮಿ, ದೇವರತ್ನ ಫೌಂಡೇಶನ್ ನ ಉಪಾಧ್ಯಕ್ಷ ಶ್ರೀನಿವಾಸ ಸಾಗರ್, ಮಾರ್ಗದರ್ಶಕರಾದ ಸುರೇಶ್, ಶಿವಕುಮಾರ್ ಎಸ್ ಪಿಲ್ಲಳ್ಳಿ, ಖಜಾಂಚಿ ದೇವಯ್ಯ,

ಸಂಚಾಲಕರಾದ ವಿಠಲ ಮಂಜುನಾಥ್, ನಾಗರಾಜ್, ರಂಗಸ್ವಾಮಿ, ಶಿವಕುಮಾರ್ ರಾಮಸಮುದ್ರ, ಸದಸ್ಯರಾದ ಶ್ರೀಕಾಂತ್, ಪುನೀತ್, ಕುಮಾರ್, ಹರೀಶ್, ನಿತಿನ್ ಚಕ್ರವರ್ತಿ, ವಿನೋದ್ ರಾಜ್, ಸುರೇಶ ಹಾಗೂ ವಿದ್ಯಾರ್ಥಿಗಳು ಇದ್ದರು.

# ಮಕ್ಕಳಿಗೆ ಅಂಕ ಗಳಿಕೆ ಮಾತ್ರವಲ್ಲ; ಬದುಕು ನಿರ್ವಹಣೆ ತಿಳಿಸಿ: ಕರಿಗೌಡ

**ಕೆ.ಆರ್.ನಗರ:** ಕಾಲೇಜು ವಿದ್ಯಾಭ್ಯಾಸ ಮಾಡುವಾಗ ವಿದ್ಯಾರ್ಥಿಗಳು ತಂದೆ ತಾಯಿ ಕಷ್ಟ ಅರ್ಥ ಮಾಡಿಕೊಂಡು ಓದುವುದರ ಕಡೆ ಹೆಚ್ಚು ಗಮನ ಹರಿಸಿದರೇ ಮಾತ್ರ ಉನ್ನತ ಪದವಿ ಶಿಕ್ಷಣ ಸಾಧನೆ ಮಾಡಲು ಸಾಧ್ಯ ಎಂದು ಕಾಲೇಜು ಸಿಡಿಸಿ ಉಪಾಧ್ಯಕ್ಷ ಹನಸೋಗೆ ಕರಿಗೌಡ ತಿಳಿಸಿದರು. ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಆಯೋಜಿಸಿದ ಸಾಹಿತ್ಯ ಮತ್ತು ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.



ತಂದೆ ತಾಯಿಗಳು ಮತ್ತು ಉಪನ್ಯಾಶಕರು ತಮ್ಮ ಮಕ್ಕಳ ಬಗ್ಗೆ ಅಪಾರ ನಂಬಿಕೆಯನ್ನು ಇಟ್ಟು ಕಾಲೇಜಿಗೆ ಕಳುಹಿಸುತ್ತಾರೆ. ಅವರು ಕೇಳಿದ್ದೆಲ್ಲ ಕಷ್ಟಪಟ್ಟು ತಂದು ಕೊಡಿಸುತ್ತಾರೆ. ನನ್ನ ಮಗ ನನಗಿಂತ ಹೆಚ್ಚು ಶಿಕ್ಷಣ ಪಡೆದು ಉನ್ನತ ಅಧಿಕಾರಿ ಆಗುತ್ತಾನೆ ಎಂಬ ಕನಸು ಕಟ್ಟಿಕೊಂಡು ನಿಮ್ಮ ಸಾಧನೆಗಾಗಿ ಕಾಯುತ್ತಿರುವ ಪೋಷಕರಿಗೆ ಮತ್ತು ಉಪನ್ಯಾಸಕರಿಗೆ ನೀವು ಉತ್ತಮ ಅಂಕ ಪಡೆವ ಮೂಲಕ ಉನ್ನತ ಕೀರ್ತಿ ಕೊಡುವ ಜವಾಬ್ದಾರಿ ನಿಮ್ಮದಾಗಿದೆ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಪ್ರತಿ ವರ್ಷ ನಮ್ಮ ಹನಸೋಗೆ ಪಿಯುಸಿ ಕಾಲೇಜಿನಲ್ಲಿ ಉತ್ತಮ ಫಲಿತಾಂಶ ಬರುತ್ತಿದೆ ಅದೇ ರೀತಿ ಈ ವರ್ಷವೂ ಶೇಕಡ ನೂರರಷ್ಟು ಫಲಿತಾಂಶ ಬರಬೇಕು ಏಕೆಂದರೆ ಇಡೀ ಗ್ರಾಮ ನಿಮ್ಮಗಳ ಫಲಿತಾಂಶದ ನಿರೀಕ್ಷೆಯಲ್ಲಿದೆ. ಪ್ರತಿ ವರ್ಷ ಉತ್ತಮ ಅಂಕ ಪಡೆದು ತೇರ್ಗಡೆಯಾದ ಎಲ್ಲ ಸಾಧಕ ವಿದ್ಯಾರ್ಥಿಗಳಿಗೆ ಕಾಲೇಜಿನ ಪರವಾಗಿ ಅಭಿನಂದಿಸಿ ಗೌರವಿಸಲಾಗುವುದು.

ಅದೇ ರೀತಿ ಈ ವರ್ಷವೂ ಸಾಹಿತ್ಯ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಕಾಲೇಜು ವಿದ್ಯಾರ್ಥಿಗಳ ವಿದ್ಯಾಭ್ಯಾಸ ಹೇಗಿರಬೇಕು ಹೇಗೆ ಪರೀಕ್ಷೆ ಎದುರಿಸಬೇಕು ಸ್ವಲ್ಪ ದಾರಿ ತಪ್ಪಿದರೂ ಕಾಲೇಜು ವಿದ್ಯಾರ್ಥಿಗಳ ಭವಿಷ್ಯ ಹೇಗಾಗುತ್ತೆ ಎನ್ನುವುದರ ಅರಿವು ಮೂಡಿಸಲಾಗುತ್ತಿದೆ ಎಂದರು.

ಮುಖ್ಯ ಭಾಷಣಕಾರರಾಗಿ ನಿಜಗುನಹಳ್ಳಿ ಮಂಜುನಾಥ್ ಮಾತನಾಡಿ, ಕಾಲೇಜು ವಿದ್ಯಾರ್ಥಿಗಳು ಈ ಸಮಾಜದ ಆಸ್ತಿಯಾಗಿದ್ದೀರಿ. ಪ್ರಜಾಪ್ರಭುತ್ವದಲ್ಲಿ ಉತ್ತಮ ಸಮಾಜ ನಿರ್ಮಾಣವಾಗಬೇಕಾದರೆ ಕಾಲೇಜು ವಿದ್ಯಾರ್ಥಿಗಳ ಪಾತ್ರವೇ ಬಹುಮುಖ್ಯವಾಗಿರುತ್ತದೆ. ನೀವುಗಳು ಸ್ವಲ್ಪ ಎಚ್ಚರ ತಪ್ಪಿದರೂ ನಿಮ್ಮ ಮತ್ತು ಸಮಾಜದ ಭವಿಷ್ಯದ ವ್ಯವಸ್ಥೆ ಆದಗೆಟ್ಟು ಹೋಗುತ್ತದೆ. ಸರ್ಕಾರದಿಂದ ಬರುವ ಸೌಲಭ್ಯಗಳನ್ನು ಬಳಸಿಕೊಂಡು ಉತ್ತಮ ಶಿಕ್ಷಣ ಪಡೆದು ಉನ್ನತ ಅಧಿಕಾರಿಗಳಾಗಿ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

2025 ನೇ ಸಾಲಿನ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದು ತೇರ್ಗಡೆಯಾದ 3 ವಿದ್ಯಾರ್ಥಿಗಳಿಗೆ ಸಾಧಕ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಅವರಿಂದ ಈಗಿನ ವಿದ್ಯಾರ್ಥಿಗಳಿಗೆ ಓದುವ ಮಾರ್ಗದರ್ಶನವನ್ನು ಕೊಡಿಸಲಾಗಿತ್ತು. ಕಾಲೇಜು ಅಭಿವೃದ್ಧಿಗೆ ಬೇಕಿರುವ ಸೌಲಭ್ಯಗಳ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಮತ್ತು ಶಾಸಕರ ಗಮನಕ್ಕೆ ತಂದು ಹೆಚ್ಚಿನ ಅನುದಾನ ಬಿಡುಗಡೆ ಮಾಡಿಸುವುದರ ಬಗ್ಗೆ ತಿಳಿಸಿ ಸದಸ್ಯರು ತಿಳಿಸಿದರು. ಸಂದರ್ಭದಲ್ಲಿ ಪ್ರಾಂಶುಪಾಲ ವಿಶ್ವನಾಥ್, ಸಿಡಿಸಿ ಸದಸ್ಯ ಎಚ್.ಎಸ್.ಕೃಷ್ಣ, ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಕೆ.ವಿ.ಮಾದೇವಪ್ಪ, ನಿರ್ದೇಶಕರಾದ ತಿಮ್ಮೇಗೌಡ, ರಾಮೇಗೌಡ, ನವೀನ್, ಜಯಬಸವಣ್ಣ, ಪರಮೇಶ್, ಪಟೇಲ್ ಕುಮಾರ್, ಮನೋಹರ್, ಅಮೃತ್, ಉಪನ್ಯಾಸಕರ ಸುರೇಶ್, ಬೋರೇಗೌಡ, ಮಹದೇವ್, ಶ್ರುತಿ, ಹರ್ಷಿತಾ, ಶಶಿಕುಮಾರ್, ಪಿಡಿಓ ಸರಳ ಸೇರಿದಂತೆ ಸಿಡಿಸಿ ಸದಸ್ಯರು ಮತ್ತು ಪೋಷಕರು ಇದ್ದರು.

# ಏಕರೂಪದ ಸಮಾನ ಶಿಕ್ಷಣ ನೀತಿ ಜಾರಿಗೆ ಆಗ್ರಹಿಸಿ ಏ.11ರಿಂದ 233 ಗ್ರಾ.ಪಂಗಳಲ್ಲಿ ಪಾದಯಾತ್ರೆ

ಮಂಡ್ಯ: ರಾಜ್ಯದಲ್ಲಿ ಏಕರೂಪದ ಸಮಾನ ಶಿಕ್ಷಣ ನೀತಿ ಜಾರಿ ಮಾಡಿ ಸರಕಾರಿ ಶಾಲೆಗಳನ್ನು ಉಳಿಸಲು ಏ.11ರಿಂದ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಕರ್ನಾಟಕ ರಾಜ್ಯ ಎಸ್‌ಡಿಎಂಸಿ ಸಂಘದಿಂದ ಜಿಲ್ಲೆಯ 233 ಗ್ರಾ.ಪಂಗಳಲ್ಲಿ ಪಾದಯಾತ್ರೆ ಮೂಲಕ ಜನಜಾಗೃತಿ ಮೂಡಿಸಲಾಗುವುದು ಎಂದು ರೈತ ಸಂಘದ ಜಿಲ್ಲಾಧ್ಯಕ್ಷ ಇಂಡುವಾಳು ಚಂದ್ರಶೇಖರ್ ತಿಳಿಸಿದರು.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಜಾಪ್ರಭುತ್ವದ ಉಳಿವಿಗೆ ಸರಕಾರಿ ಶಾಲೆಗಳೇ ಆಧಾರ ಸ್ಥಂಭಗಳು. ಅವುಗಳು ಗ್ರಾಮಗಳ ಸಾಂಸ್ಕೃತಿಕ ಕೇಂದ್ರಗಳಾಗಿವೆ. ಆದ್ದರಿಂದ ಏಕರೂಪ ಸಮಾನ ಶಿಕ್ಷಣ ನೀತಿ ಜಾರಿಗೆ ತಂದು, ರಾಜಕಾರಣಿಗಳು ಹಾಗೂ ಸರಕಾರಿ ನೌಕರರ ಮಕ್ಕಳಿಗೆ ಸಮನಾದ ಶಿಕ್ಷಣ ಬಡವರ ಮಕ್ಕಳಿಗೂ ಸಿಗಬೇಕೆಂಬುದು ನಮ್ಮ ಬೇಡಿಕೆ ಎಂದರು.

ರಾಜ್ಯದ ಗ್ರಾಮಗಳಲ್ಲಿನ ಶಾಲೆಗಳನ್ನು ಮ್ಯಾಗ್ನೆಟ್ ಶಾಲೆಗಳಿಗೆ ವಿಲೀನಗೊಳಿಸಿ ಬಡಮಕ್ಕಳನ್ನು ಶಿಕ್ಷಣ ವಂಚಿತರನ್ನಾಗಿ ಮಾಡಲಾಗುತ್ತಿದೆ. ಅಲ್ಲದೇ ಇದು ಖಾಸಗಿ ಶಾಲೆಗಳಿಗೆ ನೆರವಾಗುವ ಹುನ್ನಾರವಾಗಿದೆ ಎಂದು ಆರೋಪಿಸಿದರು.

ಸಂಘದ ಮಂಡ್ಯ ತಾಲೂಕು ಯುವ ಘಟಕದ ಅಧ್ಯಕ್ಷ ಸಂತೋಷ್ ಮಂಡ್ಯಗೌಡ ಮಾತನಾಡಿ, ಜಿಲ್ಲೆಯ ಎಲ್ಲಾ ಗ್ರಾಮಗಳನ್ನು ತಲುಪಲಿವೆ. ಅದರೊಳಗೆ ಸರಕಾರ ಜಿಲ್ಲಾದ್ಯಂತ ಮುಚ್ಚಿರುವ 354 ಶಾಲೆಗಳನ್ನು ಮತ್ತೆ ತೆಗೆದು ಸಿಬಿಎಸ್‌ಇ ಹಾಗೂ 1500ಕ್ಕೂ ಹೆಚ್ಚು ಸರಕಾರಿ ಶಾಲೆಗಳಲ್ಲಿ ಎಲ್‌ಕೆಜಿಯಿಂದ 5ನೇ ತರಗತಿವರೆಗೆ ಗುಣಮಟ್ಟದ ದ್ವಿಭಾಷಾ ನೀತಿಯಲ್ಲಿ ಶಿಕ್ಷಣ, ಮೂಲಭೂತ ಸೌಕರ್ಯ ಒದಗಿಸಬೇಕು. ಮುಂದಿನ ಶೈಕ್ಷಣಿಕ ಅವಧೀಯ ಆರಂಭದಲ್ಲಿ ಜಿಲ್ಲೆಯ ಎಲ್ಲ ಸರಕಾರಿ ಶಾಲೆಗಳಿಗೆ ಬೀಗ ಹಾಕಿ ಮಕ್ಕಳು ಹಾಗೂ ಪೋಷರಕ ಜತೆಗೂಡಿ ಡಿಡಿಪಿಐ ಕಚೇರಿಗೆ ಮುತ್ತಿಗೆ ಹಾಕಲಾಗುವುದು ಅಲ್ಲದೇ ನಗರದ ಸರ್.ಎಂ.ವಿ ವಿಶ್ವೇಶ್ವರಯ್ಯ ಪ್ರತಿಮೆಯ ಎದುರು ಮಕ್ಕಳಿಗೆ ಬಹಿರಂಗ ಪಾಠ ಮಾಡಲಾಗುವುದು ಎಂದು ಎಚ್ಚರಿಸಿದರು.

ಸರಕಾರ ಈ ಕ್ರಮಕ್ಕೆ ಮುಂದಾಗದಿದ್ದರೆ ಎಸ್‌ಡಿಎಂಸಿ, ಹಾಗೂ ಹಿರಿಯ ವಿದ್ಯಾರ್ಥಿ ಸಂಘದವರೇ ಜಿಲ್ಲೆಯಲ್ಲಿ ಮುಚ್ಚಿದ 354 ಶಾಲೆಗಳ ಬೀಗ ತೆರೆದು ಶಿಕ್ಷಕರ ನೇಮಕ ಮಾಡಿ, ಮೂಲಭೂತ ಸೌಕಯ ಒದಗಿಸಿ, ಶಿಕ್ಷಕರಿಗೆ ಸಿಬಿಎಸ್‌ಇ ಗುಣಮಟ್ಟದ ತರಬೇತಿ ಕೊಟ್ಟು ಮಾರ್ಗದರ್ಶನ ನೀಡುವುದು. ಜಿಲ್ಲೆಯ ಪ್ರತಿ ಗ್ರಾ.ಪಂ ವ್ಯಾಪ್ತಿಯಲ್ಲಿ ನವೋದಯ ಮಾದರಿ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಕೇಂದ್ರ ಸ್ಥಾಪನೆ ಮಾಡಿ, ಶಿಕ್ಷಕರಿಗೆ ಪೂರ್ಣ ತರಬೇತಿ ನೀಡಿ ಮಾರ್ಗದರ್ಶನ ನೀಡಲಾಗುವುದು ಎಂದು ಹೇಳಿದರು. ಸರಕಾರಿ ಶಾಲೆಗಳ ಉಳಿವಿಗಾಗಿ ಜಿಲ್ಲೆಯಲ್ಲಿ ನಡೆಯಲಿರುವ ಐತಿಹಾಸಿಕ ಪಾದಯಾತ್ರೆಗೆ ಬೆಂಬಲಿಸುವರು ದೇಣಿಗೆ ನೀಡಿ ಬಲ ತುಂಬುವಂತೆ ಇದೇ ವೇಳೆ ಮನವಿ ಮಾಡಿದರು. ಗೋಷ್ಠಿಯಲ್ಲಿ ಸಂಘದ ಉಪಾಧ್ಯಕ್ಷರಾದ ರಾಮಲಿಂಗೇಗೌಡ, ಶಿವಳ್ಳಿ ಚಂದ್ರಶೇಖರ್, ತಾಲೂಕು ಅಧ್ಯಕ್ಷ ಪುಟ್ಟಸ್ವಾಮಿ, ಎಸ್‌ಡಿಎಂಸಿ ಮೈಸೂರು ಜಿಲ್ಲಾಧ್ಯಕ್ಷ ರೇವಣ್ಣ ಇದ್ದರು.



# ಭಯವೆಂದರೆ ಭಯವೇ ಹೌದು...!



| ಪುಷ್ಪ ಪ್ರಸಾದ್

ಭಯ ಮನುಷ್ಯನ ಮೊದಲ ಶತ್ರುವಾಗಿದೆ. ಮನುಷ್ಯ ಭಯದಿಂದ ಬದುಕುತ್ತಿರುವದೇ ಜಗತ್ತಿನಲ್ಲಿ ನಡೆಯುತ್ತಿರುವ ಎಲ್ಲ ಅನಾಹುತಗಳಿಗೆ ಕಾರಣವಾಗಿದೆ. ನಮ್ಮ ನಿತ್ಯ ಜೀವನದಲ್ಲಿ ಒಂದು ರೀತಿಯ ವಿಚಿತ್ರವಾದ ಭಯ ಕಾಡುತ್ತದೆ. ಕೆಲವೊಮ್ಮೆ ಭಯದ ಮೂಲ ಅವರವರ ಗಮನಕ್ಕೆ ಬರಬಹುದು, ಕೆಲವೊಮ್ಮೆ ಭಯಕ್ಕೆ ಅವರಿಗಿರುವ ಅಭದ್ರತೆ ಕಾರಣವಾಗಬಹುದು, ಮತ್ತೆ ಕೆಲವೊಮ್ಮೆ ಕಷ್ಟವೇ ಬಾರದೆ, ಬರಬಹುದೇನೋ ಎಂಬ ಕಲ್ಪನೆಯೇ ಅವರ ಭಯಕ್ಕೆ ಮುಖ್ಯ ಕಾರಣವಾಗಿರಬಹುದು. ಭಯದಲ್ಲಿ ಎರಡು ವಿಧವಿದೆ. ಒಂದು ತಾನು ಇಷ್ಟಪಟ್ಟಿದ್ದು ತನ್ನಿಂದ ದೂರವಾಗಬಹುದೇನೋ ಎಂಬ ಭಯ. ಎರಡನೆಯದು ತನಗೆ ಇಷ್ಟವಿಲ್ಲದ್ದು ಪ್ರಾಪ್ತಿಯಾಗುತ್ತೆಂಬ ಭಯ. ಈ ಭಯವು ಆತಂಕ ಮತ್ತು ಕಾತರತೆಯನ್ನು ಗಟ್ಟಿಯಾಗಿ ಹಿಡಿದುಕೊಂಡಿರುತ್ತದೆ. ಹೀಗಾಗಿ ಭಯದಿಂದ ಆತಂಕ ತಪ್ಪಿದ್ದಲ್ಲ. ನಮಗೆಲ್ಲರಿಗೂ ಒಂದಲ್ಲ ಒಂದು ಭಯ ಇದ್ದದ್ದೇ. ಹುಲಿಯ ಭಯ ಸಹಜವೆನ್ನುತ್ತೀರಾದರೂ ಕೆಲವರಿಗೆ ಜಿರಳೆಯ ಭಯ, ಇನ್ನೊಬ್ಬರಿಗೆ ಹಾವಿನ ಭಯ, ಬಹಳಷ್ಟು ಜನರಿಗೆ ರೋಗದ ಭಯ, ವೃದ್ಧಾಪ್ಯದ ಭಯ, ಸಾವಿನ ಭಯ. ಯಾವುದೇ ಭಯ ಇಲ್ಲದವನಿಗೂ ಹೆಂಡತಿಯ ಭಯ ಇದ್ದೇ ಇರುತ್ತದೆ ಹೌದಲ್ಲವೇ? ಭಯವಿಲ್ಲದವರು ಇಲ್ಲಿ ಯಾರೂ ಬದುಕಿಲ್ಲ! ಆದರೆ ಅನಿಯಂತ್ರಿತ ಭಯದಿಂದ ಬಳಲುವುದಿದೆಯಲ್ಲ, ಅದೊಂದು ಹೇಳಿಕೊಳ್ಳಲಿಕ್ಕಾಗದ ಯಾತನೆ. ಭಯ ಎನ್ನುವುದು ಮನುಷ್ಯನ ಮನಸ್ಸಿನ ಏಳು ಮೂಲಭೂತ ಭಾವನೆಗಳಲ್ಲಿ ಒಂದು. ಹಾಗಾಗಿ ಸಿಟ್ಟು, ಸಿಡುಕು, ಸಂತೋಷಗಳಂತೆಯೇ ಭಯವು ಸಹ ಎಲ್ಲ ಮನುಷ್ಯರಲ್ಲಿಯೂ ಇರುತ್ತದೆ. ಭಯ ಹಲವರಲ್ಲಿ ಸಹಜವಾಗಿ ಎನ್ನುವಂತಿದ್ದರೆ, ಕೆಲವರಲ್ಲಿ ಅದು ಅಸಹಜ ಎನ್ನುವಷ್ಟರ ಮಟ್ಟಿಗೆ ವ್ಯಕ್ತವಾಗುತ್ತದೆ. ಹೀಗಾದಾಗ ಅದು ಅವರಿಗೂ, ಅವರ ಮನೆಯವರಿಗೂ ಸಮಸ್ಯೆಯಾಗಿ ಪರಿಣಮಿಸುತ್ತದೆ.

ಮನಸ್ಸಿನಲ್ಲಿ ಯಾವುದಾದರೂ ಭಾವನೆಯನ್ನು ಬಹಳ ಕಾಲ ಬಲವಂತವಾಗಿ ಅದುಮಿಟ್ಟುಕೊಳ್ಳುವುದರಿಂದ ಯಾವತ್ತೋ ಅನಿರೀಕ್ಷಿತವಾಗಿ ಅದು ತೀವ್ರಸ್ವರೂಪದಲ್ಲಿ ಜ್ವಾಲಾಮುಖಿಯ ಹಾಗೆ ಸ್ಫೋಟಗೊಳ್ಳುತ್ತದೆ. ಆಗ ವ್ಯಕ್ತಿ ನಿಯಂತ್ರಣವನ್ನು ಕಳೆದುಕೊಳ್ಳುತ್ತಾನೆ. ಹಾಗಾಗದಂತೆ ಪ್ರಾರಂಭದಲ್ಲಿಯೇ ಎಚ್ಚರಿಕೆಯನ್ನು ವಹಿಸುವುದು ಬಹಳ ಜಾಣತನ. ಒಬ್ಬರೇ ಇರುವಾಗ ಕೂತಾಗ ನಿಂತಾಗ ಇದೇ ಚಿಂತೆ. ಈ ರೀತಿಯ ಆತಂಕ ತೀವ್ರವಾದಾಗ ದೈಹಿಕ ಮತ್ತು ಮಾನಸಿಕ ಆರೋಗ್ಯ ಕೆಡುವುದು ಮಾತ್ರವಲ್ಲ ಪರಸ್ಪರ ಮಾನವೀಯ ಸಂಬಂಧವನ್ನು ಕೆಡಿಸಿಬಿಡುತ್ತವೆ. ಯಾವಾಗ ಮನಸ್ಸು ಭಯದಿಂದ ಬೇಸರಗೊಳ್ಳುತ್ತದೋ, ಆಗ ದೇಹದಲ್ಲಿನ ಜೀವಕೋಶಗಳೆಲ್ಲವೂ ನಡುಗಲು ಶುರುವಿಟ್ಟುಕೊಳ್ಳುತ್ತವೆ. ಈ ಭಯವೇ ಮನುಷ್ಯನ ದೇಹದೊಳಗೆ ಕಾಯಿಲೆಯ ಬಾಗಿಲನ್ನು ತೆರೆದುಕೊಳ್ಳುವಂತೆ ಮಾಡುತ್ತದೆ. ಇದೇ ರೀತಿ ಜುಗುಪ್ಸೆ, ಭಯ, ದ್ವೇಷ, ಹೊಟ್ಟೆಕಿಚ್ಚುಗಳು ಕಾಯಿಲೆಗೆ ಬೆಂಬಲ ನೀಡುತ್ತವೆ. ಕೆಲವೊಮ್ಮೆ ಭಯವು ನಿಜವಾಗಿದ್ದರೂ ಬಹಳ ಸಲ ಭಯ ಎನ್ನುವುದು ಕೇವಲ ನಮ್ಮ ಅತಿರಂಜಿತ ಕಲ್ಪನೆಯಾಗಿರುತ್ತದೆ. ಅಪಾಯದ ಸುಳಿವು ಸಿಕ್ಕ ಕ್ಷಣಾರ್ಧದಲ್ಲಿ ಮನಸ್ಸಿನೊಳಗಿಂದ ಭಯವು ಜಾಗೃತವಾಗಿರುವುದರಿಂದ, ಅರೆಕ್ಷಣದಲ್ಲಿ ಅಪಾಯದಿಂದ ಬಚಾವಾದ ಸಂದರ್ಭಗಳು ಅದೆಷ್ಟೋ? ಸಲ ನೆನಪಿಗೆ ಬರುತ್ತವೆ. ಭಯದಿಂದ ಬದುಕಿಗೆ ಉಪಕಾರವಾದ ಘಟನೆಗಳು ಬಹುತೇಕ ಎಲ್ಲರ ಜೀವನದಲ್ಲಿಯೂ ಇರುತ್ತವೆ. ಆದರೂ ಭಯವೆಂದರೆ ಭಯವೇ!



# ವಿಶ್ವ ಕ್ಯಾನ್ಸರ್ ದಿನ



| ಮಾಧುರಿ ದೇಶಪಾಂಡೆ, ಬೆಂಗಳೂರು



ಇತ್ತೀಚಿನ ದಿನಗಳಲ್ಲಿ ಕಳೆದ 3–4 ದಶಕಗಳಲ್ಲಿ ಅತ್ಯಂತ ಹೆಚ್ಚಾಗಿ ಕಾಡುತ್ತಿರುವ ಹಾಗೂ ಕಾಣಿಸುತ್ತಿರುವ ರೋಗವೆಂದರೆ ಕ್ಯಾನ್ಸರ್ ಅಥವಾ ಲ್ಯೂಕಿಮಿಯಾ ಆಗಿದೆ. ಫೆಬ್ರವರಿ ತಿಂಗಳ 4ನೇ ತಾರೀಖಿನಂದು ವಿಶ್ವ ಕ್ಯಾನ್ಸರ್ ದಿನವನ್ನು ಆಚರಿಸಲಾಗುತ್ತದೆ. ಕ್ಯಾನ್ಸರ್ ರೋಗದ ಬಗೆಗೆ ತಿಳುವಳಿಕೆ ಮತ್ತು ಜಾಗೃತಿಯನ್ನು ಮೂಡಿಸಲು 2000ನೇ ಇಸವಿಯಿಂದ ಪ್ಯಾರಿ–ಸ್‌ನಲ್ಲಿ ನಡೆದ ವಿಶ್ವ ಕ್ಯಾನ್ಸರ್ ಸಮ್ಮಿಟ್ ನಲ್ಲಿ ಕ್ಯಾನ್ಸರ್ ವಿರುದ್ಧ ಹೋರಾಟವನ್ನು ತೀವ್ರಗೊಳಿಸಲು ಯುನಿಸ್ಕೋದ ಜನರಲ್ ಡೈರೆಕ್ಟರ್‌ರವರ ಘೋಷಣೆಯೊಂದಿಗೆ ನಿರ್ಧರಿಸಲಾಯಿತು. ಪ್ರತಿ ವರ್ಷವೂ ನಿರ್ದಿಷ್ಟ ಥೀಂನೊಂದಿಗೆ ವಿಶ್ವ ಕ್ಯಾನ್ಸರ್ ದಿನವನ್ನು ಆಚರಿಸಲಾಗುತ್ತದೆ. 2025–2027ರವರೆಗೆ "ಯುನೈಟೆಡ್ ಬೈ ಯುನೀಕ್" ಎಂಬ ಥೀಂನ ಅಡಿಯಲ್ಲಿ ಆಚರಣೆ ಮಾಡಲಾಗುತ್ತಿದೆ.

**ಕ್ಯಾನ್ಸರ್ ಕಾಯಿಲೆ ಹಿನ್ನೆಲೆ ಮತ್ತು ಗುರುತಿಸಿದ್ದು :** ಕ್ಯಾನ್ಸರ್ ಕಾಯಿಲೆಯನ್ನು 1600 ಬಿಸಿ ಯಿಂದ ಗುರುತಿಸಲಾಗಿದೆ ಇಜಿಪ್ಟ್ನ ಎಡ್ವಿನ್ ಸ್ಮಿತ್ ಪೈಪರಸ್ ಸ್ಥನ ಕ್ಯಾನ್ಸರ್ ಬಗ್ಗೆ ಹೇಳಿದ್ದಾರೆ. 460ಬಿಸಿ ಯಿಂದ 370ಬಿಸಿವರೆಗೆ ಅನೇಕ ಬಗೆಯ ಕ್ಯಾನ್ಸರ್ ಬಗೆಗೆ ಹಿಪೋಕ್ರೇಟ್ಸ್ ಹೇಳುತ್ತಾರೆ15. 16ನೇ ಶತಮಾನದಲ್ಲಿ ಮರಣದ ಕಾರಣವನ್ನು ಮೃತ ದೇಹವನ್ನು ಕತ್ತರಿಸಿ ಅಧ್ಯಯನ ಮಾಡಿ ತಿಳಿದುಕೊಂಡರು. 1761ರಲ್ಲಿ ಮೂಗಿನ ಕ್ಯಾನ್ಸರ್ಗೆ ನಶ್ಯವು (ತಂಬಾಕು) ಕಾರಣವೆಂದು ತಿಳಿಯಲಾಯಿತುಯ 1175ರಲ್ಲಿ ಚಿಮಣಿಯಲ್ಲಿ ಕೆಲಸ ಮಾಡುವವರಿಗೆ ಶ್ವಾಸಕೋಶದ ಕ್ಯಾನ್ಸರ್ ಬರುತ್ತದೆ ಎಂದು ಬ್ರಿಟಿಷ್ ಸರ್ಜನ್ ಪರ್ಸಿವಲ್ ಪಾಟ್ ಹೇಳಿದರು. ಕ್ಯಾನ್ಸರ್ ಜೀವ ಕೋಶಗಳು ಹೇಗೆ ಕಾಣುತ್ತವೆ ಎಂದು ಮೊದಲಿಗೆ 1871–874ರ ನಡುವೆ ಇಂಗ್ಲೀಷ್ ಸರ್ಜನ್ ಕ್ಯಾಂಪೆಲ್ ಡಿ ಮೋರ್ಗನ್ ಕಂಡು ಹಿಡಿದರು. ಹೀಗೆ ಮುಂದುವರೆಯುತ್ತಾ ಕ್ಯಾನ್ಸರ್ ಗೆ ಕಾರಣ ಮತ್ತು ಚಿಕಿತ್ಸೆಯು ಮುಂದುವರೆದಿದೆ.

**ಕ್ಯಾನ್ಸರ್ ಬಗೆಗೆ ತಿಳುವಳಿಕೆ :** ಕ್ಯಾನ್ಸರ್‌ನ ಬಗ್ಗೆ ಮಾಹಿತಿ ತಿಳುಳಿಕೆ ನೀಡಿ ಜನರನ್ನು ಮಾರಣಾಂತಿಕ ರೋಗದಿಂದ ರಕ್ಷಿಸುವುದು ಹಾಗೂ ರೋಗಕ್ಕೆ ಗುರಿಯಾಗದಂತೆ ತಡೆಯುವುದು ಈ ದಿನಾಚರಣೆಯ ಉದ್ದೇಶವಾಗಿದೆ. ಕ್ಯಾನ್ಸರ್ ರೋಗದಲ್ಲಿ ಜೀವಕೋಶಗಳು ವಿಶೇಷವಾಗಿ ನಿಯಂತ್ರಿಸಲು ಆಗಲಾರದಷ್ಟು ಪ್ರಮಾಣದಲ್ಲಿ ಶೀಘ್ರವಾಗಿ ಬೆಳೆಯುತ್ತವೆ ಹಾಗೂ ಅದರಿಂದ ದೇಶದಲ್ಲಿ ಗಡ್ಡೆಗಳು ಉಂಟಾಗಿ ಅನಾರೋಗ್ಯಕ್ಕೆ ತುತ್ತಾಗಿ ಪ್ರಾಣಹಾನಿಯಾಗುವಂತಹ ಮಾರಕ ಕಾಯಿಲೆಯಾಗಿದೆ. ಇದರ ಲಕ್ಷಣ ದೇಹದಲ್ಲಿ ಅಲ್ಲಲ್ಲಿ ಗಂಟು ಅಥವಾ ಗೆಡ್ಡೆಯಾಗುವುದು, ವಿಪರೀತವಾದ ರಕ್ತಸ್ರಾವ, ನಿರಂತರ ಕೆಮ್ಮು, ತೂಕ ಇಳಿಕೆ, ಹೊಟ್ಟೆಯುಬ್ಬರ ಅತೀಯಾದ ಬೇಧಿ ಅಥವಾ ಭೇದಿ ಆಗದೇ ಇರುವುದು ಮೊದಲಾದ ಲಕ್ಷಣಗಳು ಕಾಣಿಸಿಕೊಳ್ಳುತ್ತವೆ. ಇಂತಹ ಅಪಾಯಕ್ಕೆ ಕಾರಣಗಳು ಹಾನಿಕಾರಕವಾದ ತಂಬಾಕು, ಹೊಗೆ ಮೊದಲಾದವುಗಳ ಸೇವನೆ, ಸ್ಥೂಲಕಾಯ, ಸರಿಯಾಗಿ ಉತ್ತಮಗುಣ ಮಟ್ಟದ ಪೌಷ್ಟಿಕ ಆಹಾರ ಸೇವನೆ ಮಾಡದೇ ಇರುವುದು, ದೇಹಕ್ಕೆ ವ್ಯಾಯಾಮವಾಗದೇ ನಿಶ್ಚಲರಾಗಿ ಕುಳಿತಿರುವುದು (ಚಟುವಟಿಕೆ ಇಲ್ಲದಿರುವಿಕೆ), ಮದ್ಯಪಾನ, ಕುಟುಂಬದಲ್ಲಿ ಹಿರಿಯರಿಗೆ ಕ್ಯಾನ್ಸರ್ ಇರುವ ಹಿನ್ನೆಲೆ ಹಾಗೂ ಕುಟುಂಬದ ಅನುವಂಶಿಕ ಸೋಂಕಿನ ಕಾರಣದಿಂದಾಗಿ ಸಾಮಾನ್ಯವಾಗಿ ಕ್ಯಾನ್ಸರ್ ಗುರಿಯಾಗುತ್ತಾರೆ . ಇತ್ತಿಚಿನ ಪ್ಲಾಸ್ಟಿಕ್ ಬಳಕೆ ಕೂಡ ಇಂದಿನ ಕ್ಯಾನ್ಸರ್ ಹೆಚ್ಚಳದ ಪ್ರಮುಖ ಕಾರಣವಾಗಿದೆ.

**ಕ್ಯಾನ್ಸರ್ ಬಗೆಗಳು :** ಕ್ಯಾನ್ಸರ್ (ಕರ್ಕಟಕ ರೋಗ) ಶ್ವಾಸಕೋಶ, ಬಾಯಿ, ರಕ್ತ, ಗರ್ಭಕೋಶದಲ್ಲಿ ಹೆಚ್ಚಾಗಿ ಕಾಣಿಸಿಕೊಳ್ಳುತ್ತದೆ. ಚರ್ಮದ ಅಂಗಗಳಿಗೆ ಆಗುವ ಕ್ಯಾನ್ಸರ್ ಗೆ ಕಾರ್ಸಿನೋಮ, ಸಾರ್ಕೋಮ ಅಂದರೆ ಮೂಳೆ ಹಾಗೂ ಸ್ನಾಯುಗಳ ಕ್ಯಾನ್ಸರ್, ಲ್ಯೂಕಿಮೆಯಾ/ ಲಿಂಫೋಮ ರಕ್ತದ ಕ್ಯಾನ್ಸರ್ ಎಂದು ವರ್ಗೀಕರಿಸಲಾಗುತ್ತದೆ. ಸ್ಥನ ಕ್ಯಾನ್ಸರ್, ಲಂಗ್ ಕ್ಯಾನ್ಸರ್, ಬಾಯಿ ಮತ್ತು ಗಂಟಲಿನ ಕ್ಯಾನ್ಸರ್ , ಗರ್ಭಕಂಠದ ಕ್ಯಾನ್ಸರ್, ಪ್ರಾಸ್ಟೇಟ್ ಕ್ಯಾನ್ಸರ್ , ಕೊಲೆಕ್ಟರಲ್ ಕ್ಯಾನ್ಸರ್ , ಬ್ಲಡ್ ಕ್ಯಾನ್ಸರ್, ಯಕೃತ್ತಿನ (ಲಿವರ್) ಕ್ಯಾನ್ಸರ್.

ಮೊದಲಿಗೆ ಬಹಳಷ್ಟು ಚಿಕಿತ್ಸೆ ಮತ್ತು ಆರೈಕೆಯ ನಂತರವೂ ರೋಗಿಗಳು ಉಳಿಯುವುದು ಕಷ್ಟ ಸಾಧ್ಯವಾಗಿದ್ದಿತು ಏಕೆಂದರೆ ಕ್ಯಾನ್ಸರ್ ಚಿಕಿತ್ಸೆ ಅಷ್ಟಾಗಿ ಪ್ರಗತಿ ಕಂಡಿರಲಿಲ್ಲ. ಕ್ಯಾನ್ಸರ್‌ನಿಂದ ಸಾಯುವವರ ಸಂಖ್ಯೆಯೇ ಹೆಚ್ಚಾಗಿತ್ತು. ಇತ್ತೀಚಿನ ಸಂಶೋಧನೆಗಳ ಪ್ರಕಾರ ಕ್ಯಾನ್ಸರ್‌ಗೆ ಚಿಕಿತ್ಸೆಯನ್ನು ಕಂಡು ಹಿಡಿಯಲಾಗಿದೆ.

ಹಲವಾರು ಜನರು ಕ್ಯಾನ್ಸರ್ ಚಿಕಿತ್ಸೆಯಲ್ಲಿ ಪಡೆದ ನಂತರವು ಬದುಕಿ ಜೀವನ ನಡೆಸುತ್ತಿದ್ದಾರೆ.

ಕ್ಯಾನ್ಸರ್ ಚಿಕಿತ್ಸೆಗೆ ಈಗ ನಡೆಸುವ ಚಿಕಿತ್ಸಾ ವಿಧಾನಗಳು ರೇಡಿಯೇಷನ್ ಥಿರಪಿ, ಕಿಮೋ ಥೆರಪಿ, ಶಸ್ತ್ರ ಚಿಕಿತ್ಸೆ ಮತ್ತು ಟಾರ್ಗೆಟೆಡ್ ಥಿರಪಿ ಪ್ರಮುಖವಾದುದು ಇದರ ಅಡ್ಡ ಪರಿಣಾಮಗಳು ಇದ್ದರೂ ಕೂಡ ಚಿಕಿತ್ಸೆಯಿಂದ ಪ್ರಾಣ ಉಳಿಸಬಹುದಾಗಿದೆ. ಸರಿಯಾದ ಸಮಯಕ್ಕೆ ಔಷಧಿ ಸೇವಿಸಿ ವೈದ್ಯರ ಸಲಹೆ ಸೂಚನೆಗಳನ್ನು ಪಾಲಿಸಿದಲ್ಲಿ ಗುಣ ಮುಖರಾದ ರೋಗಿಗಳು ಜೀವನವನ್ನು ಆರಾಮವಾಗಿ ನಿರ್ವಹಿಸುತ್ತಿದ್ದಾರೆ.



ಮೊದಲಿನಿಂದಲೂ ಮನೆ–ಮಠ ಮಾರಿ ಕೊಂಡೇ ಕ್ಯಾನ್ಸರ್ ಗೆ ಚಿಕಿತ್ಸೆ ನೀಡಲಾಗುತ್ತಿತ್ತು, ಇಂದಿನ ದುಬಾರಿ ದಿನಮಾನದಲ್ಲಿ ಕ್ಯಾನ್ಸರ್ ಚಿಕಿತ್ಸೆಯು ಜನಸಾಮಾನ್ಯರಿಗೂ ಹರೆಯಾಗದಿರಲಿ ಎಂಬ ಕಾರಣಕ್ಕಾಗಿ ಕ್ಯಾನ್ಸರ್ ಔಷಧಿ ಹಾಗೂ ಚಿಕಿತ್ಸೆಯನ್ನು ಕೇಂದ್ರ ಸರಕಾರವು ಕಡಿಮೆ ದರದಲ್ಲಿ ಜನೌಷಧಿ ಕೇಂದ್ರಗಳಲ್ಲಿ ನೀಡುತ್ತಿರುವ ಜೊತೆಗೆ 2026ರ ಬಜೆಟ್ನಲ್ಲಿ ಕ್ಯಾನ್ಸರ್ ಔಷಧಿಗಳ ದರವನ್ನು ತೆರಿಗೆ ಮುಕ್ತ ಹಾಗೂ ಕಡಿಎಮ ದರದಲ್ಲಿ ದೊರೆಯುವಂತೆ ಮಾಡಿದೆ. ಸರಕಾರಿ ಆಸ್ಪತ್ರೆಗಳಲ್ಲಿ ಉತ್ತಮ ಗುಣಮಟ್ಟದ ಚಿಕಿತ್ಸೆಯನ್ನು ದೊರಕುವಂತೆ ಮಾಡಿದ್ದಾರೆ. ಕ್ಯಾನ್ಸರ್ ಗೆ ಕಾರಣಗಳನ್ನು ತಿಳಿದು ಅದನ್ನು ತಡೆಗಟ್ಟುವ ಕ್ರಮದಲ್ಲಿ ಕೈ ಜೋಡಿಸಿದಾಗ ಈ ದಿನಾಚರಣೆ ಸಾರ್ಥಕತೆ ಪಡೆಯುತ್ತದೆ.

# ಶಿಕ್ಷಣ ಪದ್ಧತಿ- ಶಾಲೆಗಳ ಪ್ರಸ್ತುತತೆ



| ವೀಣಾ ಹೇಮಂತ್‌ಗೌಡ ಪಾಟೀಲ್

ಎಲ್ಲವೂ ಆನ್ಲೈನ್ ನಲ್ಲಿ ದೊರೆಯುತ್ತಿರುವ ಇಂದಿನ ದಿನಗಳಲ್ಲಿ ಶಿಕ್ಷಣ ಕೂಡ ಆನ್ಲೈನ್ ನಲ್ಲಿ ಕಲಿಯುವ ದಿನಗಳು ಈಗಾಗಲೇ ಬಂದಿದ್ದು ಇನ್ನೇನು ಪೂರ್ಣ ಪ್ರಮಾಣದಲ್ಲಿ ದೊರೆಯುವ ದಿನಗಳು ದೂರವಿಲ್ಲ.... ಹಾಗಾದರೆ ಶಾಲೆಗಳ ಔಚಿತ್ಯವೇನು? ಎಂದು ನೀವು ಕೇಳಬಹುದು ಅಲ್ಲವೇ ? ಇದರ ಮುನ್ನ ನಮ್ಮ ದೇಶದಲ್ಲಿ ಶಿಕ್ಷಣ ಪದ್ಧತಿ ನಡೆದು ಬಂದ ರೀತಿಯನ್ನು ಅವಲೋಕಿಸೋಣ.

ನಮ್ಮ ಭರತ ಖಂಡದಲ್ಲಿ ಪ್ರಾಚೀನ ಕಾಲದಿಂದಲೂ ಶಿಕ್ಷಣಕ್ಕೆ ಅತಿ ಹೆಚ್ಚಿನ ಮಹತ್ವವನ್ನು ನೀಡಲಾಗುತ್ತಿದ್ದು ಶಿಕ್ಷಣದಲ್ಲಿ ಎರಡು ವಿಧಗಳನ್ನು ನಾವು ಕಾಣಬಹುದಾಗಿತ್ತು. ಒಂದು ಕೌಟುಂಬಿಕ ಶಿಕ್ಷಣವಾದರೆ ಮತ್ತೊಂದು ಗುರುಕುಲ ಪದ್ಧತಿಯ ಶಿಕ್ಷಣ.

ಕೌಟುಂಬಿಕ ಶಿಕ್ಷಣದಲ್ಲಿ ಪ್ರತಿಯೊಂದು ಮಗುವಿಗೂ ಆ ಮನೆಯ ರೀತಿ–ನೀತಿ, ಸಂಪ್ರದಾಯಗಳ ಜೊತೆ ಜೊತೆಗೆ ಸಾಮಾಜಿಕ ನಿಯಮಗಳನ್ನು ಪಾಲಿಸುವ ಕುರಿತು ಇಡೀ ಕುಟುಂಬವೇ ಗುರುವಾಗಿ ಪಾಠ ಕಲಿಸುತ್ತಿತ್ತು.

ಇಲ್ಲಿ ಕುಟುಂಬದ ಹಿರಿಯರಾಗಲಿ, ಪಾಲಕರಾಗಲಿ, ತಂದೆ–ತಾಯಿಗಳಾಗಲಿ ಕೈಯಲ್ಲಿ ಬಳಪ ಹಿಡಿಸಿ ಪಾಟಿಯ ಮೇಲೆ ಬರೆಸಿ ಇಲ್ಲವೇ ಉರು ಹೊಡೆಸಿ ಪಾಠಗಳನ್ನು ಹೇಳಿಕೊಡಲಿಲ್ಲ.... ಬದಲಾಗಿ ತಮ್ಮ ನಡೆ ನುಡಿಗಳ ಮೂಲಕ ತಮ್ಮ ಮಕ್ಕಳಿಗೆ ಕೌಟುಂಬಿಕ, ಧಾರ್ಮಿಕ, ಸಾಮಾಜಿಕ ಬದುಕಿನ ಪರಿಚಯವನ್ನು ಮಾಡಿಕೊಟ್ಟರು. ಇದರ ಜೊತೆ ಜೊತೆಗೆ ಗಂಡು ಮಕ್ಕಳಿಗೆ ಕುಟುಂಬದ ಕುಲ ಕಸುಬನ್ನು ಹಾಗೂ ಹೆಣ್ಣು ಮಕ್ಕಳಿಗೆ ಮನೆ ವಾರ್ತೆಯನ್ನು ಹೇಳಿಕೊಟ್ಟರು.

ಒಕ್ಕಲುತನವೇ ಮೂಲ ಉದ್ಯೋಗವಾಗಿದ್ದ ನಮ್ಮ ಭಾರತ ದೇಶದಲ್ಲಿ ಕೃಷಿಗೆ ಸಂಬಂಧಿಸಿದ ಉದ್ಯೋಗ ಹಾಗೂ ಅದರ ಉಪ ಕಸುಬುಗಳಾದ ಕುಂಬಾರ, ಕಮ್ಮಾರ, ಬಡಿಗ, ಅಕ್ಕಸಾಲಿ, ಉಪ್ಪಾರ, ಚಮ್ಮಾರ, ಮ್ಯಾದಾರ ಹೀಗೆ ಹತ್ತು ಹಲವು ಉದ್ಯೋಗಗಳನ್ನು ಕೈಗೊಂಡಿದ್ದು ಅದನ್ನೇ ತಮ್ಮ ಮಕ್ಕಳಿಗೆ ಕಲಿಸುತ್ತಿದ್ದರು.

ಇನ್ನು ರಾಜ ಮಹಾರಾಜರು, ಪಂಡಿತರು, ಜ್ಞಾನಿಗಳು, ಬ್ರಾಹ್ಮಣರು 64 ವಿದ್ಯೆಗಳಲ್ಲಿ ಕೆಲವಷ್ಟನ್ನಾದರೂ ಗುರುಕುಲಗಳಲ್ಲಿ ಇದ್ದು ಕಲಿಯುತ್ತಿದ್ದರು.

ಊರಿನಿಂದ ತುಸು ದೂರ ಯಾವುದಾದರೂ ಕಾಡಿನ ಪ್ರಶಾಂತ ವಾತಾವರಣದಲ್ಲಿ ನದಿಯ ಪಕ್ಕದಲ್ಲಿ ತಮ್ಮ ಆಶ್ರಮವನ್ನು ಕಟ್ಟಿಕೊಂಡು ನೆಲೆಸಿರುತ್ತಿದ್ದ ಗುರುಗಳಿಗೆ ಋಷಿಮುನಿಗಳಿಗೆ ರಾಜ ಮಹಾರಾಜರುಗಳು ಗುರುಕುಲವನ್ನು ನಡೆಸಲು ತಕ್ಕಮಟ್ಟಿಗೆ ಅನುಕೂಲ ಮಾಡಿಕೊಡುತ್ತಿದ್ದರು. ಇನ್ನು ಗುರುಕುಲಕ್ಕೆ ಬರುವ ವಿದ್ಯಾರ್ಥಿಗಳು ರಾಜನ ಮಗನಾದರೂ ಸರಿಯೇ ಸೈನಿಕನ ಇಲ್ಲವೇ ಬಡ ಬ್ರಾಹ್ಮಣನ ಮಗನಾದರೂ ಎಲ್ಲರಿಗೂ ಒಂದೇ ನಿಯಮ.

ಪ್ರತಿದಿನ ಆಶ್ರಮದ ನಿಯಮದಂತೆ ದೈನಂದಿನ ಕೆಲಸ ಕಾರ್ಯಗಳನ್ನು ನಿರ್ವಹಿಸಿ ಅದರ ಜೊತೆಗೆ ಶಾಸ್ತ್ರೋಕ್ತವಾಗಿ ವಿವಿಧ ವಿದ್ಯೆಗಳನ್ನು ಕಲಿಯುವುದು ಅತ್ಯವಶ್ಯಕವಾಗಿತ್ತು.

ವಿದ್ಯಾರ್ಥಿಗಳ ಆಸಕ್ತಿಗೆ ಅನುಗುಣವಾಗಿ ಅವರಿಗೆ ವಿಜ್ಞಾನ, ಗಣಿತ, ಸಮಾಜಶಾಸ್ತ್ರ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ, ವ್ಯಾಕರಣ, ಛಂದಸ್ಸು, ಕಾವ್ಯ, ಪುರಾಣ ಮತ್ತಿತರ ವಿದ್ಯೆಗಳನ್ನು ಕಲಿಸಿದರೆ ರಾಜ ಮಹಾರಾಜರ, ಮಂತ್ರಿಗಳ, ಸೇನಾಪತಿಗಳ ಹಾಗೂ ಸೈನಿಕರ ಮಕ್ಕಳು

ಶಸ್ತ್ರಾಸ್ತ್ರ ವಿದ್ಯೆಗಳಾದ ಧನುರ್ವಿದ್ಯೆ, ಕತ್ತಿ ವರಸೆ, ಭಲ್ಲೆ ಹಾಗೂ ಮತ್ತಿತರ ಆಯುಧಗಳ ಬಳಕೆಯ ಜೊತೆಗೆ ಕಾನೂನು ರಾಜಕೀಯ ನೀತಿಶಾಸ್ತ್ರ ಮುಂತಾದ ರಾಜ್ಯದ ಆಡಳಿತಕ್ಕೆ ಅತ್ಯವಶ್ಯಕವಾದ ವಿದ್ಯೆಗಳನ್ನು ಕಲಿಯುತ್ತಿದ್ದರು.

ಗುರುಗಳು ಹೇಳಿದ ಮಾತುಗಳನ್ನು ವೇದ ವಾಕ್ಯದಂತೆ ಭಾವಿಸುವ, ಆಶ್ರಮದ ಕಟ್ಟುನಿಟ್ಟಿನ ನಿಯಮಗಳನ್ನು ಪಾಲಿಸುವ ಎಲ್ಲರೊಂದಿಗೆ ಹೊಂದಾಣಿಕೆಯ ಬದುಕನ್ನು ನಡೆಸುವ ಈ ಗುರುಕುಲ ಶಿಕ್ಷಣ ಪದ್ಧತಿಯಲ್ಲಿ ಸುಮಾರು 6 ರಿಂದ 12 ವರ್ಷಗಳ ಕಾಲ ಶಾಸ್ತ್ರ ವಿದ್ಯೆಯ ಜೊತೆಗೆ ವೃತ್ತಿ ಶಿಕ್ಷಣವು ಕೂಡ ದೊರೆಯುತ್ತಿತ್ತು ಎಂದರೆ ತಪ್ಪಿಲ್ಲ. ಇದರ ಜೊತೆಗೆ ಕೋಶವನ್ನು ಓದುವ ಹಾಗೂ ದೇಶವನ್ನು ಸುತ್ತುವ ಕೆಲಸವನ್ನು ಅಂತಿಮವಾಗಿ ವಿದ್ಯಾರ್ಥಿಯು ಮಾಡುವ ಮೂಲಕ ಭೌಗೋಳಿಕ, ರಾಜಕೀಯ, ಸಾಮಾಜಿಕ, ಸಾಂಸ್ಕೃತಿಕ ವ್ಯತ್ಯಾಸಗಳನ್ನು ಅರಿಯುವ ಅವಕಾಶ ಕೂಡ ಅವರಿಗೆ ದೊರೆಯುತ್ತಿತ್ತು.



ನಂತರದ ಕಳೆದೆರಡು ಶತಮಾನಗಳವರೆಗೆ ಒಂದು ನಿರ್ದಿಷ್ಟ ಪ್ರದೇಶದಲ್ಲಿ ಅದರಲ್ಲೂ ಮಠಗಳಲ್ಲಿ, ಅಗ್ರಹಾರಗಳಲ್ಲಿ ಆಯಾ ಊರಿನ ಪಂಡಿತರು ಜ್ಞಾನಿಗಳು ಮಕ್ಕಳಿಗೆ ಶಿಕ್ಷಣ ನೀಡುವ ಪದ್ಧತಿ ಚಾಲ್ತಿಯಲ್ಲಿತ್ತು. ಇಲ್ಲೂ ಕೂಡ ಅದೇ ಕಟ್ಟುನಿಟ್ಟಿನ ನಿಯಮಗಳಿದ್ದರೂ ಮಕ್ಕಳು ತಮ್ಮ ಮನೆಯ ವಾತಾವರಣದಲ್ಲಿ ಮುಂಜಾನೆ ಮತ್ತು ರಾತ್ರಿಗಳನ್ನು ಕಳೆಯುತ್ತಿದ್ದರು. ಮುಂಜಾನೆಯಿಂದ ಸಾಯಂಕಾಲದ ವರೆಗೆ ಶಿಕ್ಷಣ ನಂತರ ಕುಟುಂಬದ ಕೆಲಸ ಕಾರ್ಯಗಳನ್ನು ನಿರ್ವಹಿಸುತ್ತಾ ಪಾಲಕರೊಂದಿಗೆ ವಾಸ ಇರುತ್ತಿತ್ತು.

ಅದರ ನಂತರ ಕಳೆದ ಎರಡು ಶತಮಾನಗಳಿಂದ ಆರಂಭವಾಗಿದ್ದು ಇಂದಿಗೂ ಚಾಲ್ತಿಯಲ್ಲಿ ಇರುವುದು ಇಂದಿನ ಪದ್ಧತಿ. ಪೂರ್ವ ಪ್ರಾಥಮಿಕ, ಪ್ರಾಥಮಿಕ, ಮಾಧ್ಯಮಿಕ ಪ್ರೌಢಶಾಲೆ ಕಾಲೇಜು ಸ್ನಾತಕೋತ್ತರ ಹೀಗೆ ವಿವಿಧ ಹಂತಗಳಲ್ಲಿ ಶಿಕ್ಷಣವನ್ನು ನೀಡುವ ಪದ್ಧತಿ ಆರಂಭವಾಯಿತು. ಮೊದಲ ಹತ್ತು ವರ್ಷಗಳವರೆಗೆ ಸಾಂಪ್ರದಾಯಿಕವಾಗಿ ಆಯಾ ಪ್ರದೇಶದ ಆಡಳಿತ ಭಾಷೆ, ವಿಜ್ಞಾನ, ಗಣಿತ, ಸಮಾಜಶಾಸ್ತ್ರ ಗಳ ಜೊತೆ ಜೊತೆಗೆ ರಾಷ್ಟ್ರೀಯ ಭಾಷೆ ಎಂದು ಪರಿಗಣಿತವಾಗಿದ್ದ ಹಿಂದಿ ಹಾಗೂ ಇಂಗ್ಲಿಷ್ ಭಾಷೆಗಳನ್ನು ಪರಿಚಯಿಸಲಾಯಿತು.

ಭಾಷೆಗಳ ಪಟ್ಟಿಯಲ್ಲಿ ನಮ್ಮ ಕರ್ನಾಟಕದಲ್ಲಿ ಕನ್ನಡ ನಮ್ಮ ಮಾತೃಭಾಷೆಯಾಗಿದ್ದು ಆ ಭಾಷೆಯ ಕಥೆ,ಕಾವ್ಯ, ಕವನ, ಗದ್ಯ, ಪದ್ಯ, ಹಳಗನ್ನಡ, ನಡುಗನ್ನಡ ನವ್ಯ ಸಾಹಿತ್ಯ, ನಾಟಕ ಇತಿಹಾಸ ವ್ಯಾಕರಣ, ಕವಿ ಕರ್ತೃಗಳ ಪರಿಚಯ, ಬದುಕು ಬರಹ ಇವುಗಳ ಕುರಿತು ಮಕ್ಕಳಿಗೆ ಆಯಾ ತರಗತಿಗಳಿಗೆ ಅನುಸಾರವಾಗಿ ಪಠ್ಯವನ್ನು ಇಡಲಾಗುತ್ತದೆ.

ಗಣಿತದಲ್ಲಿ ಅಂಕಿಗಳನ್ನು ಬರೆಯುವ, ಓದುವ ಎಣಿಸುವ ಹೇಳುವುದರಿಂದ ಆರಂಭಿಸಿ ಕೂಡಿಸುವ ಕಳೆಯುವಾಗ ಗುಣಾಕಾರ ಮಾಡುವ ಭಾಗಿಸುವ ಲೆಕ್ಕಗಳನ್ನು ಇದರ ಮುಂದಿನ ಭಾಗವಾಗಿ ಗಣಿತದ ಮತ್ತೆ ವಿಷಯಗಳಾದ ದಶಮಾಂಶ ಪದ್ಧತಿ ಭಿನ್ನರಾಶಿ ಸಮೀಕರಗಳು ಪ್ರಮೇಯಗಳನ್ನು ಹಂತ ಹಂತವಾಗಿ ಕಲಿಸುವ ಯೋಜನೆಗಳು ರೂಪುಗೊಂಡವು. ಗಣಿತದಲ್ಲಿ ಅಂಕಗಣಿತ ಬೀಜಗಣಿತ ಹಾಗೂ ರೇಖಾಗಣಿತ ಎಂಬ ಮೂರು ವಿಭಾಗಗಳನ್ನು ಮಾಡಿದರು.

ಸಮಾಜಶಾಸ್ತ್ರದಲ್ಲಿ ಇತಿಹಾಸ,ಭೂಗೋಳ ಹಾಗೂ ನಮ್ಮ ಸಂವಿಧಾನದ ನೀತಿಗಳನ್ನು ಅರಿಯುವ ಪೌರನೀತಿ ಎಂಬ ಮೂರು ವಿಭಾಗಗಳನ್ನು ಮಾಡಿ ಭೂಗೋಳದಲ್ಲಿ ಭೂಮಿಯ ಸಂರಚನೆಯ ಕುರಿತು ವೈವಿಧ್ಯಮಯ ಪ್ರದೇಶಗಳ ಕುರಿತು ಪ್ರಸ್ಥಭೂಮಿ ಮರುಭೂಮಿ ಕಾಡು ಹುಲ್ಲುಗಾವಲು ಮುಂತಾದ ಪ್ರಾದೇಶಿಕ ವೈವಿಧ್ಯತೆಗಳನ್ನು ಪಠ್ಯದ ಭಾಗವಾಗಿಸಿದರು.

ಹೀಗೆ ಎಲ್ಲ ವಿಷಯಗಳು ಕುರಿತು ನುರಿತ ಭಾಷಾ ತಜ್ಞರನ್ನು, ವಿದ್ವಾಂಸರನ್ನು ಸಂಶೋಧಕರನ್ನು ಹಾಗೂ ಬುದ್ಧಿಜೀವಿಗಳನ್ನು ಒಳಗೊಂಡ ಸಮಿತಿಗಳನ್ನು ರಚಿಸಿ ಆಯಾ ತರಗತಿಗಳಿಗೆ ಅನುಗುಣವಾಗಿ ಪಠ್ಯಗಳನ್ನು ಮೂಲಭೂತ ವಿಷಯಗಳ ಪಟ್ಟಿಯಲ್ಲಿ ಅಡಕಗೊಳಿಸಿ ವಯೋಮಿತಿಗೆ ತಕ್ಕಂತೆ ಅವುಗಳನ್ನು ಮಕ್ಕಳ ಕಲಿಕೆಯಲ್ಲಿ ಅಳವಡಿಸಿದರು.

ಇದೀಗ ಆನ್ಲೈನ್ ನಲ್ಲಿ ಕೂಡ ವೈವಿಧ್ಯಮಯ ಕೋರ್ಸುಗಳ ವಿಷಯಗಳ ಕುರಿತು ನಾವು ಕಲಿಯಬಹುದು. ಈ ಎಲ್ಲಾ ಕಲಿಕೆಗೆ ಮೂಲ ನಮ್ಮ ಆಸಕ್ತಿ ಆಗಿರಬೇಕು. ಇಂತಹ ಕಲಿಕೆಯನ್ನು ಕಲಿಸಲು ಶಾಲೆ ಪುಸ್ತಕ ಗುರುಗಳು ಬೇಕಾಗಿಲ್ಲ. ಮುಂದಿನ ಕೆಲವೇ ದಿನಗಳಲ್ಲಿ ಭೌತಿಕವಾಗಿ ಶಾಲೆಗಳ ಅಸ್ತಿತ್ವ ಇರುತ್ತದೆಯೇ ಎಂಬ ಪ್ರಶ್ನೆ ಕೇಳಿದರೆ ಬಹುಶಹ ಇಲ್ಲ ಎಂದು ಹೇಳಬಹುದು. ಎಲ್ಲರೂ ತಮ್ಮ ತಮ್ಮ ಮನೆಗಳಲ್ಲಿ ತಮ್ಮದೇ ಆದ ಅನುಕೂಲಕರ ವಾತಾವರಣದಲ್ಲಿ ಕುಳಿತು ನಿಂತು ಮಲಗಿ ಆನ್ಲೈನ್ ನಲ್ಲಿ ಶಿಕ್ಷಕರ ಪಾಠಗಳನ್ನು ಕೇಳಿ ಪರೀಕ್ಷೆಗಳನ್ನು ಬರೆದು ಪದವಿಗಳಿಸಬಹುದಾದ ದಿನಗಳು ಮುಂದೊಂದು ದಿನ ಬರಬಹುದು.

ಹಾಗಾದರೆ ಶಿಕ್ಷಣ ಎಷ್ಟರಮಟ್ಟಿಗೆ ಪ್ರಸ್ತುತ ? ಶಾಲೆಗಳ ಅವಶ್ಯಕತೆ ಇದೆಯೇ ? ಎಂಬ ಪ್ರಶ್ನೆ ಉದ್ಭವಿಸಬಹುದು

ಖಂಡಿತವಾಗಿಯೂ ಶಾಲೆಗಳ ಅವಶ್ಯಕತೆ ಇದೆ. ಮಕ್ಕಳು ಚಿಕ್ಕಂದಿನಿಂದಲೂ ಒಂದು ಸಾಂಘಿಕ ವ್ಯವಸ್ಥೆಯನ್ನು, ಸಾಮಾಜಿಕ ಜೀವನವನ್ನು, ಬದುಕಿನಲ್ಲಿ ಮೌಲ್ಯಗಳ ಅಳವಡಿಕೆಯ ಪಾಠವನ್ನು ಕಲಿಯಲು ಶಿಕ್ಷಣ ಬೇಕು. ಆದರೆ ಅಂತಹ ಶಿಕ್ಷಣ ದೊರೆಯುವುದು ಕೇವಲ ಶಾಲೆಗಳಲ್ಲಿ ಮಾತ್ರ.

ಸತ್ಯ,ಧರ್ಮ,ನ್ಯಾಯ, ನೀತಿ, ಕರುಣೆ, ದಯೆ,ಪ್ರೀತಿ, ವಿಶ್ವಾಸ, ನಂಬಿಕೆ, ದೇಶಪ್ರೇಮ, ದೇಶದ ಕುರಿತು ಅಭಿಮಾನ, ರಾಷ್ಟ್ರೀಯ ಜಾಗೃತಿ ಸಂವಿಧಾನದ ಪರಿಕಲ್ಪನೆ ನಮ್ಮ ರಾಷ್ಟ್ರೀಯ ನಾಯಕರ ಕುರಿತ ಕಥೆಗಳು, ಭಾವೈಕ್ಯತೆಯನ್ನು ಎತ್ತಿ ಹಿಡಿಯುವ ಬದುಕಿನ ಪಾಠಗಳು, ಆಟಗಳು ಆಟದ ಮೂಲಕ ಒಪ್ಪಿಕೊಳ್ಳಲು ಮಕ್ಕಳ ಚಾರಿತ್ರ್ಯ ನಿರ್ಮಾಣಕ್ಕೆ ಅತ್ಯವಶ್ಯಕವಾದ ಎಲ್ಲಾ ಬಗೆಯ ಉತ್ತಮ ಮೌಲ್ಯಗಳನ್ನು ಮಕ್ಕಳಲ್ಲಿ ತುಂಬಲು ನಮಗೆ ಶಾಲೆಗಳು ಅತ್ಯವಶ್ಯಕ.

ಶಿಕ್ಷಣವನ್ನು ಬೇಕಾದರೆ ಆನ್ಲೈನ್ ನಲ್ಲಿ ಪಡೆಯಬಹುದು... ಮಕ್ಕಳಲ್ಲಿ ವ್ಯಕ್ತಿತ್ವದ ವಿಕಸನವನ್ನು ಚಾರಿತ್ರ್ಯ ನಿರ್ಮಾಣವನ್ನು ಶಿಕ್ಷಣದಂತೆ ಕೇವಲ ಒಂದು ಇಲ್ಲವೇ ಎರಡು ವರ್ಷಗಳಲ್ಲಿ ಕಲಿಸಿ ಮುಗಿಸಲು ಸಾಧ್ಯವಿಲ್ಲ ಅದೊಂದು ನಿರಂತರ ಪ್ರಕ್ರಿಯೆ.... ಅದಕ್ಕೆ ತನ್ನದೇ ಆದ ಗತಿಯಿದ್ದು ಆ ಗತಿಯಲ್ಲಿಯೇ ಮಕ್ಕಳು ತಮ್ಮ ಬದುಕಿನಲ್ಲಿ ಶಾಲೆಗಳ ಮೂಲಕ, ಶಿಕ್ಷಕರ ಮೂಲಕ, ಸಹಪಾಠಿಗಳ ಜೊತೆಗೆ, ಹಿರಿಕಿರಿಯ ವಿದ್ಯಾರ್ಥಿಗಳ ಜೊತೆಯಲ್ಲಿ ಶಾಲೆ ಎಂಬ ದೊಡ್ಡ ಆವರಣದ ಆಟದ ಮೈದಾನದಲ್ಲಿ, ನಾಲ್ಕು ಗೋಡೆಗಳ ನಡುವಿನ ತರಗತಿಗಳಲ್ಲಿ ನಿರಂತರವಾಗಿ ಕಲಿಯಬೇಕು ಇದಕ್ಕೆ ಶಾಲೆ ಅತ್ಯಂತ ಸೂಕ್ತವಾದ ಸ್ಥಳ.

ಜನನೀ ಜನ್ಮ ಭೂಮಿಶ್ಚ.. ಸ್ವರ್ಗಾದಪಿ ಗರೀಯಸಿ ಎಂಬ ಪರಿಕಲ್ಪನೆಯನ್ನು ನಮಗೆ ಕಟ್ಟಿಕೊಡುವುದು ಶಾಲೆ ಎಂಬ ಪವಿತ್ರ ದೇಗುಲ. ನಾಗರಿಕರಾಗಿ ನಮ್ಮ ದೇಶದ ಸಂವಿಧಾನದ ಮೂಲಕ ನಾವೆಲ್ಲರೂ ಒಂದು ಎಂಬ ವಿವಿಧತೆಯಲ್ಲಿ ಏಕತೆಯ ಪಾಠವನ್ನು ಹೇಳಿಕೊಡುವುದು ಶಾಲೆಯೇ. ಸಿರಿವಂತರ ಮಗನಾಗಲಿ ಗುರು ಪುತ್ರನಾಗಲಿ ಸಮಾಜದ ಅತ್ಯಂತ ಕಟ್ಟ ಕಡೆಯ ವ್ಯಕ್ತಿಯ ಮಗನಾಗಲಿ ಶಾಲೆಯ ವಾತಾವರಣದಲ್ಲಿ ಏಕರೂಪದ ಸಮವಸ್ತ್ರವನ್ನು ಧರಿಸಿ ಮೇಲು–ಕೀಳು, ಬಡವ–ಬಲ್ಲಿದ, ವರ್ಗ–ವರ್ಣ ಎಂಬ ಯಾವುದೇ ಭೇದಗಳಿಲ್ಲದೆ ಕಲಿಯುವ ವಾತಾವರಣವನ್ನು ಕಲ್ಪಿಸಿ ಕೊಡುವುದು ಶಾಲೆ ಎಂಬ ಪವಿತ್ರ ದೇಗುಲ.



ಶಾಲೆಗಳೇ ಮಕ್ಕಳ ವ್ಯಕ್ತಿತ್ವ ವಿಕಸನದ ಅದ್ಭುತವಾದ ಕಾರ್ಯ ಆಧಾರಗಳು ಅಂತಹ ಶಾಲೆಗಳಲ್ಲಿ ಮಕ್ಕಳು ತಮ್ಮ ಬದುಕಿನಲ್ಲಿ ಮುಂದೆ ಹೇಗೆ ಇರಬೇಕು ಎಂಬುದರ ಪ್ರಾಥಮಿಕ ಪಾಠವನ್ನು ಕಲಿಯುತ್ತಾ ಮುಂದಿನ ಬದುಕನ್ನು ರೂಪಿಸಿಕೊಳ್ಳಲು ಬೇಕಾದ ಒಂದೊಂದೇ ಹಂತದ ನೈತಿಕ, ಮೌಲಿಕ, ಸಾಮಾಜಿಕ ಐತಿಹಾಸಿಕ ಸಾಂಸ್ಕೃತಿಕ ಜೀವನ ಪಠ್ಯಗಳನ್ನು ಪ್ರಾಯೋಗಿಕವಾಗಿ ತಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳುತ್ತಾ ಸಾಗುತ್ತಾರೆ. ಧೈರ್ಯ, ಸಾಹಸ, ರಾಷ್ಟ್ರೀಯವಾದ, ಸೇವಾ ಮನೋಭಾವ, ಶಿಸ್ತು, ಸಂಯಮ, ಸಮಯ ಪ್ರಜ್ಞೆಯುವ ಮಕ್ಕಳ ಬದುಕಿನಲ್ಲಿ ಮೂಡುವುದು ಶಾಲೆಯ ಮೂಲಕವೇ ಮುಂದೆ ಮಕ್ಕಳು ತಮ್ಮ ಬದುಕಿನಲ್ಲಿ ವಿವಿಧ ಕ್ಷೇತ್ರಗಳಲ್ಲಿ ರಂಗಗಳಲ್ಲಿ ಮಿಂಚಿ ಯಶಸ್ವಿ ಬದುಕನ್ನು ಕಟ್ಟಿಕೊಳ್ಳಬಹುದು.. ಆದರೆ ಅದೆಲ್ಲಕ್ಕೂ ಮುಖ್ಯವಾದ ಮೂಲಭೂತವಾದ ಅಡಿಪಾಯವನ್ನು ಶಾಲೆಗಳು ಹಾಕಿಕೊಡುತ್ತವೆ. ಸೋಲು ಗೆಲುವಿನ ನೋವು ನಲುವಿನ ನೂರಾರು ಪಾಠಗಳನ್ನು ಕೂಡ ಶಾಲೆಗಳು ಕಲಿಸಿಕೊಡುತ್ತವೆ.

ಹೀಗಾಗಿ ಮಕ್ಕಳ ಚಾರಿತ್ರ್ಯ ನಿರ್ಮಾಣದಲ್ಲಿ ವ್ಯಕ್ತಿತ್ವ ವಿಕಸನದಲ್ಲಿ ಶಾಲೆಗಳು ಬೇಕೇ ಬೇಕು ಅಂತಹ ಶಾಲೆಗಳ ಅಸ್ತಿತ್ವವನ್ನು ಗುರುತಿಸುವ ಸಂವೇದನಾಶೀಲ ಸಶಕ್ತ ಸಮಾಜದ ಹರಿಕಾರರು ನಾವಾಗಬೇಕು.

ಆ ಮೂಲಕ ಶಿಕ್ಷಣ ಪದ್ಧತಿಯನ್ನು ಹಿಂದೆಂದಿಗಿಂತಲೂ ಹೆಚ್ಚಿನ ಪ್ರಮಾಣದಲ್ಲಿ ಉನ್ನತೀಕರಿಸಬೇಕಾದ ಅವಶ್ಯಕತೆ ಇದ್ದು ಈ ನಿಟ್ಟಿನಲ್ಲಿ ಸಮಾಜದ ನಾವೆಲ್ಲರೂ ಒಂದುಗೂಡಿ ಕಾರ್ಯ ನಿರ್ವಹಿಸೋಣ ಎಂಬ ಆಶಯದೊಂದಿಗೆ

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,